ಸಂಪುಟ: 14 Volume ಸಂಚಿಕೆ: 101 Issue ಪುಟಗಳು 08 Pages | ಶನಿವಾರ 25 ಜುಲೈ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೆಂಗಳೂರು | ಹುಬ್ಬಳ್ಳಿ | ಬೀದರ ಆವೃತ್ತಿ: ಕಲ್ಬುರ್ಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಬಳ್ಳಾರಿ, ಬಾಗಲಕೋಟೆ, ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಜೀವನದಲ್ಲಿ ಬುದ್ಧಿವಂತಿಕೆಯೊಂದೇ ಸಾಲದು. ತಾಳ್ಮೆ ಮತ್ತು ವಿವೇಚನೆ ಕೂಡ ಮುಖ್ಯ.
–ವಿನೋಬಾ ಭಾವೆ



ಪ್ರದೇಶ ಕಾಂಗ್ರೆಸ್ ಸಮಿತಿಯ ಭಾರತ್ ಜೋಡೋ ಭವನದಲ್ಲಿ ಇಂದು ನಡೆದ ಸಂಘಟನಾ ಸೃಜನ್ ಅಭಿಯಾನದ ವೀಕ್ಷಕರ ಸಭೆಯಲ್ಲಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಭಾಗವಹಿಸಿದ್ದರು. ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ, ರಾಜ್ಯ ಉಸ್ತುವಾರಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೆವಾಲ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಕೆಪಿಸಿಸಿ ಅಧ್ಯಕ್ಷರಾದ ಬಿ.ಕೆ. ಹರಿಪ್ರಸಾದ್ ಅವರು ಸೇರಿದಂತೆ ಪಕ್ಷದ ಹಲವರು ಉಪಸ್ಥಿತರಿದ್ದರು.

## ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಖಂಡಿಸಿ ಪ್ರತಿಭಟನೆ 27ಕ್ಕೆ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ದೇಶದ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ರ‍್ಕಾರದ ಆಡಳಿತದಲ್ಲಿ ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣ ಸಂಭವಿಸಿರುವುದು ಹಾಗೂ ದೆಹಲಿಯ ಜಂತರ್ ಮಂತರ್‌ನಲ್ಲಿ ಪ್ರತಿಭಟನೆ ನಡೆಸುತ್ತಿದ್ದ ವಿದ್ಯರ‍್ಥಿಗಳ ಮೇಲೆ ಲಾಠಿಚರ‍್ಜ್ ನಡೆಸಿರುವುದನ್ನು ಖಂಡಿಸಿ ಕರ‍್ನಾಟಕ ದಲಿತ ಸಂರ‍್ಷ ಸಮಿತಿ (ಅಂಬೇಡ್ಕರ್ ವಾದ) ಬೀದರ್ ಜಿಲ್ಲಾ ಸಮಿತಿ ಹಾಗೂ ವಿದ್ಯರ‍್ಥಿ ಒಕ್ಕೂಟ ಜಿಲ್ಲಾ ಸಮಿತಿ ವತಿಯಿಂದ ಜುಲೈ 27ರಂದು ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ.



ನಗರದ ಸಂವಿಧಾನ ಶಿಲ್ಪಿ ಡಾ. ಬಾಬಾಸಾಹೇಬ್ ಅಂಬೇಡ್ಕರ್ ವೃತ್ತದ ಬಳಿ ಜುಲೈ 27 (ಸೋಮವಾರ) ಬೆಳಿಗ್ಗೆ 11 ಗಂಟೆಗೆ ನಡೆಯಲಿರುವ ಪ್ರತಿಭಟನೆಯಲ್ಲಿ ಕೇಂದ್ರ ಶಿಕ್ಷಣ ಸಚಿವ ರ‍್ಮೇಂದ್ರ ಪ್ರಧಾನ ಅವರ ರಾಜೀನಾಮೆಗೆ ಆಗ್ರಹಿಸಲಾಗುವುದು ಎಂದು ಸಂಘಟನೆ ತಿಳಿಸಿದೆ. ದೇಶದ ಭವಿಷ್ಯವಾಗಿರುವ ವಿದ್ಯರ‍್ಥಿಗಳ ಮೇಲೆ ಲಾಠಿಚರ‍್ಜ್ ನಡೆಸಿರುವುದನ್ನು ಖಂಡಿಸಿ, ಕೇಂದ್ರ ರ‍್ಕಾರದ ರ‍್ವಾಧಿಕಾರಿ ಧೋರಣೆ ವಿರುದ್ಧ ಪ್ರತಿಭಟನೆ ನಡೆಸಲಾಗುವುದು. ಅಲ್ಲದೆ, ವಿದ್ಯರ‍್ಥಿಗಳ ಮೇಲಿನ ದರ‍್ಜನ್ಯಕ್ಕೆ ಹೊಣೆ ಹೊತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಆಡಳಿತವನ್ನು ಖಂಡಿಸಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಪ್ರತಿಭಟನೆಯಲ್ಲಿ ವಿದ್ಯರ‍್ಥಿಗಳು, ಯುವಕರು, ವಿವಿಧ ಸಂಘಟನೆಗಳ ಮುಖಂಡರು ಹಾಗೂ ಸರ‍್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ರ‍್ನಾಟಕ ದಲಿತ ಸಂರ‍್ಷ ಸಮಿತಿ (ಅಂಬೇಡ್ಕರ್ ವಾದ) ರಾಜ್ಯ ಸಂಘಟನಾ ಸಂಚಾಲಕ ರಮೇಶ್ ಡಾಕುಳಗಿ, ಜಿಲ್ಲಾ ಸಂಚಾಲಕ ರಮೇಶ್ ಮಂದಕನ್ನಳಿ ಹಾಗೂ ವಿದ್ಯರ‍್ಥಿ ಒಕ್ಕೂಟ ಜಿಲ್ಲಾ ಸಂಚಾಲಕ ಕೈಲಾಸ ಮೇಟಿ ಮನವಿ ಮಾಡಿದ್ದಾರೆ.

## ಎಸ್‌ಐಆರ್ ವಿಶೇಷ ತೀವ್ರ ಪರಿಷ್ಕರಣೆ, ಜಾಗೃತಿ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ನಡೆಯುತ್ತಿರುವ ವಿಶೇಷ ತೀವ್ರ ಪರಿಷ್ಕರಣೆ (Special Intensive Revision - SIR) ಕಾರ್ಯಕ್ರಮದ ಅಂಗವಾಗಿ ಗಂಗಾವತಿ ನಗರದ ವಾರ್ಡ್ ಸಂಖ್ಯೆ 5ರಲ್ಲಿ ಮತದಾರರ ಪಟ್ಟಿಯ ಪರಿಷ್ಕರಣೆ ಹಾಗೂ ಜಾಗೃತಿ ಅಭಿಯಾನಕ್ಕೆ ವೇಗ ನೀಡಲಾಗಿದೆ.

ನಗರಸಭೆ ಪೌರಾಯುಕ್ತರು, ಗಂಗಾವತಿ ತಹಶೀಲ್ದಾರರ ಮಾರ್ಗದರ್ಶನದಲ್ಲಿ ಬಿ.ಎಲ್.ಒ–1 ಹಾಗೂ ಬಿ.ಎಲ್.ಒ–2 ಸಿಬ್ಬಂದಿ, ಅಂಗನವಾಡಿ ಶಿಕ್ಷಕಿಯರು ಮತ್ತು ನಗರಸಭೆ ಸಿಬ್ಬಂದಿ ಮನೆ ಮನೆಗೆ ಭೇಟಿ ನೀಡಿ ಮತದಾರರಿಗೆ ಎಸ್‌ಐಆರ್ ಕುರಿತು ಮಾಹಿತಿ ನೀಡುತ್ತಿದ್ದಾರೆ. ಮತದಾರರ ಪಟ್ಟಿಯಲ್ಲಿ ಹೊಸ ಹೆಸರು ಸೇರ್ಪಡೆ, ಹೆಸರು ತಿದ್ದುಪಡಿ, ವಿಳಾಸ ಬದಲಾವಣೆ, ಮೃತ ಹಾಗೂ ಸ್ಥಳಾಂತರಗೊಂಡ ಮತದಾರರ ಮಾಹಿತಿಯ ಪರಿಷ್ಕರಣೆ ಸೇರಿದಂತೆ ಅಗತ್ಯ ದಾಖಲೆಗಳ ಬಗ್ಗೆ



ಸಾರ್ವಜನಿಕರಿಗೆ ವಿವರಿಸಿ, ನಿಖರವಾದ ಮತದಾರರ ಪಟ್ಟಿಯನ್ನು ಸಿದ್ಧಪಡಿಸುವ ಕಾರ್ಯ ಕೈಗೊಳ್ಳಲಾಗಿದೆ.

ಈ ಅಭಿಯಾನದಲ್ಲಿ ವಾರ್ಡ್ ಸಂಖ್ಯೆ 5ರ ಸಿಎಂಸಿ ಮಾಜಿ ಸದಸ್ಯ ಬಿ.ಕೆ. ಮೊಹಮ್ಮದ್ ಉಸ್ಮಾನ್, ಜಮಿಯಾತ್–ಉಲಮಾ–ಇ–ಹಿಂದ್ ಕೊಪ್ಪಳ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಿ.ಕೆ. ಮೊಹಮ್ಮದ್ ಅಲ್ತಾಫ್ ಹುಸೇನ್ ಸೇರಿದಂತೆ ಸ್ಥಳೀಯ ಮುಖಂಡರು, ಬಿ.ಎಲ್.ಒ. ಹುಸೇನ್ ಸಬ್ ಮಕಂದರ್, ಸುಮಾ ಮೇಡಂ, ಡಿ. ಲತಾ ಬಾಯಿ, ಫೌಸಿಯಾ ಬಾಗಂ, ಬಿಲ್ಕಿಸ್ ಬಾನು, ಹಾಗೂ ಮುನ್ಸಿಪಾಲಿಟಿ ಸಿಬ್ಬಂದಿ ಸಕ್ರಿಯವಾಗಿ ಭಾಗವಹಿಸಿ ಕಾರ್ಯವನ್ನು ಯಶಸ್ವಿಯಾಗಿ ಮುನ್ನಡೆಸಿದರು.

## ಎಸ್‌ಐಆರ್: ಜಾಗೃತಿ ಮೂಡಿಸಿದ ಸಚಿವ



**ಬೆಂಗಳೂರು:** ಮತದಾರರ ಹಕ್ಕು ಸಂರಕ್ಷಣೆ ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದ್ದು, ಎಸ್‌ಐಆರ್ (Special Intensive Revision) ಪ್ರಕ್ರಿಯೆಯಲ್ಲಿ ಅರ್ಹ ಮತದಾರರು ಸಕ್ರಿಯವಾಗಿ ಭಾಗವಹಿಸಿ ತಮ್ಮ ಹೆಸರು ಮತದಾರರ ಪಟ್ಟಿಯಲ್ಲಿ ಸರಿಯಾಗಿ ದಾಖಲಾಗಿರುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ಕರೆ ನೀಡಿದರು. ಬಿಟಿಎಂ ಲೇಔಟ್‌ನಲ್ಲಿ ಆಯೋಜಿಸಿದ್ದ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮತದಾರರ ಪಟ್ಟಿಯ ಪರಿಷ್ಕರಣೆ ಪ್ರಜಾಪ್ರಭುತ್ವವನ್ನು ಬಲಪಡಿಸುವ ಮಹತ್ವದ ಪ್ರಕ್ರಿಯೆಯಾಗಿದೆ. ಯಾರೂ ನಿರ್ಲಕ್ಷ್ಯ ವಹಿಸದೆ ಅಗತ್ಯ ದಾಖಲೆಗಳನ್ನು ಸಲ್ಲಿಸಿ, ಸಂಬಂಧಿಸಿದ ಅಧಿಕಾರಿಗಳೊಂದಿಗೆ ಸಹಕರಿಸಬೇಕು ಎಂದು ತಿಳಿಸಿದರು. ಮತದಾನದ ಹಕ್ಕು ಪ್ರತಿಯೊಬ್ಬ ನಾಗರಿಕನ ಅಮೂಲ್ಯ ಹಕ್ಕಾಗಿದ್ದು, ಯಾವುದೇ ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯದಂತೆ ಜಾಗೃತಿ ಮೂಡಿಸುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದು ಸಚಿವರು ಹೇಳಿದರು. ಈ ಸಂದರ್ಭದಲ್ಲಿ ಸ್ಥಳೀಯ ಮುಖಂಡರು, ಕಾರ್ಯಕರ್ತರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದು, ಎಸ್‌ಐಆರ್ ಕುರಿತು ಜನರಿಗೆ ಅರಿವು ಮೂಡಿಸುವ ಕಾರ್ಯದಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳುವಂತೆ ಸಚಿವ ರಾಮಲಿಂಗಾರೆಡ್ಡಿ ಮನವಿ ಮಾಡಿದರು.

# ನೀಟ್ ಕಲಹಕ್ಕೆ ಎಚ್ಚರ

## ಪರೀಕ್ಷಾ ಅಕ್ರಮ ಮತ್ತು ಲೋಪದೋಷಗಳ ಸರಣಿಗೆ ತಕ್ಷಣವೇ ಬ್ರೇಕ್ ಹಾಕಿ: ಕೇಂದ್ರಕ್ಕೆ ಸುಪ್ರೀಂ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಹೊಸದಿಲ್ಲಿ

ರಾಷ್ಟ್ರದಾದ್ಯಂತ ವಿವಾದಕ್ಕೆ ಕಾರಣವಾಗಿರುವ ನೀಟ್ ಪರೀಕ್ಷಾ ಅಕ್ರಮ ಮತ್ತು ಲೋಪದೋಷಗಳ ಸರಣಿಗೆ ತಕ್ಷಣವೇ ಬ್ರೇಕ್ ಹಾಕುವಂತೆ ಸುಪ್ರೀಂ ಕೋರ್ಟ್ ಕೇಂದ್ರ ಸರ್ಕಾರಕ್ಕೆ ಸೂಚನೆ ನೀಡಿದೆ. ಮುಂಬರುವ ದಿನಗಳಲ್ಲಿ ಪರೀಕ್ಷಾ ವ್ಯವಸ್ಥೆಯನ್ನು ಸಂಪೂರ್ಣವಾಗಿ ಕಂಪ್ಯೂಟರ್ ಆಧಾರಿತ ವ್ಯವಸ್ಥೆಯತ್ತ ಕೊಂಡೊಯ್ಯುವ ಬಗ್ಗೆ ಸರ್ಕಾರದ ಯೋಜನೆಗಳೇನು ಎಂಬುದರ ಕುರಿತು ವರದಿ ನೀಡುವಂತೆ ನಿರ್ದೇಶಿಸಿದೆ.

**ಕಾರ್ಯವೈಖರಿಯ ಬಗ್ಗೆ ಪ್ರಶ್ನೆ:** ನ್ಯಾಯಮೂರ್ತಿ ಪಿ.ಎಸ್. ನರಸಿಂಹ, ಅಲೋಕ್ ಆರಾಧೆ ಅವರನ್ನೊಳಗೊಂಡ ವಿಭಾಗೀಯ ಪೀಠವು ಕೇಂದ್ರ ಸರ್ಕಾರದ ಕಾರ್ಯವೈಖರಿಯನ್ನು ಪ್ರಶ್ನಿಸಿದ ಪೀಠವು, ಈ ಪರಿಸ್ಥಿತಿ ಹೀಗೆಯೇ ಮುಂದುವರಿಯಲು ನಾವು ಬಿಡುವುದಿಲ್ಲ. ಈ ಪ್ರಕರಣದ ಪ್ರತಿಯೊಂದು ಬೆಳವಣಿಗೆಯನ್ನು ಅತ್ಯಂತ ಸೂಕ್ಷ್ಮವಾಗಿ ಗಮನಿಸುತ್ತಿದ್ದೇವೆ ಎಂದಿದೆ

**ನ್ಯಾಯ ಪೀಠ ಹೇಳಿದ್ದೇನು?:** ಪರೀಕ್ಷೆಯನ್ನು ಆನ್ಲೈನ್ಗೆ ಬದಲಾಯಿಸಲು ನೀವು ಏನು ಮಾಡುತ್ತಿದ್ದೀರಿ? ಹಾಗೆ ಕಂಪ್ಯೂಟರ್ ಆಧಾರಿತ ಪರೀಕ್ಷೆಗಳನ್ನು ನಡೆಸುವಾಗ ವಿದ್ಯಾರ್ಥಿಗಳ ಡೇಟಾವನ್ನು ಹೇಗೆ ಸುರಕ್ಷಿತವಾಗಿರಿಸುತ್ತೀರಿ ಎಂಬುದನ್ನು ನಮಗೆ ತಿಳಿಸಿ. ಪ್ರತಿಯೊಂದು ಪ್ರಕ್ರಿಯೆಯೂ ಸಾಂಸ್ಥಿಕ ರೂಪ ಪಡೆಯುವುದನ್ನು ನಾವು ಖಚಿತಪಡಿಸಿಕೊಳ್ಳುತ್ತೇವೆ, ಎಂದು ನ್ಯಾಯಾಲಯ ಹೇಳಿದೆ.



### ಸೋನಮ್ ಉಪವಾಸ ಅಂತ್ಯ

ಶಿಕ್ಷಣ ಸಚಿವರ ರಾಜೀನಾಮೆಗೆ ಪಟ್ಟು ಹಿಡಿದು ಜೂನ್ 28ರಿಂದ ಉಪವಾಸ ಸತ್ಯಾಗ್ರಹ ನಡೆಸುತ್ತಿದ್ದ ಖ್ಯಾತ ಹೋರಾಟಗಾರ ಸೋನಮ್ ವಾಂಗ್ಚುಕ್ ಅವರು ತಮ್ಮ ಉಪವಾಸವನ್ನು ಅಂತ್ಯಗೊಳಿಸಿದ್ದಾರೆ. ಆರೋಗ್ಯ ಹದಗೆಟ್ಟ ಹಿನ್ನೆಲೆಯಲ್ಲಿ ಜುಲೈ 18ರಂದು ಅವರನ್ನು ಸಫ್ದರ್ಜಂಗ್ ಆಸ್ಪತ್ರೆಗೆ ದಾಖಲಿಸಲಾಗಿತ್ತು. ವಾಂಗ್ಚುಕ್ ಅವರನ್ನು ಗುರುಗ್ರಾಮದ ಮೆದಾಂತ ಆಸ್ಪತ್ರೆಗೆ ಸ್ಥಳಾಂತರಿಸಲು ಕೋರ್ಟ್ ಅನುಮತಿ ನೀಡಿತ್ತು.

### ದಿಲ್ಲಿಯಲ್ಲಿ ಆಕ್ರೋಶದ ಭುಗಿಲು

ಒಂದೆಡೆ ಸುಪ್ರೀಂ ಕೋರ್ಟ್ನಲ್ಲಿ ವಿಚಾರಣೆ ನಡೆಯುತ್ತಿದ್ದರೆ, ಇನ್ನೊಂದೆಡೆ ನೀಟ್ ಅಕ್ರಮ ಖಂಡಿಸಿ ದೆಹಲಿಯ ಜಂತರ್ ಮಂತರ್ನಲ್ಲಿ ಕಾಕ್ರೋಚ್ ಜನತಾ ಪಾರ್ಟಿ ನೇತೃತ್ವದಲ್ಲಿ ವಿದ್ಯಾರ್ಥಿಗಳ ಪ್ರತಿಭಟನೆ ತೀವ್ರ ಸ್ವರೂಪ ಪಡೆದುಕೊಂಡಿದೆ. ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕೆಂದು ಪ್ರತಿಭಟನಾಕಾರರು ಆಗ್ರಹಿಸುತ್ತಿದ್ದಾರೆ.

### ರಾಗಾ ಕೆಂಡಾಮಂಡಲ!

ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರನ್ನು ಕ್ರಿಮಿನಲ್ ಮಂತ್ರಿ ಎಂದು ಕರೆದಿರುವ ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ, ಸಚಿವರನ್ನು ನಮ್ಮ ಶಿಕ್ಷಣ ವ್ಯವಸ್ಥೆಯ ಕುಸಿತದ ಸಂಕೇತ ಎಂದು ಕರೆದಿದ್ದಾರೆ. ನೀಟ್ ಅಕ್ರಮದ ಹಿನ್ನೆಲೆಯಲ್ಲಿ, ಧರ್ಮೇಂದ್ರ ಪ್ರಧಾನ್ ರಾಜೀನಾಮೆಗೆ ರಾಹುಲ್ ಗಾಂಧಿ ಅವರು ಇದೇವೇಳೆ ಒತ್ತಾಯಿಸಿದ್ದಾರೆ.

### ರಾಜಿನಾಮೆ ಇಲ್ಲ: ಕೇಂದ್ರ

ಸಿಜೆಪಿ ಪ್ರತಿನಿಧಿಗಳ ಜೊತೆ ಎರಡನೇ ಸುತ್ತಿನ ಮಾತುಕತೆ ಬಳಿಕ, ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರಿಂದ ರಾಜೀನಾಮೆ ಪಡೆಯುವುದು ಮಾತುಕತೆಯ ವಿಷಯವಾಗಿಲ್ಲ ಎಂದು ಕೇಂದ್ರ ಸರ್ಕಾರ ಸ್ಪಷ್ಟಪಡಿಸಿದೆ. ಸಿಜೆಪಿ ಧರ್ಮೇಂದ್ರ ಪ್ರಧಾನ್ ರಾಜೀನಾಮೆಗೆ ಪಟ್ಟುಹಿಡಿದಿದ್ದು, ಇಂದು ಈ ಕುರಿತು ನಿರ್ಧಾರ ಪ್ರಕಟಿಸುವಂತೆ ಕೇಂದ್ರದ ಮೇಲೆ ಒತ್ತಡ ಹೇರಿದೆ.



ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ 'ಸೌತ್ ಎಡಿಷನ್ ರೈಸಿಂಗ್ ಭಾರತ್' ಸಮ್ಮೇಳನದಲ್ಲಿ ಸಿಎಂ ಡಿ ಕೆ ಶಿವಕುಮಾರ್ ಅವರು ಎಂಬಿ ಪಾಟೀಲರ ಜತೆ ಕುಶಲೋಪರಿ ವಿಚಾರಿಸಿದರು.

## ಹುಮನಾಬಾದ್ ಕ್ಷೇತ್ರವನ್ನು ಮಾದರಿ ಕ್ಷೇತ್ರವನ್ನಾಗಿ ರೂಪಿಸಿದ ರಾಜಶೇಖರ ಬಿ. ಪಾಟೀಲ

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್

ರಾಜಕೀಯವೆಂದರೆ ಕೇವಲ ಅಧಿಕಾರವಲ್ಲ; ಜನರ ಬದುಕಿನಲ್ಲಿ ಶಾಶ್ವತ ಬದಲಾವಣೆ ತರುವ ಸಂಕಲ್ಪ. ಈ ಮಾತಿಗೆ ಜೀವಂತ ಉದಾಹರಣೆಯಾಗಿ ಮಾಜಿ ಸಚಿವ ರಾಜಶೇಖರ ಬಿ. ಪಾಟೀಲ ಅವರು ಹುಮನಾಬಾದ್ ಕ್ಷೇತ್ರದಲ್ಲಿ ಮಾಡಿದ ಅಭಿವೃದ್ಧಿ ಕಾರ್ಯಗಳು ಇಂದಿಗೂ ಜನರ ಮನಸ್ಸಿನಲ್ಲಿ ಅಚ್ಚಳಿಯದೆ ಉಳಿದಿವೆ.

ಹುಮನಾಬಾದ್ ಕ್ಷೇತ್ರದ ಸಮಗ್ರ ಅಭಿವೃದ್ಧಿಯ ಕನಸನ್ನು ಕಂಡ ಅವರು, ರಸ್ತೆ, ಕುಡಿಯುವ ನೀರು, ಶಿಕ್ಷಣ, ಆರೋಗ್ಯ, ನೀರಾವರಿ ಮತ್ತು ಮೂಲಸೌಕರ್ಯಗಳಿಗೆ ಆದ್ಯತೆ ನೀಡಿ ಕ್ಷೇತ್ರದ ಅಭಿವೃದ್ಧಿಗೆ ಹೊಸ ದಿಕ್ಕು ನೀಡಿದರು. ನಗರ ಹಾಗೂ ಗ್ರಾಮೀಣ ಪ್ರದೇಶಗಳ ನಡುವೆ ಅಭಿವೃದ್ಧಿಯ ಅಂತರ ಕಡಿಮೆ ಮಾಡುವ ಪ್ರಯತ್ನದಿಂದ ಅನೇಕ ಯೋಜನೆಗಳು ಸಾಕಾರಗೊಂಡವು.



ಕ್ಷೇತ್ರದ ಪ್ರತಿಯೊಬ್ಬ ನಾಗರಿಕರ ಸಮಸ್ಯೆಗೆ ಸ್ಪಂದಿಸುವ ಜನನಾಯಕನಾಗಿ ರಾಜಶೇಖರ ಬಿ. ಪಾಟೀಲ ಅವರು ಗುರುತಿಸಿಕೊಂಡಿದ್ದಾರೆ. ಜನರೊಂದಿಗೆ ನಿರಂತರ ಸಂಪರ್ಕ, ಅಧಿಕಾರಿಗಳೊಂದಿಗೆ ಸಮನ್ವಯ ಹಾಗೂ ಅಭಿವೃದ್ಧಿಯ ದೃಷ್ಟಿಕೋನದಿಂದ ಅನೇಕ ಕೆಲಸಗಳನ್ನು ಕೈಗೊಂಡ ಪರಿಣಾಮ, ಹುಮನಾಬಾದ್ ಇಂದು ಪ್ರಗತಿಯ ಹಾದಿಯಲ್ಲಿ ಸಾಗುತ್ತಿರುವ ಕ್ಷೇತ್ರಗಳಲ್ಲಿ ಒಂದಾಗಿ ಗುರುತಿಸಿಕೊಂಡಿದೆ.

ಅಭಿವೃದ್ಧಿ ಎಂದರೆ ಕೇವಲ ಕಟ್ಟಡಗಳು ಅಥವಾ ರಸ್ತೆಗಳ ನಿರ್ಮಾಣವಲ್ಲ; ಜನರಲ್ಲಿ ವಿಶ್ವಾಸ ಬೆಳೆಸುವುದು, ಯುವಕರಿಗೆ ಅವಕಾಶ ಕಲ್ಪಿಸುವುದು, ರೈತರ ಸಂಕಷ್ಟಗಳಿಗೆ ಸ್ಪಂದಿಸುವುದು ಮತ್ತು ಸಮಾಜದ ಎಲ್ಲ ವರ್ಗಗಳನ್ನು ಜೊತೆಯಾಗಿ ಕೊಂಡೊಯ್ಯುವುದೇ ನಿಜವಾದ ಅಭಿವೃದ್ಧಿ ಎಂಬುದನ್ನು ಅವರ ಕಾರ್ಯಶೈಲಿ ತೋರಿಸಿದೆ. ಇಂತಹ ಜನಪರ ನಾಯಕತ್ವವೇ ಒಂದು ಕ್ಷೇತ್ರವನ್ನು ಮಾದರಿ ಕ್ಷೇತ್ರವನ್ನಾಗಿ ರೂಪಿಸುತ್ತದೆ. ಹುಮನಾಬಾದ್ ಕ್ಷೇತ್ರದ ಅಭಿವೃದ್ಧಿಯ ಪಯಣದಲ್ಲಿ ರಾಜಶೇಖರ ಬಿ. ಪಾಟೀಲ ಅವರ ಕೊಡುಗೆ ಮಹತ್ವದ್ದಾಗಿದೆ ಎಂದು ಅನೇಕ ಸಾರ್ವಜನಿಕರು ಅಭಿಪ್ರಾಯ ವ್ಯಕ್ತಪಡಿಸುತ್ತಾರೆ. ಮುಂದೆಯೂ ಇದೇ ರೀತಿಯ ಅಭಿವೃದ್ಧಿ ಕಾರ್ಯಗಳು ನಿರಂತರವಾಗಿ ಸಾಗಲಿ ಎಂಬುದು ಕ್ಷೇತ್ರದ ಜನರ ಆಶಯವಾಗಿದೆ.

# ಹಳ್ಳ ಹಿಡಿಯಿತೆ ಆರೋಗ್ಯ ಸಂಜೀವಿನಿ..?

• ವಿರೇಶ್ ವರದಿಗಾರ, ಸಿಂಧನೂರು

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ ಹಳ್ಳ ಹಿಡಿದಿದೆ. ಎಚ್‌ಆರ್‌ಎಂಎಸ್ ತಂತ್ರಾಂಶದಲ್ಲಿ ನೌಕರರ ವಿವರಗಳನ್ನು ನಮೂದಿಸಬೇಕಾದ ಸ್ಥಳೀಯ ಆಡಳಿತ ಕಚೇರಿ ಸಿಬ್ಬಂದಿ, ತಮ್ಮ ಜವಾಬ್ದಾರಿಯಿಂದ ನುಣುಚಿಕೊಂಡು, ಲಾಗಿನ್ ವಿವರಗಳನ್ನು ಅನಧಿಕೃತ ವ್ಯಕ್ತಿಗಳಿಗೆ ನೀಡಿ ಶಿಕ್ಷಕರಿಂದಲೇ ಹಣ ವಸೂಲಿ ಮಾಡುತ್ತಿರುವ ಗಂಭೀರ ಆರೋಪಗಳು ಕೇಳಿಬಂದಿವೆ.

**ಸರ್ಕಾರಿ ಯೋಜನೆಯ ಅವನತಿ**

**ಏನಿದು ಯೋಜನೆ?:** ಕರ್ನಾಟಕ ಸರ್ಕಾರದ ನೌಕರರಿಗೆ ಹಾಗೂ ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ನಗದು ರಹಿತ ವೈದ್ಯಕೀಯ ಚಿಕಿತ್ಸೆ ಒದಗಿಸುವ ಸದುದ್ದೇಶದಿಂದ 'ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ'ಯನ್ನು ಜಾರಿಗೊಳಿಸಲಾಗಿದೆ. ಆಯಾ ತಾಲ್ಲೂಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಯ ಡಿಡಿಒಗಳೇ ತಮ್ಮ ವ್ಯಾಪ್ತಿಯ ನೌಕರರ ವಿವರಗಳನ್ನು ತಂತ್ರಾಂಶದಲ್ಲಿ ನಮೂದಿಸಬೇಕೆಂದು ಕಡ್ಡಾಯ ಆದೇಶವಿತ್ತು. ಆದರೆ, ಸಿಂಧನೂರು ತಾಲೂಕಿನ ಬಿಇಒ ಕಚೇರಿಯ ಕೆಲ ಸಿಬ್ಬಂದಿ ಈ ಕೆಲಸವನ್ನು ತಾವೇ ಮಾಡದೆ, ತಮ್ಮ ಕಚೇರಿಯ ಅಧಿಕೃತ ಲಾಗಿನ್ ಐಡಿಯನ್ನು ಇತರೆ ಶಿಕ್ಷಕರಿಗೆ ನೀಡಿ ಕೈತೊಳೆದುಕೊಂಡಿದ್ದಾರೆ.

**ಬೆಳಕಿಗೆ ಬಂದ ಅಕ್ರಮ:** ಇಲಾಖೆಯ ಕೆಲಸವನ್ನು ಹೊರಗಿನವರಿಗೆ ವಹಿಸಿಕೊಂಡು, ಲಾಗಿನ್ ಪಡೆದ ಕೆಲ ಶಿಕ್ಷಕರು ಹಾಗೂ ಸಂಘದ ಹೆಸರಿನಲ್ಲಿ ಗುರುತಿಸಿಕೊಂಡವರು ಪ್ರತಿ ಶಿಕ್ಷಕರಿಂದ ರೂ. 300 ರಿಂದ 500 ವರೆಗೆ ಹಣ ವಸೂಲಿ ಮಾಡುತ್ತಿದ್ದಾರೆ. ಈಗಾಗಲೇ ಅನೇಕ ಶಿಕ್ಷಕರು ಫೋನ್ ಪೇ (PhonePe) ಮೂಲಕ ಹಣ ಸಂದಾಯ ಮಾಡಿ ತಮ್ಮ ಹೆಸರುಗಳನ್ನು ನಮೂದಿಸಿಕೊಂಡಿರುವ ಬಗ್ಗೆ ಪಕ್ಕಾ ಸಾಕ್ಷ್ಯಗಳು ಮತ್ತು ದೂರುಗಳು ಲಭ್ಯವಿವೆ.

**ಸರಕಾರದ ಆದೇಶ ಉಲ್ಲಂಘನೆ:** ಜುಲೈ 15ರ ಒಳಗಾಗಿ ಎಲ್ಲಾ ಸರ್ಕಾರಿ ನೌಕರರ ಮಾಹಿತಿಯನ್ನು ಕಡ್ಡಾಯವಾಗಿ ನಮೂದಿಸಿ ಕ್ರಮಕೈಗೊಳ್ಳಲು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಉಪಕಾರ್ಯದರ್ಶಿಗಳು ಖಡಕ್ ಸೂಚನೆ ನೀಡಿದ್ದರು. ಆದರೆ, ಜವಾಬ್ದಾರಿಯುತ ಬಿಇಒ ಕಚೇರಿ ನೌಕರರ ಮೈಗಳ್ಳತನದಿಂದಾಗಿ ನಿಗದಿತ ಪ್ರಮಾಣದಲ್ಲಿ ದತ್ತಾಂಶ ನಮೂದಾಗದೆ ನೌಕರರು ಪರದಾಡುವಂತಾಗಿದೆ. ಸರಕಾರಿ ನೌಕರರ ಸಂಪೂರ್ಣ ಗೋಪ್ಯ ಮಾಹಿತಿ ಹಾಗೂ ವೈಯಕ್ತಿಕ ವಿವರಗಳು ಅನಧಿಕೃತ ವ್ಯಕ್ತಿಗಳ ಕೈ ಸೇರುತ್ತಿರುವುದರಿಂದ ಮಾಹಿತಿ ಸೋರಿಕೆಯಾಗುವ ಭೀತಿ ಶಿಕ್ಷಕರಲ್ಲಿ ಮನೆ ಮಾಡಿದೆ.



### ಯೋಜನೆಯ ಹಿಂದೆ ಮುಂದೆ..?

- ಬಿಇಒ ಕಚೇರಿ ನಿರ್ಲಕ್ಷ್ಯ, ಎಚ್‌ಆರ್‌ಎಂಎಸ್ ಲಾಗಿನ್ ಬೇರೆ ಶಿಕ್ಷಕರ ಕೈಗೆ.
- ತಂತ್ರಾಂಶದಲ್ಲಿ ಮಾಹಿತಿ ನಮೂದಿಸಲು ಪ್ರತಿ ಶಿಕ್ಷಕರಿಂದ ಹಣ ವಸೂಲಿ.
- ಸರಕಾರಿ ನೌಕರರ ವೈಯಕ್ತಿಕ ಹಾಗೂ ರಹಸ್ಯ ದತ್ತಾಂಶ ಸೋರಿಕೆ, ಆತಂಕ.
- ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಕೆಲವರ ಬೆಂಬಲ, ವಸೂಲಿ ಆರೋಪ

### ನೌಕರರ, ಸಾರ್ವಜನಿಕರ ಆಗ್ರಹ

ರಾಜ್ಯದಲ್ಲಿ ಭ್ರಷ್ಟಾಚಾರ ರಹಿತ ಆಡಳಿತ ನೀಡುವ ಭರವಸೆ ನೀಡಿರುವ ಸರ್ಕಾರ ಹಾಗೂ ಮೇಲಾಧಿಕಾರಿಗಳು ಈ ಕೂಡಲೇ ಇತ್ತ ಗಮನಹರಿಸಿ, ಸಿಂಧನೂರು ಬಿಇಒ ಕಚೇರಿಯ ಬೇಜವಾಬ್ದಾರಿ ನೌಕರರ ವಿರುದ್ಧ ಮತ್ತು ಅನಧಿಕೃತ ಹಣ ವಸೂಲಿ ಮಾಡುತ್ತಿರುವವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ನೌಕರರು ಹಾಗೂ ಸಾರ್ವಜನಿಕರು ಆಗ್ರಹಿಸಿದ್ದಾರೆ.

## ಮೋದಿ, ಅಮಿತ್ ಶಾರನ್ನು ಕಂಡು ಭಯಪಡುತ್ತಿದ್ದೆವು, ಆದ್ರೆ ನಿಮ್ಮಿಂದ ನಾವು ಕಲಿತಿದ್ದೇವೆ: ಮಣಿಶಂಕರ್ ಅಯ್ಯರ್

## ಅನಾವಶ್ಯಕ ಖರ್ಚುಗಳಿಗೆ ಕಡಿವಾಣ ಹಾಕಿ, ಸುಖವಾದ ಜೀವನ ಆನಂದಿಸಿ

ಇಂದಿನ ಜೀವನದಲ್ಲಿ ಆದಾಯಕ್ಕಿಂತ ಹೆಚ್ಚಾಗಿ ಖರ್ಚು ಮಾಡುವ ಪ್ರವೃತ್ತಿ ಹೆಚ್ಚಾಗುತ್ತಿದೆ. ಅಗತ್ಯವಿಲ್ಲದ ವಸ್ತುಗಳ ಖರೀದಿ, ಪ್ರದರ್ಶನಕ್ಕಾಗಿ ಮಾಡುವ ವೆಚ್ಚ ಹಾಗೂ ಸಾಲ ಮಾಡಿ ವೈಭವದ ಜೀವನ ನಡೆಸುವ ಮನೋಭಾವ ಅನೇಕ ಕುಟುಂಬಗಳನ್ನು ಆರ್ಥಿಕ ಸಂಕಷ್ಟಕ್ಕೆ ತಳ್ಳುತ್ತಿದೆ. ಆದ್ದರಿಂದ ಅನಾವಶ್ಯಕ ಖರ್ಚುಗಳಿಗೆ ಕಡಿವಾಣ ಹಾಕುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ.

## ಸಂಪಾದಕೀಯ



**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**

ಆದಾಯಕ್ಕೆ ತಕ್ಕಂತೆ ಖರ್ಚು ಮಾಡಿ, ಉಳಿಸುವ ಅಭ್ಯಾಸ ಬೆಳೆಸಿದರೆ ಭವಿಷ್ಯ ಸುರಕ್ಷಿತವಾಗಿರುತ್ತದೆ. ಉಳಿತಾಯವು ಕಷ್ಟದ ಸಮಯದಲ್ಲಿ ಆರ್ಥಿಕ ಬಲವಾಗಿ ನಿಲ್ಲುತ್ತದೆ. ಮಕ್ಕಳ ಶಿಕ್ಷಣ, ಆರೋಗ್ಯ ಹಾಗೂ ಕುಟುಂಬದ ಅಗತ್ಯಗಳಿಗೆ ಹಣವನ್ನು ಸಮರ್ಪಕವಾಗಿ ಬಳಸುವುದು ಉತ್ತಮ ಜೀವನದ ಮೂಲವಾಗಿದೆ.

ಸರಳ ಜೀವನವೇ ನಿಜವಾದ ಸಂತೋಷದ ಬದುಕಿಗೆ ದಾರಿ. ಹಣವನ್ನು ವಿವೇಕದಿಂದ ಬಳಸಿದರೆ ಮನಸ್ಸಿನಲ್ಲಿ ನೆಮ್ಮದಿ, ಕುಟುಂಬದಲ್ಲಿ ಸಂತೋಷ ಮತ್ತು ಸಮಾಜದಲ್ಲಿ ಉತ್ತಮ ಬದುಕು ಸಾಧ್ಯವಾಗುತ್ತದೆ. ಅನಾವಶ್ಯಕ ಖರ್ಚುಗಳನ್ನು ತೊರೆದು ಉಳಿತಾಯದ ಸಂಸ್ಕೃತಿಯನ್ನು ಬೆಳೆಸಿದಾಗ ಮಾತ್ರ ಆರ್ಥಿಕ ಸ್ವಾವಲಂಬನೆ ಸಾಧ್ಯ.

ಆದ್ದರಿಂದ ಪ್ರತಿಯೊಬ್ಬರೂ ತಮ್ಮ ಆದಾಯ-ವೆಚ್ಚದ ಲೆಕ್ಕ ಇಟ್ಟುಕೊಂಡು, ಅನಗತ್ಯ ಖರ್ಚುಗಳನ್ನು ನಿಯಂತ್ರಿಸಿ, ಉಳಿತಾಯಕ್ಕೆ ಆದ್ಯತೆ ನೀಡಬೇಕು. "ಇಂದು ಉಳಿಸಿದ ಒಂದು ರೂಪಾಯಿ, ನಾಳೆಯ ಭದ್ರ ಬದುಕಿನ ಅಡಿಗಲ್ಲು" ಎಂಬುದನ್ನು ನೆನಪಿನಲ್ಲಿಟ್ಟುಕೊಂಡು ಸುಖ, ಶಾಂತಿ ಮತ್ತು ನೆಮ್ಮದಿಯ ಜೀವನವನ್ನು ಆನಂದಿಸೋಣ.

## ಕ್ರಿಶ್ಚಿಯನ್ ಸಮುದಾಯ ಅಭಿವೃದ್ಧಿಗೆ ಒಗ್ಗಟ್ಟು ಅಗತ್ಯ





**ಕಲಬುರಗಿ:** ಕ್ರಿಶ್ಚಿಯನ್ ಸಮುದಾಯ ಅಭಿವೃದ್ಧಿಗೆ ಒಗ್ಗಟ್ಟು ಅಗತ್ಯವಿದ್ದು, ಸರ್ಕಾರದಿಂದ ಬಿಡುಗಡೆಯಾಗಿರುವ 95 ಕೋಟಿ ಅನುದಾನದಲ್ಲಿ 45 ಕೋಟಿ ಶಿಕ್ಷಣಕ್ಕೆ ಮೀಸಲಿಡಲಾಗಿದೆ ಎಂದು ಬೆಂಗಳೂರು ಕ್ರಿಶ್ಚಿಯನ್ ಅಭಿವೃದ್ಧಿ ನಿಗಮದ ಉಪಾಧ್ಯಕ್ಷ ಸಂಜಯ ಜಾಗಿರದಾರ್ ಹೇಳಿದರು.

ನಗರದ ಐವಾನ್-ಎ-ಶಾಹಿ ಹೊಸ ಅತಿಥಿ ಗೃಹ ಸಭಾಂಗಣದಲ್ಲಿ ಶುಕ್ರವಾರ ನಡೆದ ಕ್ರಿಶ್ಚಿಯನ್ ಸಮುದಾಯ ಅಭಿವೃದ್ಧಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಕ್ರಿಶ್ಚಿಯನ್ ಸಮುದಾಯ ವಿದ್ಯಾರ್ಥಿಗಳ ಶ್ರೇಯೋಭಿವೃದ್ಧಿಗಾಗಿ ಜಾರಿಗೆ ತಂದಿರುವ ವಿವಿಧ ಕ್ಷೇಮಾಭಿವೃದ್ಧಿ ಯೋಜನೆಗಳು ಮತ್ತು ಅನುದಾನಗಳು ಪ್ರತಿಯೊಬ್ಬ ಅರ್ಹ ಫಲಾನುಭವಿಗೆ ತಲುಪಬೇಕು ಎಂದು ತಿಳಿಸಿದರು.

ಸಮುದಾಯದ ಮಕ್ಕಳು ಉನ್ನತ ಶಿಕ್ಷಣ ಪಡೆದು ಐ.ಎ.ಎಸ್, ಐ.ಪಿ.ಎಸ್ ಹಾಗೂ ಕೆ.ಎ.ಎಸ್ ನಂತಹ ಉನ್ನತ ಹುದ್ದೆಗಳನ್ನು ಅಲಂಕರಿಸಬೇಕು ಎಂಬ ಉದ್ದೇಶದಿಂದ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ಬೆಂಗಳೂರಿನಲ್ಲಿ ಆರು ತಿಂಗಳ ಉಚಿತ ಸ್ಪರ್ಧಾತ್ಮಕ ಪರೀಕ್ಷೆಗಳ ಕೋಚಿಂಗ್ ವ್ಯವಸ್ಥೆ ಮಾಡಲಾಗಿದ್ದು, ವಿದ್ಯಾರ್ಥಿಗಳು ಇದರ ಲಾಭ ಪಡೆಯಬೇಕು. ಉಳಿದ 50 ಕೋಟಿ ಅನುದಾನವನ್ನು ಸಮುದಾಯ ಭವನ, ಚರ್ಚ್‌ಗಳ ನವೀಕರಣ ಹಾಗೂ ಇತರ ಅಭಿವೃದ್ಧಿ ಕಾಮಗಾರಿಗಳಿಗೆ ವಿನಿಯೋಗಿಸಲಾಗುವುದು ಎಂದು ಸಮಾಜದ ಮುಖಂಡರುಗಳಿಗೆ ತಿಳಿಸಿದರು.

ವಿದೇಶದಲ್ಲಿ ವ್ಯಾಸಂಗ ಮಾಡುವ ಕ್ರಿಶ್ಚಿಯನ್ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿದ್ದ ಧನಸಹಾಯವನ್ನು 20 ಲಕ್ಷದಿಂದ 30 ಲಕ್ಷಕ್ಕೆ ಹೆಚ್ಚಿಸಲಾಗಿದೆ. ಮಹಿಳೆಯರ ಸ್ವಯಂ ಉದ್ಯೋಗಕ್ಕೆ 2 ಲಕ್ಷ ಅನುದಾನ ಸಿಗಲಿದ್ದು, ಸ್ವಯಂ ಉದ್ಯೋಗಕ್ಕಾಗಿ 'ಆಹಾರ ವಾಹನ' ಖರೀದಿಸಲು 2 ರಿಂದ 8 ಲಕ್ಷದವರೆಗೆ ನೆರವು ನೀಡಲಾಗುತ್ತಿದೆ. ಸ್ವಂತ ಜಾಗ ಹೊಂದಿರುವವರಿಗೆ ಮನೆ ನಿರ್ಮಾಣಕ್ಕೆ 2.70 ಲಕ್ಷದಿಂದ 3. ಲಕ್ಷದವರೆಗೆ ನೆರವು ಸಿಗಲಿದೆ ಎಂದರು.

ಚರ್ಚ್ ನವೀಕರಣಕ್ಕೆ ಡಿಜಿಟಲ್ ಖಾತೆ ಕೊರತೆಯಿದ್ದರೆ, ನಿಗದಿಪಡಿಸಿದ 5 ಪ್ರಮಾಣಪತ್ರಗಳಲ್ಲಿ ಒಂದನ್ನು ನೀಡಬಹುದು. ಅರ್ಜಿದಾರರು ಕೇವಲ ಅರ್ಜಿ ಹಾಕಿ ಸುಮ್ಮನಾಗದೆ ಕಚೇರಿಯಿಂದ ಸ್ವೀಕೃತಿ ಪತ್ರ ಪಡೆದು, ಅರ್ಜಿಯ ಸ್ಥಿತಿಗತಿ ತಿಳಿದುಕೊಳ್ಳಬೇಕು. ಮಾಹಿತಿ ಅಭಾವ ನೀಗಿಸಲು ಮುಂದಿನ ಭಾನುವಾರದಿಂದ ಚರ್ಚ್‌ಗಳಲ್ಲಿ ಪ್ರಾರ್ಥನೆಯ ನಂತರ ಕರಪತ್ರ ಹಂಚಿ ಜಾಗೃತಿ ಮೂಡಿಸಲು ಅಲ್ಪಸಂಖ್ಯಾತ ಕಲ್ಯಾಣ ಇಲಾಖೆ ಅಧಿಕಾರಿಗಳಿಗೆ ತಿಳಿಸಿದರು. ವೇದಿಕೆ ಮೇಲೆ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಅಧಿಕಾರಿ ಸಂಗಮೇಶ್ವರ, ಜಿಲ್ಲಾ ವ್ಯವಸ್ಥಾಪಕರ ಅಲ್ಪಸಂಖ್ಯಾರ ಅಭಿವೃದ್ಧಿ ನಿಗಮದ ಅಧಿಕಾರಿ ಹಜರತ್ ಅಲ್ಲಿ, ಕಲಬುರಗಿ ಧರ್ಮಕ್ಷೇತ್ರದ ಚಾನ್ಸಲರ್ ಫಾದರ್ ಸ್ಟಾನಿ ಲೋಬೋ ಅಖಿಲ ಭಾರತ ಕ್ರೈಸ್ತ ಮಹಾಸಭಾದ ಉಪದ್ಯಾಕ್ಷರಾದ ಸಂಧ್ಯಾರಾಜ ಸಾಮವೇಲ್, ಸಿಮಿಯೋನ್ ಶಿರೋಮಣಿ, ಕಲ್ಬುರ್ಗಿ ಜಿಲ್ಲೆಯ ಕ್ರೈಸ್ತ ಚರ್ಚಿನ್ ಮುಖ್ಯಗುರುಗಳು ಪಾದ್ರಿಗಳು ಸೇರಿದಂತೆ ಅನೇಕ ಚರ್ಚಿನ ಸದಸ್ಯರುಗಳು ಭಾಗವಹಿಸಿದ್ದರು.

# ನಿರೀಕ್ಷೆ: ಮಳೆ ಕೊರತೆ ಮಧ್ಯೆ ಭತ್ತದ ಸಸಿ ಮಡಿ ತಯಾರಿ ಬಿರುಸು

- **ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು**

ತಾಲೂಕಿನಲ್ಲಿ ಮುಂಗಾರು ಮಳೆಯ ಆಗಮನದ ಮುನ್ಸೂಚನೆ ಹಾಗೂ ಆಗಾಗ್ಗೆ ಕಾಣಿಸಿಕೊಳ್ಳುತ್ತಿರುವ ಮೋಡ ಕವಿದ ವಾತಾವರಣದಿಂದಾಗಿ ರೈತ ಸಮುದಾಯ ಮತ್ತೊಮ್ಮೆ ಹೊಲಗಳಲ್ಲಿ ಕ್ರಿಯಾಶೀಲರಾಗಿದ್ದಾರೆ. ತುಂಗಭದ್ರಾ ಅಚ್ಚುಕಟ್ಟು ಪ್ರದೇಶದಲ್ಲಿ ಕೃಷಿ ಚಟುವಟಿಕೆಗಳು ಬಿರುಸುಗೊಂಡಿದ್ದು, ರೈತರು ಭತ್ತದ ಸಸಿ ಮಡಿಗಳ ಕಾರ್ಯಕ್ಕೆ ಸಕಲ ಸಿದ್ಧತೆಗಳನ್ನು ನಡೆಸುತ್ತಿದ್ದಾರೆ.

**ಪ್ರಮುಖ ಬೆಳೆ ಮತ್ತು ಸಸಿ ಮಡಿ ಸಿದ್ಧತೆ**

ಈ ಪ್ರಾಂತ್ಯದಲ್ಲಿ ಭತ್ತವೇ ಪ್ರಮುಖ ಬೆಳೆಯಾಗಿರುವುದರಿಂದ ಗದ್ದೆಗಳನ್ನು ಹಸನು ಮಾಡಿ ಭತ್ತದ ಸಸಿ ಮಡಿಗಳನ್ನು ಮಾಡುವ ಕೆಲಸ ಭರದಿಂದ ಸಾಗಿದೆ. ವಾಸ್ತವವಾಗಿ, 15 ದಿನಗಳ ಹಿಂದೆ ಮಳೆಯ ಅನಿಶ್ಚಿತತೆಯಿಂದಾಗಿ ರೈತರು ಸಸಿ ಮಡಿ ಮಾಡಲು ಹಿಂದೇಟು ಹಾಕುತ್ತಿದ್ದರು. ಆದರೆ, ಕಳೆದ ವರ್ಷ ಎರಡನೇ ಬೆಳೆ (ಹಿಂಗಾರು) ಕಳೆದುಕೊಂಡು ಸಂಕಷ್ಟಕ್ಕೆ ಸಿಲುಕಿದ್ದ ರೈತಾಪಿ ವರ್ಗ, ಈ ಬಾರಿ ಮುಂಗಾರು ಮಳೆಯ ಮೇಲೆ ಭರವಸೆ ಇಟ್ಟು ಕೃಷಿಗೆ ಮುಂದಾಗಿದೆ.

ತುಂಗಾ ಮತ್ತು ಭದ್ರಾ ನದಿಗಳ ಜಲಾನಯನ ಪ್ರದೇಶದಲ್ಲಿ ಉತ್ತಮ ಮಳೆಯಾಗಿ ಜಲಾಶಯಕ್ಕೆ ನೀರು ಹರಿದುಬರುವ ವಿಶ್ವಾಸದಲ್ಲಿರುವ ರೈತರು, ದೇವರ ಮೊರೆ ಹೋಗುವುದರೊಂದಿಗೆ ಭತ್ತದ ಸಸಿ ಮಡಿಗಳ ಕಾರ್ಯದಲ್ಲಿ ನಿರತರಾಗಿದ್ದಾರೆ.



**ವಿದ್ಯುತ್ ಇಲಾಖೆಯ ಧೋರಣೆಯಿಂದ ಕಂಗಾಲಾದ ರೈತರು:** ಮಳೆಯನ್ನೇ ನಂಬಿಕೊಳ್ಳದೆ, ಪಂಪ್‌ಸೆಟ್‌ಗಳನ್ನು ಹೊಂದಿರುವ ರೈತರು ಸಾಲ ಮಾಡಿ ಸಸಿ ಮಡಿಗಳನ್ನು ಸಿದ್ಧಪಡಿಸುತ್ತಿದ್ದಾರೆ. ಆದರೆ, ಈ ನಿರ್ಣಾಯಕ ಹಂತದಲ್ಲಿ ವಿದ್ಯುತ್ ಇಲಾಖೆಯ ಅನಿರೀಕ್ಷಿತ ಮತ್ತು ಏಕಾಏಕಿ ವಿದ್ಯುತ್ ಕಡಿತ ರೈತರನ್ನು ಆತಂಕಕ್ಕೆ ತಳ್ಳಿದೆ.

ಸಸಿ ಮಡಿಗಳಿಗೆ ಸಕಾಲಕ್ಕೆ ನೀರು ಸಿಗದೆ ಹೋದರೆ ನಷ್ಟ ಅನುಭವಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಈ ಕುರಿತು ಅಸಮಾಧಾನ ವ್ಯಕ್ತಪಡಿಸಿರುವ ರೈತರು, ಈ ವರ್ಷ ಪ್ರಕೃತಿ ನಮ್ಮ ಮೇಲೆ ಮುನಿಸಿಕೊಂಡಿದೆ, ಕನಿಷ್ಠ ನೀರು ಮತ್ತು ವಿದ್ಯುತ್ ಒದಗಿಸುವ ಮೂಲಕ ನೀವಾದರೂ ನಮ್ಮ ಬೆನ್ನಿಗೆ ನಿಲ್ಲಿ ಎಂದು ಇಲಾಖೆಯ ಅಧಿಕಾರಿಗಳಿಗೆ ಮನವಿ ಮಾಡಿದ್ದಾರೆ.

ಒಟ್ಟಾರೆಯಾಗಿ, ಮಳೆ ಚುರುಕಾಗಿ ತುಂಗಭದ್ರಾ ಜಲಾಶಯ ಭರ್ತಿಯಾಗಿ ಮುಂಗಾರು ಬೆಳೆಗೆ ಅನುಕೂಲವಾಗುತ್ತದೋ, ಅಥವಾ ಮಳೆಯ ಕೊರತೆಯಿಂದ ಬರಗಾಲ ಉಲ್ಬಣಗೊಂಡು ಬಡ ಕುಟುಂಬಗಳು ಹಾಗೂ ಕೂಲಿ ಕಾರ್ಮಿಕರು ಜೀವನೋಪಾಯಕ್ಕಾಗಿ ಬೇರೆ ಪಟ್ಟಣಗಳಿಗೆ ಗುಳೇ ಹೋಗುವ ದುಸ್ಥಿತಿ ನಿರ್ಮಾಣವಾಗುತ್ತದೋ ಎಂಬುದನ್ನು ಕಾದು ನೋಡಬೇಕಿದೆ. ಸಂಬಂಧಪಟ್ಟ ಸರ್ಕಾರಿ ಇಲಾಖೆಗಳು ಮತ್ತು ಜೆಸ್ಕಾಂ ಅಧಿಕಾರಿಗಳು ತಕ್ಷಣ ಎಚ್ಚೆತ್ತುಕೊಂಡು, ಕೃಷಿ ಚಟುವಟಿಕೆಗಳಿಗೆ ಅಡೆತಡೆಯಿಲ್ಲದೆ ನಿರಂತರ ವಿದ್ಯುತ್ ಪೂರೈಸಬೇಕು ಎಂಬುದು ಈ ಭಾಗದ ರೈತರ ಒಕ್ಕೊರಲ ಒತ್ತಾಯವಾಗಿದೆ.

> ಮಳೆಯಿಲ್ಲದೆ ಬೆಳೆ ನಷ್ಟವಾಗಿ ಗ್ರಾಮೀಣ ಭಾಗದಲ್ಲಿ ತೀವ್ರ ಆರ್ಥಿಕ ಸಂಕಷ್ಟ ಎದುರಾಗಿದೆ. ಟಿ.ಬಿ. ಡ್ಯಾಮ್ ಬೇಗ ತುಂಬಲಿ ಎಂದು ಪ್ರಾರ್ಥಿಸುತ್ತಿರುವ ಜನರು ಬದುಕಿಗಾಗಿ ಗುಳೆ ಹೋಗುತ್ತಿದ್ದು, ಸರ್ಕಾರ ಕೂಡಲೇ ಬರಪೀಡಿತ ಪ್ರದೇಶವೆಂದು ಘೋಷಿಸಿ ಪರಿಹಾರ ನೀಡಬೇಕು.
> –ವೀರೇಶ ಕೋರಿ ಉದ್ದಬಾಳ
> ಜೆಡಿಎಸ್ ಮುಖಂಡರು

> ಮಳೆಯಿಲ್ಲದೆ ಸಂಕಷ್ಟದಲ್ಲಿರುವ ರೈತರ ನೆರವಿಗೆ ಜೆಸ್ಕಾಂ ಧಾವಿಸಬೇಕು. ಸರ್ಕಾರವು ಕೂಡಲೇ ಬರಪೀಡಿತ ಪ್ರದೇಶ ಘೋಷಿಸಿ, ಆರ್ಥಿಕ ಸಹಾಯ ನೀಡಬೇಕು.
> –ರವೀಗೌಡ ಮಲ್ಲದಗುಡ್ಡ
> ರೈತ ಮುಖಂಡರು

## ನೀಟ್: ಹೋರಾಟಕ್ಕೆ ಮುಂದಾಗಲು ಕರೆ

- **ಮಲ್ಲಮ್ಮ ನುಡಿ ವಾರ್ತೆ ಬೀದರ್**

ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಅಕ್ರಮ ಹಾಗೂ ದೆಹಲಿಯ ಜಂತರ್ ಮಂತರ್‌ನಲ್ಲಿ ಪ್ರತಿಭಟನೆ ನಡೆಸುತ್ತಿದ್ದ ವಿದ್ಯಾರ್ಥಿಗಳ ಮೇಲಿನ ಹಲ್ಲೆಯನ್ನು ಖಂಡಿಸಿ ರಾಜ್ಯದ ವಿವಿಧ ಜಿಲ್ಲಾ ಕೇಂದ್ರಗಳಲ್ಲಿ ವಿದ್ಯಾರ್ಥಿ ಸಂಘಟನೆಗಳು ಮತ್ತು ವಿದ್ಯಾರ್ಥಿಗಳು ಪ್ರತಿಭಟನೆ ನಡೆಸುತ್ತಿರುವುದು ಸ್ವಾಗತಾರ್ಹ. ಆದ-ರೆ, ಬೀದರ್ ಜಿಲ್ಲೆಯಲ್ಲಿ ಹೆಚ್ಚಿನ ವಿದ್ಯಾರ್ಥಿಗಳು ಹಾಗೂ ಶಿಕ್ಷಣ ಸಂಸ್ಥೆಗಳು ಮೌನ ವಹಿಸಿರುವುದು ವಿಷಾದನೀಯ ಎಂದು ಕರ್ನಾಟಕ ಯುವ ಸಂಘ ಸಂಸ್ಥೆಗಳ ಒಕ್ಕೂಟದ ಗೌರವ ಅಧ್ಯಕ್ಷ ವಿಜಯಕುಮಾರ ಸೋನಾರೆ ತಿಳಿಸಿದ್ದಾರೆ.



ಈ ಕುರಿತು ಪ್ರಕಟಣೆ ನೀಡಿರುವ ಅವರು, ದೆಹಲಿಯಲ್ಲಿ ಆರಂಭವಾದ ವಿದ್ಯಾರ್ಥಿಗಳ ಹೋರಾಟ ರಾಜ್ಯ ಹಾಗೂ ರಾಷ್ಟ್ರಮಟ್ಟಕ್ಕೆ ವ್ಯಾಪಿಸಿದ್ದರೂ, ಬೀದರ್ ಜಿಲ್ಲೆಯ ಶಿಕ್ಷಣ ಸಂಸ್ಥೆಗಳು, ಮಠಾಧೀಶರು ಹಾಗೂ ವಿದ್ಯಾರ್ಥಿಗಳು ಈ ಗಂಭೀರ ವಿಚಾರದಲ್ಲಿ ಮೌನವಾಗಿರುವುದು ಅರ್ಥವಾಗುತ್ತಿಲ್ಲ ಎಂದು ಹೇಳಿದ್ದಾರೆ.

ವಿದ್ಯಾರ್ಥಿಗಳಿಗೆ ನ್ಯಾಯದೊರೆಯುವವರೆಗೆ ಎಲ್ಲರೂ ಒಗ್ಗಟ್ಟಿನಿಂದ ಹೋರಾಟ ನಡೆಸಬೇಕಿದ್ದು, ಜಿಲ್ಲೆಯ ವಿದ್ಯಾರ್ಥಿಗಳು ಹಾಗೂ ಶಿಕ್ಷಣ ಸಂಸ್ಥೆಗಳು ಈ ಹೋರಾಟಕ್ಕೆ ಬೆಂಬಲವಾಗಿ ಮುಂದೆ ಬರಬೇಕು ಎಂದು ಅವರು ಮನವಿ ಮಾಡಿದ್ದಾರೆ. ಜಿಲ್ಲೆಯಲ್ಲಿ ಶಿಕ್ಷಣವು ವ್ಯಾಪಾರೀಕರಣವಾಗುತ್ತಿರುವ ಹಿನ್ನೆಲೆಯಲ್ಲಿ ಶಿಕ್ಷಣ ಸಂಸ್ಥೆಗಳು ಕಣ್ಮುಚ್ಚಿ ಕುಳಿತುಕೊಳ್ಳುವುದು ಸರಿಯಲ್ಲ. ವಿದ್ಯಾರ್ಥಿಗಳ ಭವಿಷ್ಯಕ್ಕೆ ಸಂಬಂಧಿಸಿದ ಇಂತಹ ಗಂಭೀರ ವಿಷಯಗಳಲ್ಲಿ ಶಿಕ್ಷಣ ಸಂಸ್ಥೆಗಳು ತಮ್ಮ ಸಾಮಾಜಿಕ ಜವಾಬ್ದಾರಿಯನ್ನು ಅರಿತು ಅನ್ಯಾಯದ ವಿರುದ್ಧ ಧ್ವನಿಯೆತ್ತಬೇಕು ಎಂದು ಆಗ್ರಹಿಸಿದ್ದಾರೆ.

## ಫ್ರೆಂಡ್ಸ್ ಯೋಗ ಗ್ರೂಪ್ ಆರಂಭ

- **ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ**

ನಗರದ ಸಪ್ತಸ್ವರ ಸಾಂಸ್ಕೃತಿಕ ಕಲಾಸಂಘದ ಆಶ್ರಯದಲ್ಲಿ ಫ್ರೆಂಡ್ಸ್ ಯೋಗ ಗ್ರೂಪ್ ಅನ್ನು ಆರಂಭಿಸಲಾಗಿದ್ದು, ಜುಲೈ 4ರಿಂದ ಪ್ರತಿದಿನ ಬೆಳಿಗ್ಗೆ 5:30ರಿಂದ 7:00 ಗಂಟೆಯವರೆಗೆ ನಗರದ ನೀಲಕಂಠೇಶ್ವರ ವೃತ್ತದ ಸಮೀಪದ ಪಬ್ಲಿಕ್ ಕ್ಲಬ್ ಆವರಣದಲ್ಲಿರುವ ಶ್ರೀ ಕಲಾನಿಕೇತನ ಸಾಂಸ್ಕೃತಿಕ ವೇದಿಕೆಯಲ್ಲಿ ಯೋಗ ಶಿಬಿರ ಯಶಸ್ವಿಯಾಗಿ ನಡೆಯುತ್ತಿದೆ ಎಂದು ಸಂಘದ ಅಧ್ಯಕ್ಷ ಆರ್. ಕಣ್ಣನ್ ತಿಳಿಸಿದ್ದಾರೆ.

ಯೋಗ ಗುರುಗಳಾದ ಪರಸಪ್ಪ ಕುರುಗೋಡು, ಯಮನೂರಪ್ಪ ಶಿರಿಗೇರಿ, ಶ್ರೀಮತಿ ಪುಷ್ಪಾ ನೆವಣಕ್ಕಿ ಹಾಗೂ ಜಯಶ್ರೀ ಹಳ್ಯಾಳ ಅವರ ಮಾರ್ಗದರ್ಶನದಲ್ಲಿ ಶಿಬಿರ ನಡೆಯುತ್ತಿದ್ದು, ಕಳೆದ 20 ದಿನಗಳಿಂದ ಅನೇಕ ಯೋಗಾಸಕ್ತರು ನಿಯಮಿತವಾಗಿ ಭಾಗವಹಿಸಿ ಆರೋಗ್ಯಕರ ಜೀವನಶೈಲಿಯತ್ತ ಹೆಜ್ಜೆ ಇಡುತ್ತಿದ್ದಾರೆ.



ಶಿಬಿರದಲ್ಲಿ ಆರ್. ಮರೇಗೌಡ ಹೊಸಳ್ಳಿ, ಶ್ಯಾಮಣ್ಣ ತಟ್ಟಿ, ವಿರೇಶ ಪಪ್ಪಿ, ರಾಮಕೃಷ್ಣ ಸಿ.ಡಿ., ವೆಂಕಟೇಶ ಕುರುಗೋಡು, ಗುರುಪ್ರಸಾದ, ಸುರೇಶ್ ಸಂಗಪ್ಪ ಗಾಜಿ, ಭೀಮೇಶ ಹಡಪದ, ದೇವೇಂದ್ರ ಬಡಿಗೇರ, ಮಾರುತಿ ರಾಯಕರ್, ಮಂಜುನಾಥ ಮಸ್ಕಿ, ಸಣ್ಣ ಮಾರುತಿ ಐಲಿ, ಲಕ್ಷ್ಮೀ ಪಾಟೀಲ್ ಹಾಗೂ ಎಂ.ಎಸ್. ಸತ್ಯನಾರಾಯಣ ಸೇರಿದಂತೆ ಹಲವರು ಭಾಗವಹಿಸಿ ಶಿಬಿರವನ್ನು ಯಶಸ್ವಿಗೊಳಿಸಿದ್ದಾರೆ.

ಈ ಸಂದರ್ಭದಲ್ಲಿ ಸಂಘದ ಗೌರವಾಧ್ಯಕ್ಷ ಮಲ್ಲಿಕಾರ್ಜುನ ತಟ್ಟಿ, ಪ್ರಧಾನ ಕಾರ್ಯದರ್ಶಿ ವಿರೇಶ ಹಿರೇಮಠ ಸೇರಿದಂತೆ ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದರು.

## ಜಿಮ್‌ಗೆ ಹೋಗುವ ಮುನ್ನ ಹೃದಯ ತಪಾಸಣೆ ಕಡ್ಡಾಯ

- **ಮಲ್ಲಮ್ಮ ನುಡಿ ವಾರ್ತೆ ಬೀದರ್**

ಜಿಮ್ ಕೇಂದ್ರಗಳಿಗೆ ಹೋಗುವ ಪ್ರತಿಯೊಬ್ಬರೂ ವ್ಯಾಯಾಮ ಆರಂಭಿಸುವ ಮೊದಲು ಹೃದಯದ ಸಮಗ್ರ ತಪಾಸಣೆ ಮಾಡಿಸಿಕೊಂಡು ವೈದ್ಯರಿಂದ ಫಿಟ್ನೆಸ್ ಪ್ರಮಾಣ ಪತ್ರ ಪಡೆಯುವುದು ಅತ್ಯಗತ್ಯ ಎಂದು ಗುದಗೆ ಆಸ್ಪತ್ರೆಯ ಹೃದಯ ತಜ್ಞ ಡಾ. ನಿತಿನ್ ಗುದಗೆ ಸಲಹೆ ನೀಡಿದರು.

ನಗರದ ಗುದಗೆ ಆಸ್ಪತ್ರೆಯಲ್ಲಿ ಜಿಮ್ ತರಬೇತುದಾರರಿಗಾಗಿ ಹಮ್ಮಿಕೊಂಡಿದ್ದ "ಹೃದಯಾಘಾತ ಜಾಗೃತಿ ಶಿಬಿರ" ಉದ್ಘಾಟಿಸಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಯುವಕರಲ್ಲಿಯೂ ಹೃದಯಾಘಾತ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಜಿಮ್ ಕೋಚ್‌ಗಳು ಹಾಗೂ ವ್ಯಾಯಾಮ ಮಾಡುವವರು ಹೆಚ್ಚಿನ ಎಚ್ಚರಿಕೆ ವಹಿಸಬೇಕು ಎಂದು ತಿಳಿಸಿದರು. ವ್ಯಾಯಾಮ ಆರೋಗ್ಯಕ್ಕೆ ಅತ್ಯಂತ ಉತ್ತಮವಾದರೂ ಸುರಕ್ಷತೆಗೆ ಮೊದಲ ಆದ್ಯತೆ ನೀಡಬೇಕು ಎಂದು ಹೇಳಿದರು.




ಜಿಮ್ ತರಬೇತುದಾರರು ಹೊಸ ಸದಸ್ಯರ ಆರೋಗ್ಯದ ಮಾಹಿತಿ ಕಡ್ಡಾಯವಾಗಿ ಪಡೆದುಕೊಳ್ಳಬೇಕು. ಅಧಿಕ ರಕ್ತದೊತ್ತಡ, ಮಧುಮೇಹ ಅಥವಾ ಹೃದಯ ಸಂಬಂಧಿ ಸಮಸ್ಯೆ ಇರುವವರಿಗೆ ವೈದ್ಯರ ಸಲಹೆಯಂತೆ ಮಾತ್ರ ವ್ಯಾಯಾಮ ಮಾಡಿಸಬೇಕು. ವ್ಯಾಯಾಮಕ್ಕೂ ಮುನ್ನ ವಾರ್ಮ್-ಅಪ್ ಹಾಗೂ ನಂತರ ಕೂಲ್-ಡೌನ್ ಕಡ್ಡಾಯವಾಗಿರಬೇಕು. ಸಾಮರ್ಥ್ಯ ಮೀರಿದ ವ್ಯಾಯಾಮ ಅಥವಾ ಅತಿಯಾದ ಭಾರ ಎತ್ತಲು ಒತ್ತಾಯಿಸಬಾರದು ಎಂದು ಸಲಹೆ ನೀಡಿದರು.

ವ್ಯಾಯಾಮದ ವೇಳೆ ಎದೆನೋವು, ಉಸಿರಾಟದ ತೊಂದರೆ ಅಥವಾ ತಲೆಸುತ್ತು ಕಾಣಿಸಿಕೊಂಡರೆ ತಕ್ಷಣ ವ್ಯಾಯಾಮ ನಿಲ್ಲಿಸಿ 108 ಆಂಬುಲೆನ್ಸ್ ಕರೆ ಮಾಡಬೇಕು. ವ್ಯಕ್ತಿಯನ್ನು ಶಾಂತವಾಗಿ ಕುಳ್ಳಿರಿಸಿ ಅಥವಾ ಮಲಗಿಸಿ, ಪ್ರಜ್ಞೆ ಇಲ್ಲದೆ ಉಸಿರಾಟ ನಿಂತಿದ್ದರೆ ಸಿಪಿಆರ್ ತರಬೇತಿ ಪಡೆದವರು ತಕ್ಷಣ ಆರಂಭಿಸಬೇಕು. ವೈದ್ಯಕೀಯ ನೆರವು ಬರುವವರೆಗೆ ವ್ಯಕ್ತಿಯನ್ನು ಒಬ್ಬಂಟಿಯಾಗಿ ಬಿಡಬಾರದು ಎಂದು ಡಾ. ನಿತಿನ್ ಗುದಗೆ ತಿಳಿಸಿದರು.

ವೇದಿಕೆ ಮೇಲೆ ಡಾ.ಸಚೀನ ಗುದಗೆ, ಡಾ. ಮಹೇಶ ತೊಂಡಾರೆ,ಡಾ.ಸುಕಾನಂದ, ಸೇರಿದಂತೆ ಮತಿತ್ತರು ಉಪಸ್ಥಿತರಿದ್ದರು, ಈ ಶಿಬಿರದಲ್ಲಿ ಸಾಕಷ್ಟು ಜೀಮ್ ತರಬೇತಿದಾರರು ಉಪಸ್ಥಿತರಿದ್ದರು.

> ಹೃದಯಾಘಾತದ ಪ್ರಮುಖ ಲಕ್ಷಣಗಳಾದ ಎದೆಯಲ್ಲಿ ತೀವ್ರ ನೋವು ಅಥವಾ ಒತ್ತಡ, ನೋವು ಎಡಗೈ, ಕುತ್ತಿಗೆ, ದವಡೆ ಅಥವಾ ಬೆನ್ನಿಗೆ ಹರಡುವುದು, ಉಸಿರಾಟದ ತೊಂದರೆ, ಅತಿಯಾದ ಬೆವರು, ತಲೆಸುತ್ತು, ವಾಂತಿ ಅಥವಾ ವಾಕರಿಕೆ ಹಾಗೂ ತೀವ್ರ ಆಯಾಸ ಕಂಡುಬಂದರೆ ತಕ್ಷಣ ವೈದ್ಯಕೀಯ ನೆರವು ಪಡೆಯಬೇಕು.
> –ಡಾ.ಚಂದ್ರಕಾಂತ ಗುದಗೆ
> ಹೃದಯ ತಜ್ಞರು ಹಾಗೂ ಗುದಗೆ
> ಆಸ್ಪತ್ರೆಯ ಅಧ್ಯಕ್ಷರು

## ಮೊಟ್ಟೆ ಎಸೆತಕ್ಕೆ ಬಿಜೆಪಿ ಆಕ್ರೋಶ: ಪ್ರತಿಭಟನಾ ಮೆರವಣಿಗೆ






- **ಮಲ್ಲಮ್ಮ ನುಡಿ ವಾರ್ತೆ ಬೀದರ್**

ಶಾಸಕ ಬಿ.ಪಿ. ಹರೀಶ್ ಅವರ ಮೇಲೆ ಮೊಟ್ಟೆ ಎಸೆದ ಘಟನೆ ಹಾಗೂ ಪ್ರಧಾನಿ ನಿವಾಸದ ಮುಂದೆ ಕಾಂಗ್ರೆಸ್ ನಡೆಸಿದ ಪ್ರತಿಭಟನೆಯನ್ನು ಖಂಡಿಸಿ ಬೀದರ್‌ನಲ್ಲಿ ಬಿಜೆಪಿ ವತಿಯಿಂದ ಬೃಹತ್ ಪ್ರತಿಭಟನೆ ನಡೆಯಿತು. ಬಿಜೆಪಿ ಮುಖಂಡರು ಹಾಗೂ ನೂರಾರು ಕಾರ್ಯಕರ್ತರು ಕಾಂಗ್ರೆಸ್ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ ಪ್ರತಿಭಟನಾ ಮೆರವಣಿಗೆ ನಡೆಸಿದರು .

ನಗರದ ಗಣೇಶ್ ಮೈದಾನದಿಂದ ಆರಂಭವಾದ ಪ್ರತಿಭಟನಾ ರ್‍ಯಾಲಿ ತಹಶೀಲ್ದಾರ್ ಕಚೇರಿವರೆಗೆ ಸಾಗಿತು . ಹರಳಯ್ಯ ಸರ್ಕಲ್, ಮಡಿವಾಳೇಶ್ವರ್ ಸರ್ಕಲ್ ಹಾಗೂ ಅಂಬೇಡ್ಕರ್ ಸರ್ಕಲ್ ಮಾರ್ಗವಾಗಿ ಸಾಗಿದ ಮೆರವಣಿಗೆಯಲ್ಲಿ ಬಿಜೆಪಿ ಕಾರ್ಯಕರ್ತರು ಕಾಂಗ್ರೆಸ್ ವಿರುದ್ಧ ಘೋಷಣೆಗಳನ್ನು ಕೂಗಿದರು .

ಪ್ರತಿಭಟನೆ ವೇಳೆ ಬಿಜೆಪಿ ಮುಖಂಡರು ಮಾತನಾಡಿ, ಜನಪ್ರತಿನಿಧಿಯೊಬ್ಬರ ಮೇಲೆ ಮೊಟ್ಟೆ ಎಸೆದಿರುವುದು ಪ್ರಜಾಪ್ರಭುತ್ವ ವ್ಯವಸ್ಥೆಗೆ ಧಕ್ಕೆ ತರುವ ಘಟನೆ ಎಂದು ಆರೋಪಿಸಿದರು. ರಾಜಕೀಯ ವಿರೋಧ ವ್ಯಕ್ತಪಡಿಸಲು ಪ್ರಜಾಸತ್ತಾತ್ಮಕ ಮಾರ್ಗಗಳಿವೆ, ಆದರೆ ದೈಹಿಕ ದಾಳಿ ಅಥವಾ ಅವಮಾನಕಾರಿ ಕೃತ್ಯಗಳನ್ನು ಒಪ್ಪಲು ಸಾಧ್ಯವಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು .

ಪ್ರಧಾನಿ ನಿವಾಸದ ಮುಂದೆ ಕಾಂಗ್ರೆಸ್ ನಡೆಸಿದ ಪ್ರತಿಭಟನೆಯನ್ನೂ ಬಿಜೆಪಿ ನಾಯಕರು ಖಂಡಿಸಿದರು. ದೇಶದ ಪ್ರಧಾನಿಯವರ ನಿವಾಸದ ಮುಂದೆ ರಾಜಕೀಯ ಪ್ರದರ್ಶನ ನಡೆಸುವುದು ಸಂಸದೀಯ ಮೌಲ್ಯಗಳಿಗೆ ವಿರುದ್ಧವಾಗಿದೆ ಎಂದು ಆರೋಪಿಸಿದರು .

ರ್‍ಯಾಲಿಯು ತಹಶೀಲ್ದಾರ್ ಕಚೇರಿ ತಲುಪಿದ ಬಳಿಕ ಪ್ರತಿಭಟನಾಕಾರರು ಕಚೇರಿಗೆ ಮುತ್ತಿಗೆ ಹಾಕಲು ಯತ್ನಿಸಿದರು. ಈ ವೇಳೆ ಪೊಲೀಸರು ಮುನ್ನೆಚ್ಚರಿಕಾ ಕ್ರಮವಾಗಿ ಬ್ಯಾರಿಕೇಡ್‌ಗಳನ್ನು ಅಳವಡಿಸಿ ಪ್ರತಿಭಟನಾಕಾರರನ್ನು ತಡೆದರು. ಸ್ಥಳದಲ್ಲಿ ಕೆಲಕಾಲ ಬಿಗುವಿನ ವಾತಾವರಣ ನಿರ್ಮಾಣವಾಗಿತ್ತು.

ಪ್ರತಿಭಟನೆಯಲ್ಲಿ ಬಿಜೆಪಿ ಮುಖಂಡರು ಕಾಂಗ್ರೆಸ್ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು. ಶಾಸಕರ ಮೇಲೆ ನಡೆದಿರುವ ಘಟನೆ ಕಾಂಗ್ರೆಸ್‌ನ ಗೂಂಡಾ ಸಂಸ್ಕೃತಿಯನ್ನು ತೋರಿಸುತ್ತದೆ ಎಂದು ಆರೋಪಿಸಿದ ನಾಯಕರು, ಇಂತಹ ಘಟನೆಗಳನ್ನು ರಾಜ್ಯದ ಜನತೆ ಸಹಿಸುವುದಿಲ್ಲ ಎಂದು ಹೇಳಿದರು .

ಇದೇ ವೇಳೆ, ರಾಹುಲ್ ಗಾಂಧಿ ಅವರ ವಿರುದ್ಧವೂ ಘೋಷಣೆಗಳನ್ನು ಕೂಗಿದ ಕಾರ್ಯಕರ್ತರು, ಕಾಂಗ್ರೆಸ್ ನಾಯಕತ್ವದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು. ರಾಜಕೀಯ ಹೋರಾಟಗಳು ಪ್ರಜಾಪ್ರಭುತ್ವದ ಮೌಲ್ಯಗಳನ್ನು ಕಾಪಾಡಿಕೊಂಡು ನಡೆಯಬೇಕು ಎಂದು ಬಿಜೆಪಿ ನಾಯಕರು ಒತ್ತಾಯಿಸಿದರು .

ಪ್ರತಿಭಟನೆಯಲ್ಲಿ ಮಾಜಿ ಕೇಂದ್ರಸಚಿವ ಭಗವಂತ್ ಖೂಬ, ಶಾಸಕ ಶೈಲೇಂದ್ರ ಬೆಲ್ದಾಳೆ, ಮಾಜಿ ಶಾಸಕ ಪ್ರಕಾಶ್ ಖಂಡ್ರೆ , ಬಿಜೆಪಿ ಜಿಲ್ಲಾಧ್ಯಕ್ಷರಾದ ಸೋಮನಾಥ ಪಾಟೀಲ್, ಈಶ್ವರಸಿಂಗ ಠಾಕೂರ್ ಸೇರಿ0ದಂತೆ ಬಿಜೆಪಿ ಮುಖಂಡರು, ಕಾರ್ಯಕರ್ತರು ಹಾಗೂ ಬೆಂಬಲಿಗರು ಭಾಗವಹಿಸಿದ್ದರು . ಸ್ಥಳದಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಪೊಲೀಸರು ಭದ್ರತಾ ವ್ಯವಸ್ಥೆ ಕೈಗೊಂಡಿದ್ದರು .

# 27ರಂದು ಆಳಂದದಲ್ಲಿ ಬರಗಾಲ ಘೋಷಣೆಗೆ ಬಿಜೆಪಿ ಪ್ರತಿಭಟನೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಮನವಿ

ಆಳಂದ: ಆಳಂದ ತಾಲೂಕನ್ನು ತಕ್ಷಣವೇ ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸಿ ರೈತರಿಗೆ ಅಗತ್ಯ ಪರಿಹಾರ ಹಾಗೂ ನೆರವು ಒದಗಿಸುವಂತೆ ರಾಜ್ಯ ಸರ್ಕಾರವನ್ನು ಒತ್ತಾಯಿಸಿ ದಿ. 27 ಜುಲೈ 2026, ಸೋಮವಾರ ಬೆಳಿಗ್ಗೆ 11.00 ಗಂಟೆಗೆ ಆಳಂದ ಬಸ್ ನಿಲ್ದಾಣದ ಎದುರು ಆಳಂದ ಮಂಡಲ ಭಾರತೀಯ ಜನತಾ ಪಕ್ಷದ ವತಿಯಿಂದ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಆಳಂದ ಮಂಡಲ ಬಿಜೆಪಿ ಅಧ್ಯಕ್ಷ ಮಲ್ಲಿಕಾರ್ಜುನ ಕಂದಗೂಳೆ ತಿಳಿಸಿದ್ದಾರೆ.



ಈ ವರ್ಷ ಸಮರ್ಪಕ ಮಳೆಯಾಗದ ಕಾರಣ ಆಳಂದ ತಾಲೂಕಿನ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಬಿತ್ತನೆ ಮಾಡಿದ ಬೆಳೆಗಳು ಒಣಗುತ್ತಿದ್ದು, ಕೆರೆ-ಕಟ್ಟೆಗಳು, ಹಳ್ಳ-ಕೊಳ್ಳಗಳು ನೀರಿಲ್ಲದೆ ಖಾಲಿಯಾಗುತ್ತಿವೆ. ಜಾನುವಾರುಗಳಿಗೆ ಮೇವು ಹಾಗೂ ಕುಡಿಯುವ ನೀರಿನ ಸಮಸ್ಯೆಯೂ ದಿನದಿಂದ ದಿನಕ್ಕೆ ಗಂಭೀರವಾಗುತ್ತಿದೆ. ಇಂತಹ ಪರಿಸ್ಥಿತಿಯಲ್ಲಿಯೂ ಸರ್ಕಾರ ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸಲು ವಿಳಂಬ ಮಾಡುತ್ತಿರುವುದು ರೈತರಲ್ಲಿ ತೀವ್ರ ಆತಂಕ ಮತ್ತು ಅಸಮಾಧಾನಕ್ಕೆ ಕಾರಣವಾಗಿದೆ ಎಂದು ಅವರು ಹೇಳಿದ್ದಾರೆ.

ಪ್ರತಿಭಟನೆಯ ಮೂಲಕ ಆಳಂದ ತಾಲೂಕನ್ನು ತಕ್ಷಣವೇ ಬರಪೀಡಿತ ಪ್ರದೇಶವೆಂದು ಘೋಷಿಸುವುದು, ರೈತರಿಗೆ ಸೂಕ್ತ ಬರ ಪರಿಹಾರ, ಬೆಳೆಹಾನಿ ಪರಿಹಾರ, ಬಡ್ಡಿರಹಿತ ಸಾಲ ಸೌಲಭ್ಯ, ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಜಾನುವಾರುಗಳಿಗೆ ಮೇವು ಒದಗಿಸುವಂತೆ ಸರ್ಕಾರವನ್ನು ಒತ್ತಾಯಿಸಲಾಗುವುದು ಎಂದು ತಿಳಿಸಿದ್ದಾರೆ.

ಈ ಹೋರಾಟವು ರೈತರ ಹಾಗೂ ಸಾರ್ವಜನಿಕರ ಹಿತಾಸಕ್ತಿಗಾಗಿ ನಡೆಸಲಾಗುತ್ತಿದ್ದು, ರೈತರು, ಸಾರ್ವಜನಿಕರು, ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ಜನಪ್ರತಿನಿಧಿಗಳು ಹಾಗೂ ಬಿಜೆಪಿ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಪ್ರತಿಭಟನೆಯನ್ನು ಯಶಸ್ವಿಗೊಳಿಸುವಂತೆ ಮಲ್ಲಿಕಾರ್ಜುನ ಕಂದಗೂಳೆ ಮನವಿ ಮಾಡಿದ್ದಾರೆ.

# ಮೇವು, ಕುಡಿಯುವ ನೀರಿಗೆ ತೊಂದರೆ ಯಾಗದಂತೆ ಕ್ರಮವಹಿಸಿ: ಶಾಸಕ ಯಶವಂತರಾಯಗೌಡರು




- **ಮಲ್ಲಮ್ಮ ನುಡಿ ವಾರ್ತೆ ಇಂಡಿ**

ತಾಲೂಕಿನಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗಿದೆ. ರೈತ ಆಘಾತಕ್ಕೆ ಒಳಪಟ್ಟಿದ್ದಾನೆ. ಕಾರಣ ಇಂಡಿ ಪಟ್ಟಣ ಸೇರಿದಂತೆ ಎಲ್ಲ ಗ್ರಾಮಗಳಲ್ಲೂ ಕುಡಿಯುವ ನೀರು ಮತ್ತು ಜನ ಜಾನುವಾರುಗಳಿಗೆ ಮೇವಿನ ತೆ-ೂಂದರೆ ಯಾಗದಂತೆ ನೋಡಿಕೊಳ್ಳಿ ಎಂದು ಶಾಸಕ ಯಶವಂತರಾಯಗೌಡ ಪಾಟೀಲರು ಹೇಳಿದರು. ನಗರದ ತಾ.ಪಂ ಸಬಾಭವನದಲ್ಲಿ ತಾಲೂಕಿನ ಎಲ್ಲ ಅಧಿಕಾರಿಗಳ ಮತ್ತು ಗ್ರಾ.ಪಂ ಅಧಿಕಾರಿಗಳ ಟಾಸ್ಕಫೋರ್ಸ ಸಭೆಯಲ್ಲಿ ಮಾತನಾಡಿದರು.

ಈಗಾಗಲೇ ಕೃಷ್ಣಾಮೇಲ್ದಂಡೆಯೋಜನೆಯಿಂದ ಒಂದುವರೆ ಟಿ.ಎಂ.ಸಿ ನೀರು ಬಿಡಲಾಗಿದೆ. ತಾಲೂಕಿನ ಎಲ್ಲ ಕೆರೆಗಳನ್ನು ತುಂಬಲಾಗುತ್ತಿದೆ. ಎಲ್ಲಿ ಅವಶ್ಯಕತೆ ಇದೆ. ಅಲ್ಲಿ ನೀರು ಪೂರೈಸಬೇಕು. ಅವಶ್ಯವೆನಿಸಿದರೆ ಖಾಸಗಿ ಬೋರುಗಳಿಂದ ನೀರು ಪಡೆದು ನೀರು ಪೂರೈಸಬೇಕೆಂದರು.

ಎಸ್.ಐ.ಆರ್ ಕಾರ್ಯ ಒಳ್ಳೆಯ ರೀತಿಯಲ್ಲಿ ನಡೆದಿದ್ದು ಜಿಲ್ಲೆಯಲ್ಲಿಯೇ ತಾಲೂಕು ಪ್ರಥಮ ಸ್ಥಾನದಲ್ಲಿದೆ. ಎಸ್.ಐ.ಆರ್ ಮುಂದುವರೆದಿದ್ದು ಮತ್ತು ಕಾರ್ಯ ತೀರ್ವಗೊಳಿಸಿ ಜಿಲ್ಲೆಯಲ್ಲಿಯೇ ಪ್ರಥಮ ಸ್ಥಾನದಲ್ಲಿರುವಂತೆ ನೋಡಿಕೊಳ್ಳಬೇಕೆಂದರು.

ಕೃಷಿ ಸಹಾಯಕ ನಿರ್ದೇಶಕ ಮಹಾದೇವಪ್ಪ ಏವೂರ ಮಾತನಾಡಿ ತಾಲೂಕಿನಲ್ಲಿ ಒಂದು ಲಕ್ಷ 76 ಸಾವಿರ ಹೇಕ್ಟರ್ ಪ್ರದೇಶ ಬಿತ್ತನೆ ಗುರಿ ಹೊಂದ ಲಾಗಿತ್ತು. ಆದರೆ ಬಿತ್ತನೆ ಒಂದು ಲಕ್ಷ 15 ಸಾವಿರ ಹೇಕ್ಟರ್ ಪ್ರದೇಶದಲ್ಲಿ ಆಗಿದೆ. ಶೇ 65 ಬಿತ್ತನೆ ಯಾಗಿದೆ, ರೈತರು ಹತ್ತಿ, ತೊಗರಿ, ಮೆಕ್ಕೆಜೋಳ ಮತ್ತು ಕಬ್ಬು ಹೆಚ್ಚಿನ ಪ್ರಮಾಣದಲ್ಲಿ ಬೆಳೆದಿದ್ದಾರೆ ಎಂದರು.

ಮಳೆ ಕೊರತೆ ಇದೆ. ರೈತರು ಬೆಳೆ ವಿಮೆ ಮಾಡಬೇಕು ಎಂದರು. ಮತ್ತು ಬೆಳೆ ವಿಮೆ ಕುರಿತು ಗ್ರಾ.ಪಂ ಅಧಿಕಾರಿಗಳು ತಾಲೂಕಿನ ಎಲ್ಲ ಅಧಿಕಾರಿಗಳು ರೈತರಿಗೆ ತಿಳುವಳಿಕೆ ನೀಡಬೇಕು ಎಂದರು. ಗ್ರಾಮೀಣ ನೀರು ಸರಬರಾಜು ಮಂಡಳಿಯ ಆರ್.ಎಸ್.ಬಂಡಿ ಮಾತನಾಡಿ ತಾಲೂಕಿನಲ್ಲಿ ಕೃಷ್ಣಾ ಕಾಲುವೆಯಿಂದ ಹಂಜಗಿ, ಹೊರ್ತಿ, ಸಂಗೋಗಿಕೆರೆ ತುಂಬಿದ್ದು ಎಲ್ಲ ಕೆರೆಗಳನ್ನು ತುಂಬಲಾಗುವದು ಎಂದರು. ಸಣ್ಣ ನಿರಾವರಿ ಇಲಾಖೆಯ ಎಇಇ ಸಂದೀಪ ಕಡಲೂರ ಮಾತನಾಡಿ ಬಸನಾಳ, ಗುಂದವಾನ, ತಡವಲಗಾ ಕೊಳುರಗಿ, ದೇಗಿನಾಳ, ನಿಂಬಾಳ, ಅರ್ಜನಾಳ ಬಬಲಾದ ಹಡಲಸಂಗ ಹಿರೇಬೇವನೂರ ಕೆರೆಗಳನ್ನು ತುಂಬಿಸಲಾಗುತ್ತಿದೆ. ಕೆಲವೊಂದರಲ್ಲಿ ಶೇ 10 ಮತ್ತು ಕೆಲವೊಂದರಲ್ಲಿ ಶೇ 20 ರಷ್ಟು ನೀರಿದೆ ಎಂದರು.

ಪಶು ಸಂಗೋಪನಾ ಇಲಾಖೆಯ ಡಾ. ರಾಜಕುಮಾರ ಅಡಕಿ, ಹೆಸ್ಕಾಂನ ಎಸ್.ಎ.ಬಿರಾದಾರ, ಆರ್.ಎಸ್.ಮೆಂಡೆಗಾರ, ಲೋಕೋಪಯೋಗಿ ಇಲಾಖೆಯ ದಯಾನಂದ ಮಠ, ಜಲಧಾರೆ ಯೋಜನೆಯ ಮಲ್ಲಿಕಾರ್ಜುನ ತೋಟಗಾರಿಕೆ ಇಲಾಖೆಯ ಸತೀಶ ಬಡಿಗೇರ ಮಾತನಾಡಿ ದರು. ವೇದಿಕೆಯ ಮೇಲೆ ಜಿ.ಪಂ ಉಪಕಾರ್ಯದರ್ಶಿ ಬಿ.ಎ.ಸೌದಾಗರ, ಕಂದಾಯ ಉಪವಿಬಾಗಾಧಿಕಾರಿ ಚಿದಾನಂದ ಗುರುಸ್ವಾಮಿ, ತಹಸೀಲ್ದಾರ ನಾಗೇಂದ್ರ ಕೋಳಶೆಟ್ಟಿ, ನಗರಾಭಿವೃದ್ದಿ ಪ್ರಾಧಿಕಾರದ ಅಧ್ಯಕ್ಷ ಅಜೀತ ಧನಶೆಟ್ಟಿ ಮತ್ತಿತರಿದ್ದರು. ಸಭೆಯಲ್ಲಿ ತಾಲೂಕಿನ ಎಲ್ಲ ಇಲಾಖೆಯ ಅಧಿಕಾರಿಗಳು ಮತ್ತು ಗ್ರಾ.ಪಂ ಪಿಡಿಒ ಮತ್ತಿತರಿದ್ದರು.

**:CITATION:**

**IN THE COURT OF THE PRL. CIVIL JUDGE AND JMFC., AT HUMNABAD.**

CRL. MISC. No.4231/2026.

**Petitioners:**

1. Rajappa S/o late Thippanna, Age: 41-yrs. Occu: Agriculture, R/o H. No. 1/105 Village Jalasangi. Tq. Humnabad. Dist. Bidar.
2. Anand S/o late Thippanna Gawa, Age: 36-yrs. Occu: Agriculture, R/o Village Jalasangi. Tq. Humnabad. Dist. Bidar.

**Respondent:**

**The Registrar of Birth and Death through The Tahasildar Humnabad. Dist. Bidar.**

**Sub: Petition U/Sec. 13(3) of Birth and Death Registration Act-1969**

Whereas, the above mentioned petitioner has filed the petition under section 13(3) of Birth and Death Registration Act-1969 praying this Honorable Court to issue Death Certificate of Mother of petitioner No.1 and 2 by namely LATE. NIRMALA W/O TIPPANNA, he has died on 17.08.2023 at Village Dhumansur. Tq. Humnabad, Dist. Bidar. The petitioner claiming the Death Certificate of said for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this Court on 02.09.2026 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 20-07-2026.

**//By order of the court//**
**Chief Ministerial Officer,**
**Prl. Civil Judge & JMFC Court,**
**Humnabad.**



ವಿಜಯನಗರ ಜಿಲ್ಲೆ (ಹೊಸಪೇಟೆ): ಕನ್ನಡ ವಿಶ್ವವಿದ್ಯಾಲಯದ ಶಾಸನಶಾಸ್ತ್ರ ವಿಭಾಗದ ಪ್ರಾಧ್ಯಾಪಕರು ಹಾಗೂ ಮುಖ್ಯಸ್ಥರಾಗಿದ್ದ ಡಾ.ಅಮರೇಶ ಯತಗಲ್ ಅವರು ಮಹಾತ್ಮಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯ, ಗದಗ ಇಲ್ಲಿ ನೂತನ ಕುಲಸಚಿವರಾಗಿ ನಿಯೋಜನೆಗೊಂಡಿದ್ದಾರೆ. ಅವರಿಗೆ ಕನ್ನಡ ವಿಶ್ವವಿದ್ಯಾಲಯದ ಪರವಾಗಿ ಹೃತ್ಪೂರ್ವಕ ಅಭಿನಂದನೆಗಳು ಹಾಗೂ ಶುಭ ಹಾರೈಕೆಗಳನ್ನು ಸಲ್ಲಿಸಿದ್ದಾರೆ.

**:CITATION:**

**IN THE COURT OF THE PRL. CIVIL JUDGE AND JMFC., AT HUMNABAD.**

CRL. MISC. No.4252/2026.

**Petitioners :**

1. Saleha Begum W/o Jaleel Miyan, Age: 60-yrs. Occu: House hold. R/o Shivapur Galli Humnabad.
2. Nasreen Begum D/o Jaleel Miyan, W/o Syed Taher, Age: 40-yrs. Occu: House hold. R/o Shivapur Galli Humnabad now at Yousuf Guda Hyderabad.
3. Mohammed Yunus S/o Mohammed Jaleel Khan, Age: 39-yrs. Occu: Agriculture. R/o Shivapur Galli Humnabad.
4. Shaheda Begum D/o Jaleel Miyan W/o Md. Ahmed, Age: 37-yrs. Occu : House hold. R/o Shivapur Galli Humnabad now at Charminar Falaknuma Hyderabad.
5. Shahin Begum D/o Jaleel Miyan W/o Basheer Ahmed, Age: 38-yrs. Occu: House hold, R/o Shivapur Galli Humnabad now at Muttangi, Tq. Chitguppa. Dist. Bidar.
6. Shaik Ibraheem S/o Shaik Jaleel, Age: 34-yrs. Occu: Agriculture. R/o Shivapur Galli Humnabad now at Yousuf guda Hyderabad.

**Respondent:**

**The Registrar of Birth and Death through The Chief officer TMC Humnabad.**

**Sub: Petition U/Sec. 13(3) of Birth and Death Registration Act-1969**

Whereas, the above mentioned petitioners have filed the petition under section 13(3) of Birth and Death Registration Act-1969 praying this Honorable Court to issue Death Certificate of husband of petitioner No.1 and Father of the petitioner No. 2 to 6 by namely LATE. JALEEL MIYAN S/O DASTAGIR KHAN, who has died on 27.07.1992 at Shivapur Galli, Humnabad Dist. Bidar. The petitioners claiming the Death Certificate of said for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this Court on 24.09.2026 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 23-07-2026

**//By order of the court//**
**Chief Ministerial Officer,**
**Prl. Civil Judge & JMFC Court,**
**Humnabad.**

# ಹಳೆ ಕಾಲುವೆಯ ದುರಸ್ತಿಗಾಗಿ,ದಶಕಗಳಿಂದ ರೈತ ಸಂಘದ ಹೋರಾಟ



- **ಮಲ್ಲಮ್ಮ ನುಡಿ ವಾರ್ತೆ(ಹೊಸಪೇಟೆ)**

ಕಮಲಾಪುರ ಪಟ್ಟಣದ ಡಾ/ಬಿ.ಆರ್.ಅಂಬೇಡ್ಕರ್ ಪುತ್ತಳಿಗೆ ಮಾಲಾರ್ಪಣೆ ಮಾಡುವ ಮೂಲಕ ಏನೇ ಬರಲಿ ಒಗ್ಗಟ್ಟಿರಲಿ ಎಂಬ ಘೋಷಣೆಗಳ ಮುಖಾಂತರ ರೈತರ ಹಕ್ಕುಗಳಿಗಾಗಿ ಹೋರಾಟವನ್ನು ಕರ್ನಾಟಕ ರೈತ ಸಂಘ ಹಾಗೂ ಹಸಿರು ಸೇನೆಯು, ಡಾ/ಬಿ ಆರ್ ಅಂಬೇಡ್ಕರ್ ಕರ್ನಾಟಕ ರೈತ ಸಂಘ ಹಾಗೂ ಹಸಿರು ಸೇನೆಯ ಜಿಲ್ಲಾಧ್ಯಕ್ಷ ಬಿ.ಎಂ.ಹುಲುಗಪ್ಪನವರ ನೇತೃತ್ವದಲ್ಲಿ ಹೋರಾಟ ಹಮ್ಮಿಕೊಳ್ಳಲಾಗಿತ್ತು. ಹಳೆ ಕಾಲುವೆಗಳ ದುರಸ್ತಿಗಾಗಿ ಸುಮಾರು ದಶಕಗಳಿಂದ ರೈತರು ಹೋರಾಟ ಮಾಡ್ತಾ ಬಂದರು ರೈತರಿಗೆ ಯಾವುದೇ ರೀತಿಯ ನ್ಯಾಯ ಸಿಕ್ಕಿರುವುದಿಲ್ಲ ಆದ್ದರಿಂದ ನಾವುಗಳು ರೈತರ ಉಳಿವಿಗಾಗಿ ಕಾಲುವೆಗಳ ದುರಸ್ತಿ ಮಾಡಲು ಮನವಿ ಮಾಡಿ. ರಾಜ್ಯಾಧ್ಯಕ್ಷರು ಶರಣಪ್ಪ ದೊಡ್ಡಮನಿ, ಅವರು ಮಾತನಾಡಿ ವಿಜಯನಗರ ಕಾಲದ ಅರಸರ ಕಾಲುವೆ ತುರ್ತು ಕಾಲುವೆಯು ಅಂದಾಜು ಎರಡು ಸಾವಿರ ಎಕರೆಗಳ ಬೆಳೆಗಳಿಗೆ ನೀರು ಹರಿಯುತ್ತದೆ. ಕಾಲುವೆ ನೀರು ಅಣೆಕಟ್ಟಿನಿಂದ ಹರಿದುಕೊಂಡು ಬುಕ್ಕಸಾಗರದವರೆಗೆ ಹರಿದು ಕೊನೆಗೊಂಡು ನದಿಗೆ ಸೇರುತ್ತದೆ, ಕಾಲುವೆಯ ದುರಸ್ತಿಗಾಗಿ ಕೇಂದ್ರ ಸರ್ಕಾರದಿಂದ ಹಣ ಬಿಡುಗಡೆ ಮಾಡಿರುತ್ತದೆ. ಆಣೆಕಟ್ಟಿನಿಂದ ಹಂಪಿಯ ರಸ್ತೆಯವರಿಗೆ ಕಾಮಗಾರಿ ನವೀಕರಣಗೊಂಡಿರುತ್ತದೆ. ಅಲ್ಲಿಂದ ತಳವಾರ ಗಟ್ಟದ ರಸ್ತೆಯಿಂದ ಬುಕ್ಕಸಾಗರದವರೆಗೆ ಕಾಲುವೆ ಕಾಮಗಾರಿ ನವೀಕರಣ ಗೊಂಡಿರುತ್ತದೆ, ಮಧ್ಯದಲ್ಲಿ ಇರುವ ಗೋರಿ ಮಾಗಣಿಯ ಪ್ರದೇಶದಲ್ಲಿ ಸುಮಾರು 5 ಕಿ.ಮೀ ವರೆಗಿನ ಕಾಲುವೆಯ ಕಾಮಗಾರಿಯನ್ನು ಮಾಡದೆ ಹಾಗೆ ಬಿಟ್ಟಿರುತ್ತಾರೆ. ಇದರಿಂದ ಇಲ್ಲಿನ ಭಾಗದ ರೈತರಿಗೆ ತಮ್ಮ ಹೊಲಗಳಿಗೆ ಸರಿಯಾಗಿ ನೀರು ಹರಿಯದೆ ರೈತರ ಹೊಲಗದ್ದೆಗಳ ಬೆಳೆಗಳಿಗೆ ಹಾನಿಯಾಗಿರುತ್ತದೆ, ಭಾರತೀಯ ಪುರಾತತ್ವ ಸರ್ವೇಕ್ಷಣೆ ಇಲಾಖೆಗೆ ಎಷ್ಟೋ ಬಾರಿ ಹೋರಾಟಗಳ ಮುಖಾಂತರ ಮನವಿ ಪತ್ರ ಸಲ್ಲಿಸಿದರು ಅವರು ಸಹಕಾರ ನೀಡಿರುವುದಿಲ್ಲ ವಿಶ್ವ ಪಾರಂಪರಿಕ ಸ್ಥಳ ಇರುವುದರಿಂದ ನೀವು ಮಾಡುವಂತಹ ಕಾಮಗಾರಿಗಳಿಂದ ಅಲ್ಲಿರುವ ಐತಿಹಾಸಿಕ ಮಂಟಪಗಳಿಗೆ ಧಕ್ಕೆಯಾಗುತ್ತದೆ ಎಂದು ತಡೆಹಿಡಿದಿರುತ್ತಾರೆ. ರೈತರ ಹೊಲಗದ್ದೆಗಳಿಗೆ ನೀರು ಪೂರೈಕೆಯಾಗದೆ ರೈತರು ನಷ್ಟವನ್ನು ಅನುಭವಿಸಿರುತ್ತಾರೆ, ಈಗಾಗಲೇ ಸುಮಾರು ದಶಕಗಳಿಂದ ಸಂಬಂಧಪಟ್ಟ ಇಲಾಖೆಗಳಿಗೆ ಮನವಿ ಪತ್ರ ನೀಡಿ ಹೋರಾಟಗಳನ್ನು ಮಾಡಿದರು ಪರಿಹಾರ ಸಿಕ್ಕಿಲ್ಲ ಆದ್ದರಿಂದ ಶಾಶ್ವತ ಪರಿಹಾರ ನೀಡಬೇಕು ಎಂದು ಆಕ್ರೋಶವನ್ನು ಹೊರಹಾಕಿದರು, ಹಸಿರು ಸೇನೆಯ ಜಿಲ್ಲಾಧ್ಯಕ್ಷರು ಮತ್ತು ರಾಜ್ಯ ಜಿಲ್ಲಾ ಕಾರ್ಯದರ್ಶಿ ಬಿ ಎಂ ಹುಲುಗಪ್ಪನವರು ಮಾತನಾಡಿ, ನಾವುಗಳು ಐತಿಹಾಸಿಕ ಗುಡಿ ಗೋಪುರಗಳನ್ನು ಸಂರಕ್ಷಿಸಿ ರೈತಪಿ ಜೀವನ ನಡೆಸಿರುತ್ತೇವೆ ಅಧಿಕಾರಿಗಳು ಕಣ್ಣಿದ್ದು ಕುರುಡರಾಗಿ ವರ್ತಿಸುತ್ತಿದ್ದಾರೆ. ಈಗ ಕಾಮಗಾರಿಯನ್ನು ಪೂರ್ಣ ಮಾಡದೇ ಬಿಟ್ಟಿರುವ 5 ಕಿಲೋ ಮೀಟರ್ ಕಾಲುವೆ ಕಾಮಗಾರಿಯನ್ನು ಮಾಡುವುದಕ್ಕೆ ಅನುಮತಿಕೊಟ್ಟರೆ ಸುಮಾರು ಎರಡು ಸಾವಿರ ಎಕರೆಗಳು ಬೆಳೆಬೆಳೆಯ ಬಹುದು ರೈತರಲ್ಲಿ ಜಮೀನುಗಳಲ್ಲಿ ಹಸಿರು ತುಂಬಿಮಳೆ ಬಂದಷ್ಟೇ ಖುಷಿಯಾಗುತ್ತದೆ ಎಂದು ಹೇಳಿದರು. ತಾವುಗಳು ಒಂದು ವೇಳೆ ನಮ್ಮ ಬೇಡಿಕೆಯನ್ನು ಪೂರೈಸದೇ ಇದ್ದರೆ ಉಗ್ರವಾದ ಹೋರಾಟವನ್ನು ಹಮ್ಮಿಕೊಳ್ಳಲಾಗುತ್ತದೆ, ಎಂದು ಆಗ್ರಹಿಸಿದರು, ಈ ಸಂದರ್ಭದಲ್ಲಿ ಭಾರತೀಯ ಪುರಾತತ್ವ ಸರ್ವೇಕ್ಷಣೆ ಇಲಾಖೆಯ ಉಪ ನಿರ್ದೇಶಕರು ಡಾ. ಆರ್. ಶೆಜೇಶ್ವರ್ ಅವರು ಮಾತನಾಡಿ ರೈತರಿಗೆ ಅನ್ಯಾಯವಾಗುವುದಕ್ಕೆ ನಾವು ಬಿಡುವುದಿಲ್ಲ ಯಾರೇ ಕಾಮಗಾರಿ ಮುಂದುವರಿಸಿದರು ನಾವುಗಳು ಎನ್ ಒ ಸಿ ಕೊಡುತ್ತೇವೆ ಎಂದು ಹೇಳಿದರು, ಈ ವೇಳೆ ರಾಜ್ಯ ಕಾರ್ಯದರ್ಶಿಗಳಾದ ಬಿ ಎಂ ಹುಲುಗಪ್ಪ, ಹಾಗೂ ನಾಗರಾಜ ತಾಲೂಕ ಅಧ್ಯಕ್ಷರು ಬಿ ಬಸವರಾಜ ತಾಲೂಕು ಕಾರ್ಯದರ್ಶಿಗಳು ಕೆ ಹುಲುಗಪ್ಪ ಉಪಾಧ್ಯಕ್ಷರು ಪಂಚಾಕ್ಷರಿ ಸಹಾಯಕ ಕಾರ್ಯದರ್ಶಿಗಳು ಅಂಬಣ್ಣ ಇ ಜಿಲ್ಲಾ ಕಾರ್ಯದರ್ಶಿಗಳು ರಾಘವೇಂದ್ರ ತಾಲೂಕು ಖಜಾಂಚಿ ಹಾಗೂ ಮಂಜುನಾಥ ಹೋಬಳಿ ಘಟಕದ ಅಧ್ಯಕ್ಷರು ರಘು ಹೋಬಳಿ ಘಟಕದ ಉಪಾಧ್ಯಕ್ಷರು ಎಲ್ಲಪ್ಪ ಗ್ರಾಮ ಘಟಕದ ಅಧ್ಯಕ್ಷರು ಕಡ್ಡಿ ರಾಂಪುರ ಹಾಗೂ ಪೀರ್ ಪಾಷಾ ಗೌರವಾಧ್ಯಕ್ಷರು ಹಾಗೂ ಭಾನು ಬಿ. ತಾಲೂಕು ರಕ್ಷಣಾ ವೇದಿಕೆ ಅಧ್ಯಕ್ಷರು ಹಾಗೂ ಕಮಲಾಪುರದ ರೈತ ಮಹಿಳಾ ಸದಸ್ಯರು ಹಾಗೂ ಹನುಮಂತಪ್ಪ ಕೆ.ಗೌರವಾಧ್ಯಕ್ಷರು ಹಾಗೂ ಶ್ರೀನಿವಾಸ ರೈತ ಸಂಘದ ಸದಸ್ಯರು ಹಾಗೂ ಗಂಗಾವತಿ ತಾಲೂಕು ರೈತ ಸಂಘ ಹಾಗೂ ಆಖಖ ಮುಖಂಡರು ಹಂಪೇಶ್ ಮತ್ತು ಹೊಸಪೇಟೆಯ ರೈತ ಮುಖಂಡ ಹಾಗೂ ಸಮಾಜ ಸೇವಕರಾದ ದೀಪಕ್ ಸಿಂಗ್, ಹಾಗೂ ಕಮಲಾಪುರದ ರೈತ ಮುಖಂಡರುಗಳಾದ ಮುಕ್ತರ್ ಪಾಶ ಹೆಚ್ ಗೋಪಾಲಕೃಷ್ಣ, ಹಾಗೂ ನಾರಾಯಣ, ಜೀರ್ ಚೆನ್ನಪ್ಪ, ಪಂಪ, ಕಂಪ್ಲಿ ಮಹಿಳಾ ಘಟಕದ ಅಧ್ಯಕ್ಷರು ಲೆಬೇದ ಲಕ್ಷ್ಮಿ ಹಾಗೂ ವಿವಿಧ ತಾಲೂಕುಗಳಿಂದ ಆಗಮಿಸಿದ ರೈತ ಸದಸ್ಯರುಗಳು ಮತ್ತು ರೈತ ಮುಖಂಡರುಗಳು ಉಪಸ್ಥಿತರಿದ್ದರು

# ಮೃತರ ಖಾತೆಗೆ ಗೃಹಲಕ್ಷ್ಮಿ ಹಣ,ತಡೆಗೆ ಸೂಚನೆ



- **ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)**

ಜು 24:ಸರ್ಕಾರದ ಮಹತ್ವಾಕಾಂಕ್ಷೆಯ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಗೃಹಲಕ್ಷ್ಮಿ ಯೋಜನೆಯಡಿ ಮರಣ ಹೊಂದಿದ ಫಲಾನುಭವಿಗಳನ್ನು ಪತ್ತೆ ಹಚ್ಚಿ,ಅವರ ಖಾತೆಗಳಿಗೆ ನಿಯಮಾನುಸಾರ ಜಮೆಯಾಗಿರುವ ಅನುದಾನವನ್ನು ತಕ್ಷಣವೇ ತಡೆಯಲು ಕ್ರಮ ವಹಿಸಬೇಕು ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಕೆ ಶಿವಮೂರ್ತಿ ಹೇಳಿದರು. ಜಿಲ್ಲಾ ಪಂಚಾಯತಿ ಹಾಗೂ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸಹಯೋಗದೊಂದಿಗೆ ಬುಧವಾರ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಗೃಹಲಕ್ಷ್ಮಿ ಹಣವನ್ನು ಸರ್ಕಾರಕ್ಕೆ ಮರುಪಾವತಿಸಲು ವಿವಿಧ ಇಲಾಖೆಗಳು ಪರಸ್ಪರ ಸಮನ್ವಯ ಸಾಧಿಸಬೇಕು. ಗೃಹಜ್ಯೋತಿ ಯೋಜನೆಯಡಿ ಜಿಲ್ಲೆಯಲ್ಲಿ ಅರ್ಹ ಫಲಾನುಭವಿಗಳ ಮರು ಸಮೀಕ್ಷೆ ಕಾರ್ಯ ಕೈಗೊಳ್ಳಲಾಗುತ್ತಿದ್ದು, ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ಪರಿಶೀಲನಾ ಸಭೆಯಲ್ಲಿ ಮರು ಸಮೀಕ್ಷೆಯ ಅರ್ಜಿ ಬಿಡುಗಡೆಗೊಳಿಸಿದ ಅವರು, ಈ ಕಾರ್ಯವನ್ನು ಪಾರದರ್ಶಕವಾಗಿ ನಡೆಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಇದೇ ಸಂದರ್ಭದಲ್ಲಿ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಯಶಸ್ವಿಯಾಗಿ 3 ವರ್ಷಗಳನ್ನು ಪೂರ್ಣಗೊಳಿಸಿದ ನೆನಪಿಗಾಗಿ ಜಿಲ್ಲಾ ಪಂಚಾಯತಿ ಆವರಣದಲ್ಲಿ ಸಸಿ ನೆಡಲಾಯಿತು. ಸಭೆಯಲ್ಲಿ ಗ್ಯಾರಂಟಿ ಅನುಷ್ಠಾನ ಸಮಿತಿಯ ಉಪಾಧ್ಯಕ್ಷರಾದ ಕೆ.ಬದಾವಲಿ, ಚಂದ್ರಪ್ಪ ಹುಲಿಕಟ್ಟೆ, ಕೆ. ಎಸ್.ಶಾಂತನಗೌಡ, ಹೆಚ್ ಜಾಂಡಿಸಾಹೇಬ್, ಜಿ. ಪಂ. ಮುಖ್ಯ ಯೋಜನಾಧಿಕಾರಿ ಅನ್ನದಾಸ್ವಾಮಿ, ವಿವಿಧ ತಾಲ್ಲೂಕಿನ ಅನುಷ್ಠಾನ ಸಮಿತಿ ಅಧ್ಯಕ್ಷರು, ಸದಸ್ಯರು ಜಿಲ್ಲಾ ಮಟ್ಟದ ಅಧಿಕಾರಿಗಳು ಇದ್ದರು.

# 25 ರಂದು ವಿದ್ಯುತ್ ವ್ಯತ್ಯಯ

ಬಳ್ಳಾರಿ,:ಬಳ್ಳಾರಿ ನಗರ ಜೆಸ್ಕಾಂ ವಿದ್ಯುತ್ ಲೈನುಗಳ ನಿರ್ವಹಣೆ ಕಾರ್ಯ ಕೈಗೊಳ್ಳುತ್ತಿರುವುರಿಂದ 11 ಕೆ.ವಿ. ಫೀಡರನಲ್ಲಿ ವಿದ್ಯುತ್ ಕಡಿತಗೊಳಿಸುವ ಅವಶ್ಯಕತೆ ಇದ್ದು, ಈ ಕೆಳಕಂಡ ಪ್ರದೇಶಗಳಲ್ಲಿ ಜು.25 ರಂದು ಬೆಳಿಗ್ಗೆ 10 ರಿಂದ ಸಂಜೆ 06 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು :-ಎಫ್-7 ರ ವ್ಯಾಪ್ತಿಯ ಸಂಗನಕಲ್ಲು ರಸ್ತೆ, ಎಸ್.ಎನ್.ಪೇಟೆಯ 3ನೇ ಕ್ರಾಸ್, ಜಿಲ್ಲಾ ಆಸ್ಪತ್ರೆ, ರಾಘವ ಕಲಾ ಮಂದಿರ, ಅನಂತಪುರ ರಸ್ತೆ, ವಡ್ಡರ ಬಂಡ್ಡೆ, ಅಗಡಿ ಮಾರೆಪ್ಪ ಕೌಪೌಂಡ್, ರೂಪನಗುಡಿ ರಸ್ತೆ, ಮುಬರಕ್ ಟಾಕೀಶ್, ಬಾಲಾಜಿರಾವ್ ರಸ್ತೆ, ಕೆ.ಸಿ. ರೋಡ್, ಮೀನಾಕ್ಷಿ ಸರ್ಕಲ್, ಬೆಂಗಳೂರು ರಸ್ತೆ, ದುಗ್ಗಪ್ಪ ಬೀದಿ, ರೆಡ್ಡಿ ಬೀದಿ, ಆಲ್ಲಂ ಬೀದಿ, ಮುಲ್ಲಂಗಿ ಸಂಜೀವಪ್ಪ ಬೀದಿ, ರೂಪನಗುಡಿ ನರಪ್ಪ ಬೀದಿ, ತಾಯಮ್ಮಕಟ್ಟೆ ಹಾಗೂ ಇನ್ನೂ ಮುಂತಾದ ಏರಿಯಾಗಳಲ್ಲಿ ವಿದ್ಯುತ್ ವ್ಯತ್ಯಯವಾಲಿದೆ.

ಹಾಗಾಗಿ ಸಾರ್ವಜನಿಕರು ಹಾಗೂ ವಿದ್ಯುತ್ ಗ್ರಾಹಕರು ಜೆಸ್ಕಾಂ ಇಲಾಖೆಯೊಂದಿಗೆ ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗೃಹಜ್ಯೋತಿ ಯೋಜನೆ ಅನುಷ್ಠಾನಕ್ಕೆ ಜನಜಾಗೃತಿ ಅಭಿಯಾನ




• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಜು. 24: ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಗೃಹಜ್ಯೋತಿ ಯೋಜನೆಯ ಪರಿಣಾಮಕಾರಿ ಅನುಷ್ಠಾನ ಹಾಗೂ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಗುರುಮಠಕಲ್ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಕಾರ್ಯನಿರ್ವಾಹಕ ಅಧಿಕಾರಿ ಅಂಬರೀಶ್ ಪಾಟೀಲ್ ಹಾಗೂ ತಾಲೂಕು ಪಂಚ ಗ್ಯಾರಂಟಿ ಯೋಜನೆಗಳ ಅಧ್ಯಕ್ಷ ಲಕ್ಷ್ಮಿಕಾಂತ್ ರೆಡ್ಡಿ ಪಳ್ಳ ಅವರ ನೇತೃತ್ವದಲ್ಲಿ ಪ್ರಗತಿ ಪರಿಶೀಲನಾ ಸಭೆ ನಡೆಯಿತು.

ಸಭೆಯಲ್ಲಿ ಗೃಹಜ್ಯೋತಿ ಯೋಜನೆಯ ಫಲಾನುಭವಿಗಳ ಮನೆ–ಮನೆ ಪರಿಶೀಲನಾ ಕಾರ್ಯ ಶೀಘ್ರದಲ್ಲೇ ಆರಂಭವಾಗಲಿದ್ದು, ಜೆಸ್ಕಾಂ ಸಿಬ್ಬಂದಿ ಮನೆಗಳಿಗೆ ಭೇಟಿ ನೀಡಿ ಆಧಾರ್ ಕಾರ್ಡ್, ಮತದಾರರ ಗುರುತಿನ ಚೀಟಿ, ರೇಷನ್ ಕಾರ್ಡ್ ಸೇರಿದಂತೆ ಅಗತ್ಯ ದಾಖಲೆಗಳನ್ನು ಪರಿಶೀಲಿಸಿ ಮಾಹಿತಿ ಸಂಗ್ರಹಿಸಲಿದ್ದಾರೆ ಎಂದು ತಿಳಿಸಲಾಯಿತು. ಯೋಜನೆಯ ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ಸಮರ್ಪಕವಾಗಿ ತಲುಪುವ ನಿಟ್ಟಿನಲ್ಲಿ ಸಾರ್ವಜನಿಕರು ಅಗತ್ಯ ದಾಖಲೆಗಳನ್ನು ಸಿದ್ಧವಾಗಿಟ್ಟುಕೊಂಡು ಪರಿಶೀಲನಾ ಸಿಬ್ಬಂದಿಗೆ ಸಂಪೂರ್ಣ ಸಹಕಾರ ನೀಡುವಂತೆ ಅಧಿಕಾರಿಗಳು ಮನವಿ ಮಾಡಿದರು.

ಸಭೆಯ ಬಳಿಕ ಗುರುಮಠಕಲ್ ಪಟ್ಟಣದ ಲಕ್ಷ್ಮೀನಗರ ಬಡಾವಣೆಯಲ್ಲಿ ಗೃಹಜ್ಯೋತಿ ಯೋಜನೆ ಕುರಿತು ಮನೆ–ಮನೆಗೆ ಭೇಟಿ ನೀಡಿ ಜನಜಾಗೃತಿ ಅಭಿಯಾನ ನಡೆಸಲಾಯಿತು. ಯೋಜನೆಯ ಅರ್ಹತೆ, ದಾಖಲೆಗಳ ಪರಿಶೀಲನೆ, ಸರ್ಕಾರದ ಮಾರ್ಗಸೂಚಿಗಳು ಹಾಗೂ ಪರಿಶೀಲನಾ ಪ್ರಕ್ರಿಯೆ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಿ, ಯಾವುದೇ ಗೊಂದಲಕ್ಕೆ ಒಳಗಾಗದೇ ಅಧಿಕಾರಿಗಳಿಗೆ ಸಹಕರಿಸುವಂತೆ ಮನವಿ ಮಾಡಲಾಯಿತು.

ಸಭೆಯಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಸದಸ್ಯರಾದ ಸಂಜೀವಕುಮಾರ್ ಚಂದಾಪುರ, ವೆಂಕಟರಮಣ ಗೌಡ ಪುಟಪಾಕ, ಲಕ್ಷ್ಮಿಕಾಂತ್ ರೆಡ್ಡಿ ನಜರಾಪುರ, ಚಂದ್ ಪಾಶ, ಹನುಮಿರೆಡ್ಡಿ ಗುರ್ನೂರ್, ಜನಾರ್ದನ್ ರೆಡ್ಡಿ ಚಪೆಟ್ಲಾ ಸೇರಿದಂತೆ ಸದಸ್ಯರು ಭಾಗವಹಿಸಿದ್ದರು. ಜೆಸ್ಕಾಂ ಇಲಾಖೆಯ ಅಂಬರೀಶ್ ರಾಥೋಡ್ ಎಇಇ, ಮಾನಪ್ಪ ಎಇಟಿ ಹಾಗೂ ನರಸಿಮುಲು ಜೆಇ ಉಪಸ್ಥಿತರಿದ್ದರು.

# ಬಳಿಚಕ್ರ ಸರ್ಕಾರಿ ಪ್ರೌಢಶಾಲೆಯಲ್ಲಿ ಎಐ ಅತಿಥಿ ಶಿಕ್ಷಕರ ನೇಮಕಾತಿಗೆ ಅರ್ಜಿ ಆಹ್ವಾನ

ಬಳಿಚಕ್ರ, ಜು, 24: 2026–27ನೇ ಶೈಕ್ಷಣಿಕ ವರ್ಷದಿಂದ ರಾಷ್ಟ್ರೀಯ ಕೌಶಲ್ಯ ಅರ್ಹತಾ ಚೌಕಟ್ಟು (NSQF) ಅಡಿಯಲ್ಲಿ ಕೃತಕಬುದ್ಧಿಮತ್ತೆ (Artificial Intelligence-AI) ವಿಷಯವನ್ನು ಅನುಷ್ಠಾನಗೊಳಿಸುವ ಹಿನ್ನೆಲೆಯಲ್ಲಿ ಬಳಿಚಕ್ರ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಒಬ್ಬ ಎಐ ಅತಿಥಿ ಶಿಕ್ಷಕರ ನೇಮಕಾತಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಪ್ರಭಾರಿ ಮುಖ್ಯಗುರು ಬನ್ನಪ್ಪ ಮೈಲಾಪೂರ ತಿಳಿಸಿದ್ದಾರೆ.ಈ ಕುರಿತು ಪ್ರಕಟಣೆ ನೀಡಿರುವ ಅವರು, ರಾಜ್ಯ ಸರ್ಕಾರದ ನಿರ್ದೇಶನಹಾಗೂ 2026–27ನೇ ಸಾಲಿನ ಪಿಎಬಿ (PAB) ಅನುಮೋದನೆಯಂತೆ ಪ್ರೌಢಶಾಲೆಗಳಲ್ಲಿ ಎನ್‌ಎಸ್‌ಕ್ಯೂಎಫ್ ಯೋಜನೆಯಡಿ ಕೃತಕ ಬುದ್ಧಿಮತ್ತೆ ವಿಷಯವನ್ನು ಪರಿಚಯಿಸಲಾಗುತ್ತಿದೆ. ವಿದ್ಯಾರ್ಥಿಗಳಲ್ಲಿ 21ನೇ ಶತಮಾನದ ಕೌಶಲ್ಯಗಳು, ಸಮಸ್ಯೆ ಪರಿಹಾರ ಸಾಮರ್ಥ್ಯ, ಸೃಜನಶೀಲತೆ, ತಾಂತ್ರಿಕ ಜ್ಞಾನ ಹಾಗೂ ಉದ್ಯೋಗಾರ್ಹತೆಯನ್ನು ಬೆಳೆಸುವ ಉದ್ದೇಶದಿಂದ ಈ ಯೋಜನೆ ಜಾರಿಗೊಳಿಸಲಾಗಿದೆ ಎಂದು ತಿಳಿಸಿದ್ದಾರೆ.ಈ ಯೋಜನೆಯಡಿ ಬಳಿಚಕ್ರ ಸರ್ಕಾರಿ ಪ್ರೌಢಶಾಲೆಗೆ ಒಬ್ಬ ಎಐ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗುತ್ತದೆ. ಆಯ್ಕೆಯಾದ ಅಭ್ಯರ್ಥಿಗೆ ಪ್ರತಿ ತಿಂಗಳು ?20 ಸಾವಿರ ಗೌರವಧನ ನೀಡಲಾಗುತ್ತದೆ.ಡಿಪ್ಲೊಮಾ ಇನ್ ಕಂಪ್ಯೂಟರ್ ಸೈನ್ಸ್, ಬಿಇ (ಕಂಪ್ಯೂಟರ್ ಸೈನ್ಸ್), ಬಿಸಿಎ, ಬಿಎಸ್ಸಿ (ಕಂಪ್ಯೂಟರ್ ಸೈನ್ಸ್) ಅಥವಾ ಬಿಎಸ್ಸಿ (ಇನ್ಫರ್ಮೇಷನ್ ಟೆಕ್ನಾಲಜಿ) ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.ಆಸಕ್ತ ಅಭ್ಯರ್ಥಿಗಳು ಅಗತ್ಯ ದಾಖಲೆಗಳೊಂದಿಗೆ ಜುಲೈ 28ರೊಳಗೆ ಅರ್ಜಿ ಸಲ್ಲಿಸುವಂತೆ ಪ್ರಭಾರಿ ಮುಖ್ಯಗುರು ಬನ್ನಪ್ಪ ಮೈಲಾಪೂರ ಮನವಿ ಮಾಡಿದ್ದಾರೆ.

# ಆಡೂರ ಗ್ರಾಮದಲ್ಲಿ ಚರಂಡಿ ಸ್ವಚ್ಛತೆ ನಿರ್ಲಕ್ಷ್ಯ; ಗ್ರಾ ಪಂ ವಿರುದ್ಧ ಹನುಮಂತ ನಾಯಕ್ ಆರೋಪ



• ಮಲ್ಲಮ್ಮ ನುಡಿ ವಾರ್ತೆ ಕುಕನೂರು

ತಾಲೂಕಿನ ಆಡೂರ ಗ್ರಾಮದ 1ನೇ ಅಂಗನವಾಡಿ ಕೇಂದ್ರದ ಹತ್ತಿರ ಇರುವ ಚರಂಡಿಗಳ ಸ್ವಚ್ಛತೆ ಸಮರ್ಪಕವಾಗಿ ನಡೆಯದೆ ದುರ್ವಾಸನೆ ಹಾಗೂ ನೈರ್ಮಲ್ಯ ಸಮಸ್ಯೆ ಉಂಟಾಗಿದೆ ಎಂದು ಸ್ಥಳೀಯ ನಿವಾಸಿಗಳು ಆರೋಪಿಸಿದ್ದಾರೆ.ಸ್ಥಳೀಯ ಮುಖಂಡ ಹನುಮಂತ ನಾಯಕ್ ಮಾತನಾಡಿ, ವರ್ಷದಲ್ಲಿ 1 ಬಾರಿ ಮಾತ್ರ ಗ್ರಾಮದಲ್ಲಿ ಸ್ವಚ್ಛಮಾಡುತ್ತಾರೆ. ವಾರ್ಡ್‌ನ ಚರಂಡಿಗಳನ್ನು ಇದುವರೆಗೂ ಸ್ವಚ್ಛಗೊಳಿಸಿಲ್ಲ. ಇದರಿಂದ ಚರಂಡಿಗಳು ಕಸದಿಂದ ತುಂಬಿ, ಕೊಳಚೆ ನೀರು ಹರಿಯುತ್ತಿದ್ದು ಸಾರ್ವಜನಿಕರಿಗೆ ತೀವ್ರ ತೊಂದರೆ ಉಂಟಾಗಿದೆ ಎಂದು ಆರೋಪಿಸಿದರು.ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಕೂಡಲೇ ಈ ಸಮಸ್ಯೆಯತ್ತ ಗಮನಹರಿಸಿ ಚರಂಡಿಗಳ ಸ್ವಚ್ಛತೆ ಕೈಗೊಳ್ಳಬೇಕು.

# ಸಾಧಕರ ಸಂವಾದ–ಸಂಸ್ಕೃತಿಯ ಸಂಭ್ರಮ
# ಕಠಿಣ ಪರಿಶ್ರಮಕ್ಕೆ ಸಮಯದ ಸದ್ಬಳಕೆ ಅಗತ್ಯ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಜು. 24:ವಿದ್ಯಾರ್ಥಿಗಳಲ್ಲಿ ಉನ್ನತ ಗುರಿ, ಆತ್ಮವಿಶ್ವಾಸ ಹಾಗೂ ಸಾಧನೆಯ ಮನೋಭಾವ ಬೆಳೆಸುವ ಉದ್ದೇಶದಿಂದ ಅಜೀಂ ಪ್ರೇಮ್ ಜಿ ಶಾಲೆಯಲ್ಲಿ ಕನಸು ಸಾಂಸ್ಕೃತಿಕ ಹಾಗೂ ಸಾಮಾಜಿಕ ಸೇವಾ ಟ್ರಸ್ಟ್, ಹುಲ್ಕಲ್ (ಜೆ) ವತಿಯಿಂದ ಆಯೋಜಿಸಲಾದ "ಸಾಧಕರೊಂದಿಗೆ ಸಂವಾದ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ" ಅರ್ಥಪೂರ್ಣವಾಗಿ ನಡೆಯಿತು.

ಕಾರ್ಯಕ್ರಮದ ಮುಖ್ಯ ಅತಿಥಿ ಹಾಗೂ ಸಾಧಕರಾಗಿ ಆಗಮಿಸಿದ್ದ ಯಾದಗಿರಿ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಶ್ರೀ ಚನ್ನಬಸಪ್ಪ (ಕೆ.ಎ.ಎಸ್.) ಅವರು ತಮ್ಮ ಜೀವನ ಪಯಣವನ್ನು ವಿದ್ಯಾರ್ಥಿಗಳೊಂದಿಗೆ ಹಂಚಿಕೊಂಡರು. ಬಡತನ, ಸಂಕಷ್ಟ ಮತ್ತು ಅನೇಕ ಸವಾಲುಗಳ ನಡುವೆಯೂ ಶಿಕ್ಷಣವನ್ನು ಕೈಬಿಡದೆ ಕಠಿಣ ಪರಿಶ್ರಮ, ಸಮಯದ ಸದ್ಬಳಕೆ ಹಾಗೂ ಶಿಸ್ತುಬದ್ಧ ಅಧ್ಯಯನದ ಮೂಲಕ ಕರ್ನಾಟಕ ಆಡಳಿತ ಸೇವೆಯ ಅಧಿಕಾರಿಯಾಗಿ ರೂಪುಗೊಂಡ ತಮ್ಮ ಬದುಕಿನ ಅನುಭವಗಳನ್ನು ವಿವರಿಸಿದರು. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಹೇಗೆ ಸಿದ್ಧತೆ ನಡೆಸಬೇಕು, ಅಧ್ಯಯನದ ಕ್ರಮ ಹೇಗಿರಬೇಕು, ಗುರಿ ಸಾಧಿಸಲು ಆತ್ಮವಿಶ್ವಾಸ ಮತ್ತು ನಿರಂತರ ಪರಿಶ್ರಮದ ಮಹತ್ವವೇನು ಎಂಬುದರ ಕುರಿತು ಅವರು ವಿದ್ಯಾರ್ಥಿಗಳಿಗೆ ಪ್ರೇರಣಾದಾಯಕ ಮಾರ್ಗದರ್ಶನ ನೀಡಿದರು. ಬಳಿಕ ವಿದ್ಯಾರ್ಥಿಗಳು ಕೇಳಿದ ವಿವಿಧ ಪ್ರಶ್ನೆಗಳಿಗೆ ತಮ್ಮ ಅನುಭವಗಳ ಆಧಾರದ ಮೇಲೆ ಸರಳ ಹಾಗೂ ಸ್ಪಷ್ಟ ಉತ್ತರಗಳನ್ನು ನೀಡಿ, ಯಶಸ್ಸಿನ ಹಾದಿಯಲ್ಲಿ ಶಿಸ್ತು, ದೃಢಸಂಕಲ್ಪ ಮತ್ತು ಪರಿಶ್ರಮವೇ ನಿಜವಾದ ಬಂಡವಾಳ ಎಂದು ಕಿವಿಮಾತು ಹೇಳಿದರು.

ಈ ಸಂದರ್ಭದಲ್ಲಿ ಕನಸು ಸಾಂಸ್ಕೃತಿಕ ಹಾಗೂ ಸಾಮಾಜಿಕ ಸೇವಾ ಟ್ರಸ್ಟ್‌ನ ಸಂಸ್ಥಾಪಕ ಅಧ್ಯಕ್ಷರು, ಅಭಿಯಂತರ ಹಾಗೂ ಯುವ ಬರಹಗಾರ ದೇವಿಂದ್ರ ಹುಲ್ಕಲ್ (ಜೆ) ಅವರು ಹಾಸ್ಯ ಭಾಷಣ ಮಾಡಿದರು. ತಮ್ಮ ವಿಶಿಷ್ಟ ಹಾಸ್ಯಪ್ರಜ್ಞೆ, ಸಾಹಿತ್ಯ, ಸಂಗೀತ ಮತ್ತು ಸಾಂಸ್ಕೃತಿಕ ಉಲ್ಲೇಖಗಳ ಮೂಲಕ ಸಭಿಕರನ್ನು ನಗೆಗಡಲಲ್ಲಿ ತೇಲಿಸುತ್ತಾ, ಶಿಕ್ಷಣವು ಕೇವಲ ಉದ್ಯೋಗ ಪಡೆಯುವ ಸಾಧನವಲ್ಲ, ಉತ್ತಮ ವ್ಯಕ್ತಿತ್ವ ನಿರ್ಮಾಣದ ಅಡಿಪಾಯ ಎಂಬ ಸಂದೇಶವನ್ನು ವಿದ್ಯಾರ್ಥಿಗಳಿಗೆ ಮನದಟ್ಟುಗೊಳಿಸಿದರು. ಬದುಕಿನಲ್ಲಿ ದೊಡ್ಡ ಕನಸುಗಳನ್ನು ಕಾಣಬೇಕು, ಅವುಗಳನ್ನು ನನಸಾಗಿಸಲು ನಿರಂತರ ಪ್ರಯತ್ನಿಸಬೇಕು ಹಾಗೂ ಸಮಾಜಮುಖಿ ಚಿಂತನೆಯೊಂದಿಗೆ ಬೆಳೆಯಬೇಕು ಎಂದು ಕರೆನೀಡಿದರು. ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಅಜೀಂ ಪ್ರೇಮ್ ಜಿ ಶಾಲೆಯ ಪ್ರಾಂಶುಪಾಲರಾದ ಅನಿಲ್ ಎಸ್. ಅಂಗಡಿಕಿ ಮಾತನಾಡಿ, ಇಂತಹ ಸಂವಾದ ಕಾರ್ಯಕ್ರಮಗಳು ವಿದ್ಯಾರ್ಥಿಗಳ ಜೀವನದಲ್ಲಿ ಹೊಸ ದಿಕ್ಕನ್ನು ತೋರಿಸುವ ಪ್ರೇರಣೆ–ಯ ವೇದಿಕೆಗಳಾಗಿವೆ ಎಂದು ಹೇಳಿದರು. ಕೆ.ಎ.ಎಸ್. ಅಧಿಕಾರಿ ಚನ್ನಬಸಪ್ಪ ಅವರ ಹೋರಾಟಮಯ ಬದುಕು ಮತ್ತು ಅವರ ಪ್ರೇರಣಾದಾಯಕ ಮಾತುಗಳನ್ನು ವಿದ್ಯಾರ್ಥಿಗಳು ಆದರ್ಶವಾಗಿ ಸ್ವೀಕರಿಸಿ, ಭವಿಷ್ಯದಲ್ಲಿ ಅವರಂತೆಯೇ ಉನ್ನತ ಅಧಿಕಾರಿಗಳಾಗಿ ಸಮಾಜಕ್ಕೆ ಸೇವೆ ಸಲ್ಲಿಸುವ ಗುರಿಯನ್ನು ಹೊಂದಬೇಕು ಎಂದು ಮಕ್ಕಳಿಗೆ ಕರೆ ನೀಡಿದರು. ಸಂವಾದ, ಪ್ರೇರಣೆ, ಸಾಹಿತ್ಯ, ಸಂಗೀತ ಹಾಗೂ ಮೌಲ್ಯಾಧಾರಿತ ಸಂದೇಶಗಳ ಸಮ್ಮಿಲನವಾಗಿ ಮೂಡಿಬಂದ ಈ ಕಾರ್ಯಕ್ರಮ ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ, ಸಾಧನೆಯ ಕನಸು ಮತ್ತು ಸಾಮಾಜಿಕ ಜವಾಬ್ದಾರಿಯ ಮನೋಭಾವ ಬೆಳೆಸುವಲ್ಲಿ ಯಶಸ್ವಿಯಾಯಿತು. ಸಾಧಕರ ಬದುಕಿನ ಸ್ಫೂರ್ತಿ, ಶಿಕ್ಷಣದ ಮಹತ್ವ, ವ್ಯಕ್ತಿತ್ವ ವಿಕಸನ ಮತ್ತು ಸಾಂಸ್ಕೃತಿಕ ಮೌಲ್ಯಗಳನ್ನು ಒಂದೇ ವೇದಿಕೆಯಲ್ಲಿ ಬೆಸೆಯುವ ಮೂಲಕ ವಿದ್ಯಾರ್ಥಿಗಳಲ್ಲಿ ಹೊಸ ಆಶಯಗಳನ್ನು ಬಿತ್ತಿದ ಈ ಕಾರ್ಯಕ್ರಮ ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು. ಶಾಲೆಯ ಶಿಕ್ಷಕರಾದ ಮುರಳೀಧರ ಅವರು ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಿರೂಪಿಸಿ, ಅತಿಥಿಗಳನ್ನು ಪರಿಚಯಿಸುವುದರೊಂದಿಗೆ ಕಾರ್ಯಕ್ರಮವನ್ನು ಸುಸೂತ್ರವಾಗಿ ನಡೆಸಿಕೊಟ್ಟರು. ಕೊನೆಯಲ್ಲಿ ವಂದನಾರ್ಪಣೆ ಸಲ್ಲಿಸಿದರು.

ವಿದ್ಯಾರ್ಥಿಗಳು ಕಾರ್ಯಕ್ರಮದುದ್ದಕ್ಕೂ ಆಸಕ್ತಿಯಿಂದ ಭಾಗವಹಿಸಿ, ಸಾಧಕರ ಜೀವನಾನುಭವಗಳನ್ನು ಆಲಿಸುವುದರ ಜೊತೆಗೆ ತಮ್ಮ ಸಂದೇಹಗಳನ್ನು ಮುಕ್ತವಾಗಿ ಕೇಳಿ ಪರಿಹರಿಸಿಕೊಂಡರು.

# ರಾಷ್ಟ್ರೀಯ ಕುಟುಂಬ ಯೋಜನೆ ಅನುದಾನ ತಕ್ಷಣ ಬಿಡುಗಡೆಗೆ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಜು, 24: ಯಾದಗಿರಿ ತಾಲೂಕಿನ ರಾಷ್ಟ್ರೀಯ ಕುಟುಂಬ ಯೋಜನೆಯಡಿ ಮಂಜೂರಾಗಿರುವ 15 ಫಲಾನುಭವಿಗಳಿಗೆ ಪರಿಹಾರ ಧನವನ್ನು ಇದುವರೆಗೆ ಬಿಡುಗಡೆ ಮಾಡದೇ ವಿಳಂಬ ಮಾಡಲಾಗುತ್ತಿದೆ ಎಂದು ಆರೋಪಿಸಿ, ಬಾಕಿ ಇರುವ ಅನುದಾನವನ್ನು ಕೂಡಲೇ ಬಿಡುಗಡೆ ಮಾಡಿ ಬಡ ಕುಟುಂಬಗಳಿಗೆ ನ್ಯಾಯ ಒದಗಿಸಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಜಿಲ್ಲಾಧಿಕಾರಿಗಳ ಮೂಲಕ ಉಪಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಡಾ. ಜಿ. ಪರಮೇಶ್ವರ್ ಅವರಿಗೆ ಮನವಿ ಸಲ್ಲಿಸಲಾಯಿತು.

ಮನವಿಯಲ್ಲಿ, ರಾಷ್ಟ್ರೀಯ ಕುಟುಂಬ ಯೋಜನೆಯಡಿ ಈಗಾಗಲೇ 15 ಫಲಾನುಭವಿಗಳಿಗೆ ಮಂಜೂರಾತಿ ಆದೇಶ ಹೊರಡಿಸಿದ್ದರೂ, ಯಾದಗಿರಿ ತಹಸೀಲ್ದಾರ್ ಕಚೇರಿಯಿಂದ ಪರಿಹಾರ ಧನವನ್ನು ಬಿಡುಗಡೆ ಮಾಡದೆ ವಿಳಂಬ ಮಾಡಲಾಗಿದೆ ಎಂದು ಆರೋಪಿಸಲಾಗಿದೆ. ಕುಟುಂಬದ ಮುಖ್ಯಸ್ಥರನ್ನು ಕಳೆದುಕೊಂಡ ಬಡ ಮತ್ತು ನಿರ್ಗತಿಕ ಕುಟುಂಬಗಳು ಸರ್ಕಾರದ ನೆರವಿನ ನಿರೀಕ್ಷೆಯಲ್ಲಿದ್ದರೂ, ಅಧಿಕಾರಿಗಳ ನಿರ್ಲಕ್ಷ್ಯದಿಂದ ತಿಂಗಳುಗಟ್ಟಲೆ ಕಚೇರಿಗಳಿಗೆ ಅಲೆದಾಡುವಂತಾಗಿದೆ ಎಂದು ದೂರಲಾಗಿದೆ.ಪರಿಹಾರ ಪಡೆಯಲು ಫಲಾನುಭವಿಗಳು ಹಲವು ಬಾರಿ ತಹಸೀಲ್ದಾರ್ ಕಚೇರಿಗೆ ಭೇಟಿ ನೀಡಿದರೂ ಯಾವುದೇ ಸ್ಪಂದನೆ ದೊರೆಯುತ್ತಿಲ್ಲ. ಇದರಿಂದ ಆರ್ಥಿಕ ಸಂಕಷ್ಟದಲ್ಲಿರುವ ಕುಟುಂಬಗಳ ಬದುಕು ಮತ್ತಷ್ಟು ದುಸ್ತರವಾಗಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಇದೇ ವೇಳೆ, ಯಾದಗಿರಿ ತಹಸೀಲ್ದಾರ್ ಕಚೇರಿಯ ಕೇಸ್ ವರ್ಕರ್ ವಿಜಯಲಕ್ಷ್ಮಿ ಅವರು ಪರಿಹಾರ ಧನ ಬಿಡುಗಡೆ ಮಾಡಲು ಫಲಾನುಭವಿಗಳಿಂದ ಲಂಚದ ಬೇಡಿಕೆ ಇಟ್ಟಿದ್ದಾರೆ ಎಂಬ ಗಂಭೀರ ಆರೋಪವೂ ಮನವಿಯಲ್ಲಿ ಮಾಡಲಾಗಿದೆ. ಈ ಆರೋಪದ ಕುರಿತು ನಿಷ್ಪಕ್ಷಪಾತ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಸೂಕ್ತ ಕಾನೂನು ಹಾಗೂ ಶಿಸ್ತು ಕ್ರಮ ಕೈಗೊಳ್ಳಬೇಕು ಎಂದು ಸಂಘ ಒತ್ತಾಯಿಸಿದೆ.

ಮಂಜೂರಾಗಿರುವ 15 ಫಲಾನುಭವಿಗಳಿಗೆ ಕೂಡಲೇ ಪರಿಹಾರ ಧನ ಬಿಡುಗಡೆ ಮಾಡುವಂತೆ ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಬೇಕು. ವಿಳಂಬಕ್ಕೆ ಕಾರಣರಾದ ಅಧಿಕಾರಿಗಳ ಹೊಣೆಗಾರಿಕೆಯನ್ನು ನಿಗದಿಪಡಿಸಿ ಕ್ರಮ ಕೈಗೊಂಡು, ಬಡ ಕುಟುಂಬಗಳಿಗೆ ನ್ಯಾಯ ದೊರಕಿಸಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಆಗ್ರಹಿಸಿದೆ.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ತಾಲೂಕು ಅಧ್ಯಕ್ಷ ವೆಂಕಟೇಶ, ಬಳಿಚಕ್ರ ಗ್ರಾಮ ಘಟಕದ ಅಧ್ಯಕ್ಷ ಮಲ್ಲಯ್ಯ ನಾಯಕ, ಬಳಿಚಕ್ರ ವಲಯ ಘಟಕದ ಅಧ್ಯಕ್ಷ ಹಣಮಂತ ನಾಯಕ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಹಾಗೂ ರೈತರು ಉಪಸ್ಥಿತರಿದ್ದರು.

# ಸರಕಾರಿ ಶಾಲೆಗೆ ಮಹಾನ್ ವ್ಯಕ್ತಿಗಳ ಭಾವಚಿತ್ರಗಳನ್ನು ಉಡುಗೊರೆಯಾಗಿ ನೀಡಿದ ಎಚ್ ಪಕ್ಕೀರಪ್ಪ

• ಮಲ್ಲಮ್ಮ ನುಡಿ ವಾರ್ತೆ ಕೊಟ್ಟೂರು



ಪಟ್ಟಣದ ರಾಜೀವ್ ನಗರದ ಎಚ್ ಪಕ್ಕೀರಪ್ಪ ರವರು ಸಮಾಜ ಸೇವೆಯಲ್ಲಿ ತೊಡಗಿ ಗುರುವಾರ ಜೆ ಪಿ ನಗರದ ಸರಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಗೆ ಮಹಾನ್ ವ್ಯಕ್ತಿಗಳ 4 ಭಾವ ಚಿತ್ರಗಳನ್ನು ಉಡುಗೊರೆಯಾಗಿ ನೀಡಿ. ಅವರು ಮಾತನಾಡಿ

ಈ ಸರಕಾರಿ ಶಾಲೆಗಳಲ್ಲಿ ವಿಧ್ಯಾಭ್ಯಾಸ ಮಾಡುತ್ತಿರುವ ಮಕ್ಕಳು ದೇಶಾಭಿಮಾನಿ ಬೆಳೆಸಿಕೊಳ್ಳಬೇಕು .ದೇಶಕ್ಕೆ ಮಡಿದ ಹೋರಾಟಗಾರರನ್ನು ನೆನೆಯಬೇಕು ಸಮಾಜದಲ್ಲಿ ಮಕ್ಕಳು ಸಮಾಜ ಘಾತುಕ ಪ್ರವೃತ್ತಿಯನ್ನು ಬೆಳಿಸಿಕೊಳ್ಳದೇ ಸಮಾಜಕ್ಕೆ ಪ್ರತಿದಿನವು ನೆಮ್ಮದಿ ಹಾಗೂ ಶಾಂತಿಯಿಂದ ಜೀವನ ನೆಡಸಲು ಕಾರಣಕರ್ತರಾಗರಬೇಕು ಎಂದು ತಿಳಿಸಿದರು

ಈ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳು ಸಮಾಜದಲ್ಲಿ ಉನ್ನತ ಹುದ್ದೆಗಳಿಗೆ ಹಾಗೂ ಉನ್ನತ ಸ್ಥಾನಮಾನಗಳನ್ನು ಅಲಂಕರಿಸಿಕೊಂಡು ಮಹಾನ್ ವ್ಯಕ್ತಿಗಳಾಗಿ ಈ ಸರಕಾರಿ ಶಾಲೆಗೆ ಹಾಗೂ ಶಿಕ್ಷಕರಿಗೂ ವಿದ್ಯಾರ್ಥಿಗಳು ಕೀರ್ತಿತರುವಂತಹ ಬುದ್ಧಿ ಶಾಲೆ ಮಕ್ಕಳಾಗಿ ಬೆಳೆಯುವಂತಾಗಲಿ ಎಂದು ಹೇಳಿದರು.

ಸಮಾಜ ಸೇವಕರಾಗಿ ಈ ಶಾಲೆಗೆ ಮಹಾನ್ ವ್ಯಕ್ತಿಗಳ ಭಾವಚಿತ್ರಗಳನ್ನು ಉಡುಗೊರೆಯಾಗಿ ನೀಡಿದ ಎಚ್ ಪಕ್ಕೀರಪ್ಪ .ರವರಿಗೆ ಶಾಲೆಯ ಮುಖ್ಯಗುರುಗಳು. ಶಿಕ್ಷಕರು. ಶಿಕ್ಷಕಿಯರು.ವಿದ್ಯಾರ್ಥಿಗಳು.ಧನ್ಯವಾದ ತಿಳಿಸಿದರು.

ಈ ಸಂದರ್ಭದಲ್ಲಿ ಮುಖ್ಯಗುರುಗಳು ಶಿಕ್ಷಕರು ಶಿಕ್ಷಕಿಯರು.ವಿದ್ಯಾರ್ಥಿಗಳು. ಇತರರು ಇದ್ದರು.

# ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವಿವಿಧ ಯೋಜನೆಗಳ ಸಮನ್ವಯ ಸಮಿತಿ ಸಭೆ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಜಿಲ್ಲೆಯಲ್ಲಿ ಕೈಗೊಳ್ಳಲಾಗಿರುವ ಅಂಗನವಾಡಿ ಕಟ್ಟಡಗಳ ನಿರ್ಮಾಣ ಕಾಮಗಾರಿಗಳನ್ನು ಶೀಘ್ರದಲ್ಲೇ ಪೂರ್ಣಗೊಳಿಸಬೇಕು ಹಾಗೂ ಮಕ್ಕಳಲ್ಲಿ ಅಪೌಷ್ಟಿಕತೆ ತಡೆಯಲು ಅತ್ಯಂತ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಗುರುವಾರ (ಜು. 23ರಂದು) ನಡೆದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವಿವಿಧ ಯೋಜನೆಗಳ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಒಟ್ಟು 1,960 ಅಂಗನವಾಡಿ ಕೇಂದ್ರಗಳಿದ್ದು, ಸ್ವಂತ ಕಟ್ಟಡವಿಲ್ಲದ ಕೇಂದ್ರಗಳಿಗೆ ನರೇಗಾ ಹಾಗೂ ಇತರೆ ಅನುದಾನಗಳ ಅಡಿಯಲ್ಲಿ ಹೊಸ ಕಟ್ಟಡಗಳನ್ನು ನಿರ್ಮಿಸಲಾಗುತ್ತಿದೆ. ಟೆಂಡರ್ ಪ್ರಕ್ರಿಯೆಯಲ್ಲಿರುವ ಹಾಗೂ ನಿರ್ಮಾಣ ಹಂತದಲ್ಲಿರುವ ಕಟ್ಟಡ ಕಾಮಗಾರಿಗಳನ್ನು ತಕ್ಷಣ ಪೂರ್ಣಗೊಳಿಸಿ ಉದ್ಘಾಟನೆಗೆ ಸಿದ್ಧಪಡಿಸಬೇಕು. ಅಲ್ಲದೆ, ಈಗಾಗಲೇ ಉದ್ಘಾಟನೆಯಾಗಿರುವ ಕಟ್ಟಡಗಳನ್ನು ತಕ್ಷಣವೇ ಇಲಾಖೆಯ ಅಧೀನದಲ್ಲಿ ಪಡೆದುಕೊಳ್ಳುವಂತೆ ಹೇಳಿದರು.

ತೀವ್ರ ಅಪೌಷ್ಟಿಕತೆಯಿಂದ ಬಳಲುತ್ತಿರುವ ಮಕ್ಕಳನ್ನು ತಕ್ಷಣವೇ ಗುರುತಿಸಿ, ಅವರನ್ನು ಪೋಷಣಾ ಪುನಶ್ಚೇತನ ಕೇಂದ್ರಗಳಿಗೆ (ಎನ್‌ಆರ್‌ಸಿ) ಕಡ್ಡಾಯವಾಗಿ ದಾಖಲಿಸಿ ಸೂಕ್ತ ಚಿಕಿತ್ಸೆ ಹಾಗೂ ಆಹಾರ ಒದಗಿಸಬೇಕು. ಎನ್‌ಆರ್‌ಸಿ ಕೇಂದ್ರಗಳಲ್ಲಿ ಲಭ್ಯವಿರುವ ಬೆಡ್‌ಗಳು ಖಾಲಿ ಉಳಿಯಬಾರದು. ಪೋಷಕರಿಗೆ ಸೂಕ್ತ ರೀತಿಯಲ್ಲಿ ಮನವರಿಕೆ ಮಾಡಿ ಮಕ್ಕಳನ್ನು ಭರ್ತಿ ಮಾಡುವುದು ಅಂಗನವಾಡಿ ಕಾರ್ಯಕರ್ತೆಯರು ಮತ್ತು ಮೇಲ್ವಿಚಾರಕರ ಜವಾಬ್ದಾರಿಯಾಗಿದೆ. ಮಕ್ಕಳಲ್ಲಿ ಎತ್ತರಕ್ಕೆ ತಕ್ಕಂತೆ ತೂಕವಿಲ್ಲದಿರುವುದು ಹಾಗೂ ವಯಸ್ಸಿಗೆ ತಕ್ಕಂತೆ ಎತ್ತರ ಬೆಳೆಯದಿರುವ ಸಮಸ್ಯೆ ಕಂಡುಬಂದಲ್ಲಿ, ಅಂತಹ ಮಕ್ಕಳ ಆಹಾರ ಕ್ರಮದಲ್ಲಿ ಬದಲಾವಣೆ ತರುವ ಅಗತ್ಯವಿದೆ ಎಂದರು.

ಆಹಾರದಲ್ಲಿ ಪ್ರೋಟೀನ್, ಧಾನ್ಯಗಳು ಮತ್ತು ಪೌಷ್ಟಿಕಾಂಶಗಳ ಪ್ರಮಾಣವನ್ನು ಹೆಚ್ಚಿಸುವ ಕುರಿತು ಗೃಹ ವಿಜ್ಞಾನ ಹಾಗೂ ಪೋಷಣಾ ತಜ್ಞರ ಸಲಹೆ ಪಡೆದು ವರದಿ ಸಿದ್ಧಪಡಿಸಬೇಕು. ಅಪೌಷ್ಟಿಕತೆ ನಿರ್ಮೂಲನೆಗೆ ಸಂಬಂಧಿಸಿದಂತೆ ಅಧಿಕಾರಿಗಳ ಕಾರ್ಯವೈಖರಿಯನ್ನು ಪ್ರತಿ ತಿಂಗಳು ಕಟ್ಟುನಿಟ್ಟಾಗಿ ಮರುಪರಿಶೀಲನೆ ನಡೆಸಲಾಗುವುದು. ಕರ್ತವ್ಯದಲ್ಲಿ ನಿರ್ಲಕ್ಷ್ಯ ವಹಿಸುವ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿಗಳು ಎಚ್ಚರಿಕೆ ನೀಡಿದರು.

ಮಹಿಳಾ ಮತ್ತು ಮಕ್ಕಳ ಕಲ್ಯಾಣಕ್ಕಾಗಿ ಇರುವ ಕೇಂದ್ರ ಮತ್ತು ರಾಜ್ಯ ಸರ್ಕಾರದ ವಿವಿಧ ಕಾರ್ಯಕ್ರಮಗಳು ಹಾಗೂ ಯೋಜನೆಗಳ ಸಮರ್ಪಕ ಅನುಷ್ಠಾನಕ್ಕೆ ಒತ್ತು ನೀಡುವ ಮೂಲಕ ಅರ್ಹರಿಗೆ ಸೌಲಭ್ಯಗಳನ್ನು ತಲುಪಿಸಬೇಕು. ಅಂದಾಗ ಮಾತ್ರ ಸರ್ಕಾರಗಳು ಜಾರಿಗೆ ತರುವ ಕಾರ್ಯಕ್ರಮಗಳಿಗೆ ಮಹತ್ವ ಬರುತ್ತದೆ. ಈ ಹಿನ್ನೆಲೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಎಲ್ಲ ಅಧಿಕಾರಿಗಳು, ಇಲಾಖೆಯಡಿ ಬರುವ ನಿಗಮಗಳು, ಸಾಂತ್ವನ ಕೇಂದ್ರಗಳು, ವಿವಿಧ ಸಂಘ ಸಂಸ್ಥೆಗಳ ಅಧಿಕಾರಿಗಳು, ಸಿಬ್ಬಂದಿ ಶ್ರಮಿಸಬೇಕು ಎಂದು ಸಲಹೆ ನೀಡಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ ಎಸ್. ದರಗದ ಅವರು ಮಾತನಾಡಿ, ಅಂಗನವಾಡಿ ಮಕ್ಕಳಿಗೆ ಹಾಲು ಮತ್ತು ಮೊಟ್ಟೆ ವಿತರಣೆ ನಿರಂತರವಾಗಿ ಮಾಡಬೇಕು. ಬೆಲೆ ವ್ಯತ್ಯಾಸವಾದ ಸಂದರ್ಭದಲ್ಲಿ ಮೊಟ್ಟೆ ವಿತರಣೆಯನ್ನು ತಾತ್ಕಾಲಿಕವಾಗಿ ತಡೆಹಿಡಿಯಲಾಗುತ್ತಿದ್ದು, ಈ ಸಮಸ್ಯೆಗೆ ಮೇಲಾಧಿಕಾರಿಗಳಿಗೆ ಪತ್ರ ಬರೆದು ಸರಿಪಡಿಸಿಕೊಳ್ಳಬೇಕು. ಹಾಲಿನ ಪುಡಿಯ ಸರಬರಾಜಿನಲ್ಲಿಯೂ ಸಹ ಯಾವುದೇ ಕೊರತೆಯಾಗದಂತೆ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕೆಂದು ಸೂಚನೆ ನೀಡಿದರು.

*ವಿವಿಧ ಕಾರ್ಯಕ್ರಮ, ಯೋಜನೆಗಳ ಪ್ರಗತಿ ಪರಿಶೀಲನೆ:*

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಸಂಬಂಧಿಸಿದಂತೆ ಸಮಗ್ರ ಶಿಶು ಅಭಿವೃದ್ಧಿ ಯೋಜನೆ, ಅಂಗನವಾಡಿ ಕೇಂದ್ರಗಳ ವಿವರ, ಅಂಗನವಾಡಿ ಕೇಂದ್ರಗಳ ದಾಖಲಾತಿ, ಮಿಷನ್ ಸಕ್ಷಮ ಅಂಗನವಾಡಿ ಪೋಷಣ 2.0, ಪೂರಕ ಪೌಷ್ಠಿಕ ಆಹಾರ ಕಾರ್ಯಕ್ರಮ, ಮಾತೃಪೂರ್ಣ ಯೋಜನೆ, ಅಂಗನವಾಡಿ ಕಾರ್ಯಕರ್ತೆ/ಸಹಾಯಕಿಯರ ನೇಮಕಾತಿ, ಭಾಗ್ಯಲಕ್ಷ್ಮೀ, ಸುಕನ್ಯ ಸಮೃದ್ಧಿ ಯೋಜನೆ, ಸ್ತ್ರೀ ಶಕ್ತಿ, ಗೃಹಲಕ್ಷ್ಮೀ, ಮಿಷನ್ ಶಕ್ತಿ, ಮಹಿಳಾ ಸಬಲೀಕರಣ, ಬೇಟಿ ಬಚಾವೊ ಬೇಟಿ ಪಡಾವೊ, ಸಖಿ ಒನ್ ಸ್ಟಾಪ್ ಸೆಂಟರ್, ಪಿಎಂ ಮಾತೃವಂದನಾ ಯೋಜನೆ, ಸಾಂತ್ವನ ಯೋಜನೆ, ಬಾಲಕಿಯರ ವಸತಿ ನಿಲಯ, ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ & ನಿಯಮ, ಅಕ್ಕಪಡೆ, ವಧು–ವರದಕ್ಷಿಣೆ ನಿಷೇಧ ಕಾಯ್ದೆ, ಶಾಲಾ ಪೂರ್ವ ಶಿಕ್ಷಣ ಬಲವರ್ಧನೆ ಕಾರ್ಯಕ್ರಮ ಹಾಗೂ ಮಹಿಳಾ ಅಭಿವೃದ್ಧಿ ನಿಗಮಕ್ಕೆ ಸಂಬಂಧಿಸಿದಂತೆ ವಿವಿಧ ಕಾರ್ಯಕ್ರಮಗಳು ಮತ್ತು ಯೋಜನೆಗಳ ಕುರಿತು ಸಭೆಯಲ್ಲಿ ಪ್ರಗತಿ ಪರಿಶೀಲನೆ ನಡೆಯಿತು.

ಸಭೆಯಲ್ಲಿ ಅಪರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಹೇಮಂತ ಕುಮಾರ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಉಪನಿರ್ದೇಶಕರಾದ ಸೋಮಶೇಖರಗೌಡ ಪಾಟೀಲ್, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ಜಗದೀಶ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ಅಮರೇಶ ಹಾವಿನ, ಯುನಿಸೆಫ್ ಜಿಲ್ಲಾ ಮಕ್ಕಳ ಯೋಜನೆಯ ಸಂಯೋಜಕರಾದ ಹರೀಶ್ ಜೋಗಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಬರುವ ನಿಗಮಗಳು, ಸಾಂತ್ವನ ಕೇಂದ್ರಗಳು ಹಾಗೂ ವಿವಿಧ ಸಂಘ ಸಂಸ್ಥೆಗಳ ಅಧಿಕಾರಿಗಳು, ಸಿಬ್ಬಂದಿ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

# ಜಾಗೃತಿ ಹಾಗೂ ಗೃಹ ಲಕ್ಷ್ಮಿ ವಾರ್ಷಿಕೋತ್ಸವ ಕಾರ್ಯಕ್ರಮ ಇಒ ಅವರಿಂದ ಸಭಾ ನೋಟೀಸ್ ಬಿಡುಗಡೆ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ



ಸರ್ಕಾರದ ಗ್ಯಾರಂಟಿ ಯೋಜನೆಗಳ ಯಶಸ್ವಿ ಅನುಷ್ಠಾನದ ಕುರಿತು ಜಾಗೃತಿ ಕಾರ್ಯಕ್ರಮ ಹಾಗೂ 'ಗೃಹ ಲಕ್ಷ್ಮಿ' ಯೋಜನೆಯ ಪ್ರಥಮ ವರ್ಷಾಚರಣೆ ಸಮಾರಂಭವನ್ನು ತಾಲ್ಲೂಕಿನ ತೋರಣಾ ಗ್ರಾಮ ಪಂಚಾಯತಿ ಕಚೇರಿಯಲ್ಲಿ ಆಯೋಜಿಸಲಾಗುವ ಬಗ್ಗೆ ಇಒ ಹಣಮಂತರಾಯ ಕೌಟಗೆ ಪ್ರಕಟಣೆ ಮೂಲಕ ತಿಳಿಸಿದ್ದಾರೆ. ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಸಮಿತಿಯ ಅಧ್ಯಕ್ಷರಾದ ಶ್ರೀ ಆನಂದ ಚೌವ್ಹಾಣ್ ಅವರ ಅಧ್ಯಕ್ಷತೆಯಲ್ಲಿ ಬರುವ ಜುಲೈ 29, 2026ರಂದು ಬೆಳಿಗ್ಗೆ 11:30 ಗಂಟೆಗೆ ಈ ಸಭೆಯನ್ನು ಕರೆಯಲಾಗಿದೆ. ಈ ಕುರಿತು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಅಧಿಕೃತ "ಸಭಾ ನೋಟೀಸ್" ಹೊರಡಿಸಿದ್ದು, ಕಾರ್ಯಕ್ರಮಕ್ಕೆ ತಾಲ್ಲೂಕು ಮಟ್ಟದ ಸಂಬಂಧಪಟ್ಟ ಎಲ್ಲಾ ಅನುಷ್ಠಾನಾಧಿಕಾರಿಗಳು ಹಾಗೂ ಗ್ಯಾರಂಟಿ ಯೋಜನೆಯ ಸಮಿತಿಯ ಸದಸ್ಯರು ಕಡ್ಡಾಯವಾಗಿ ಹಾಜರಾಗಬೇಕೆಂದು ಕೋರಿದ್ದಾರೆ.

# ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಸಣ್ಣ ಕುಟುಂಬದ ಪರಿಕಲ್ಪನೆ ಅಳವಡಿಸಿಕೊಳ್ಳಿ: ಡಾ. ಈಶ್ವರ




• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಜಿಲ್ಲೆಯ ಗಂಗಾವತಿ ತಾಲೂಕಿನ ಸಂಗಾಪುರ ಗ್ರಾಮದಲ್ಲಿ ತಾಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ, ಸಂಗಾಪುರ ಇವರ ಸಂಯುಕ್ತ ಆಶ್ರಯದಲ್ಲಿ ತಾಲೂಕು ಮಟ್ಟದ ವಿಶ್ವ ಜನಸಂಖ್ಯಾ ದಿನಾಚರಣೆ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಹಾಗೂ ಯಶಸ್ವಿಯಾಗಿ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮವನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ. ಈಶ್ವರ ಎಸ್. ಸವಡಿ ಅವರು ಉದ್ಘಾಟಿಸಿ ಮಾತನಾಡಿ, ವಿಶ್ವ ಜನಸಂಖ್ಯಾ ದಿನದ ಆಚರಣೆಯ ಉದ್ದೇಶ ಜನರಲ್ಲಿ ಆರೋಗ್ಯಕರ ಕುಟುಂಬ, ತಾಯಿ–ಮಗು ಆರೋಗ್ಯ ಮತ್ತು ಕುಟುಂಬ ಕಲ್ಯಾಣದ ಬಗ್ಗೆ ಜಾಗೃತಿ ಮೂಡಿಸುವುದಾಗಿದೆ. ಜನಸಂಖ್ಯೆಯ ಹೆಚ್ಚಳಕ್ಕೆ ಅನುಗುಣವಾಗಿ ಆರೋಗ್ಯ, ಶಿಕ್ಷಣ, ಉದ್ಯೋಗ ಹಾಗೂ ಮೂಲಸೌಕರ್ಯಗಳ ಮೇಲಿನ ಒತ್ತಡವೂ ಹೆಚ್ಚಾಗುತ್ತದೆ. ಆದ್ದರಿಂದ ಪ್ರತಿಯೊಬ್ಬರೂ ಕುಟುಂಬ ಯೋಜನೆ ಕುರಿತು ಅರಿವು ಹೊಂದಿ, ಸರ್ಕಾರದ ಕುಟುಂಬ ಕಲ್ಯಾಣ ಕಾರ್ಯಕ್ರಮಗಳ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕು. ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಸಣ್ಣ ಕುಟುಂಬ, ಸುಖೀ ಕುಟುಂಬ ಎಂಬ ಪರಿಕಲ್ಪನೆಯನ್ನು ಪ್ರತಿಯೊಬ್ಬರೂ ಅಳವಡಿಸಿಕೊಳ್ಳುವುದು ಅಗತ್ಯವಾಗಿದೆ. ಗರ್ಭಿಣಿಯರ ಆರೈಕೆ, ತಾಯಿ–ಮಗು ಆರೋಗ್ಯ ಹಾಗೂ ಕುಟುಂಬ ಕಲ್ಯಾಣ ಸೇವೆಗಳನ್ನು ಆರೋಗ್ಯ ಇಲಾಖೆಯ ಮೂಲಕ ಉಚಿತವಾಗಿ ಪಡೆಯಬಹುದಾಗಿದೆ. ಈ ನಿಟ್ಟಿನಲ್ಲಿ ಆರೋಗ್ಯ ಸಿಬ್ಬಂದಿ ಜನಜಾಗೃತಿ ಮೂಡಿಸುವಲ್ಲಿ ಹೆಚ್ಚಿನ ಶ್ರಮ ವಹಿಸಬೇಕು ಎಂದು ಕರೆ ನೀಡಿದರು.

ನಂತರ ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ. ರವೀಂದ್ರನಾಥ್ ಅವರು ಮಾತನಾಡಿ, ಜನಸಂಖ್ಯೆ ಹೆಚ್ಚಳದಿಂದ ಉಂಟಾಗುವ ದುಷ್ಪರಿಣಾಮಗಳು, ಕುಟುಂಬ ಕಲ್ಯಾಣ ಯೋಜನೆಗಳ ಮಹತ್ವ ಹಾಗೂ ಸರ್ಕಾರದ ವಿವಿಧ ಕುಟುಂಬ ಕಲ್ಯಾಣ ಸೇವೆಗಳನ್ನು ಸದುಪಯೋಗಪಡಿಸಿಕೊಳ್ಳುವ ಕುರಿತು ಮಾಹಿತಿ ನೀಡಿದರು. ನಂತರ ಮಾತನಾಡಿದ

ಈ ಸಂದರ್ಭದಲ್ಲಿ ಡಾ. ಸಂತೋಷ್ ಕುಮಾರ್, ವೈದ್ಯಾಧಿಕಾರಿಗಳು, ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ಆಶಾ ಬೇಗಂ. ಆರೋಗ್ಯ ಇಲಾಖೆ ಸಿಬ್ಬಂದಿಗಳಾದ ದೇವಮ್ಮ, ಪ್ರಸನ್ನ, ಸಂತೋಷ, ವಿಘ್ನೇಶ, ಜಗದೀಶ್, ಮುಖ್ಯೋಪಾಧ್ಯಾಯ ಮೈಲಾರಪ್ಪ, ಪಂಚಾಯತಿ ಕಾರ್ಯದರ್ಶಿ ಶೇಖರಪ್ಪ, ಸಿಬ್ಬಂದಿ, ತಾಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾಲಯದ ಅಧಿಕಾರಿಗಳು, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಶಾಲಾ ಶಿಕ್ಷಕರು, ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು, ಗರ್ಭಿಣಿಯರು, ಬಾಣಂತಿಯರು ಹಾಗೂ ಸಾರ್ವಜನಿಕರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ಅನ್ನದಾನವೇ ಪರಮೋಚ್ಚ ಸೇವೆ



• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ಜು.24.ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಶ್ರೀಮಠ ಸೇವಾ ಟ್ರಸ್ಟ್‌ನ ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದಲ್ಲಿ ಇತ್ತೀಚೆಗೆ ವಿವಿಧ ಜನ್ಮದಿನಾಚರಣೆ ಮತ್ತು ಪುಣ್ಯಾರಾಧನೆ ಕಾರ್ಯಕ್ರಮಗಳು ನೆರವೇರಿದವು ಎಂದು ಡಾ. ಚನ್ನಬಸವ ಸ್ವಾಮಿ ತಿಳಿಸಿದರು.

ಯದ್ದಲದೊಡ್ಡಿಯ ಸುವರ್ಣ ಗಿರಿ ವಿರಕ್ತಮಠದ ಪರಮ ಪೂಜ್ಯಶ್ರೀ ಮಹಾಲಿಂಗ ಮಹಾಸ್ವಾಮಿಗಳ ದಿವ್ಯ ಸಾನಿಧ್ಯದಲ್ಲಿ ಜರುಗಿದ ಈ ಕಾರ್ಯಕ್ರಮದಲ್ಲಿ, ಆಶ್ರಮದ ನಿವಾಸಿಗಳಿಗೆ ಅನ್ನದಾನ ಹಾಗೂ ಹಣ್ಣು–ಹಂಪಲು ವಿತರಿಸಲಾಯಿತು.

ಸಮೃದ್ಧಿ–ಸಂಸ್ಕೃತಿ (ಕೋಳಬಾಳ), ಖುಷಿ ಪಾಟೀಲ್ (ಬನ್ನಿಗನೂರು), ನರೇಂದ್ರ ನೆಕ್ಕಂಟಿ ಹಾಗೂ ವಿ. ನಾಗ ನಿಖಿಲ್ ಸೇರಿದಂತೆ ಹಲವರ ಜನ್ಮದಿನವನ್ನು ಆಶ್ರಮದಲ್ಲಿ ಆಚರಿಸಿಕೊಳ್ಳಲಾಯಿತು.

ಲಿಂ. ಅಮರಯ್ಯ ಸ್ವಾಮಿ ಹಿರೇಮಠ, ದಿ. ಶಂಕ್ರಮ್ಮ ಗುಂಡೂರು, ದಿ. ಸತ್ತಿರಾಜು ಹಾಗೂ ದಿ. ವುಂಡವಲ್ಲಿ ಸೀತಾರತ್ನಂ ಅವರ ಸ್ಮರಣಾರ್ಥ ಪುಣ್ಯಾರಾಧನೆ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಸಾನಿಧ್ಯವಹಿಸಿದ್ದ ಶ್ರೀ ಮಹಾಲಿಂಗ ಮಹಾಸ್ವಾಮಿಗಳು ಆಶೀರ್ವಚನ ನೀಡಿ, "ಇಂದಿನ ತಂತ್ರಜ್ಞಾನದ ಯುಗದಲ್ಲಿ ಸಂಸ್ಕಾರದ ಕೊರತೆಯಿಂದಾಗಿ ವೃದ್ಧಾಶ್ರಮಗಳು ಹುಟ್ಟಿಕೊಳ್ಳುತ್ತಿವೆ. ಕಾರುಣ್ಯ ಸಂಸ್ಥೆಯು ಅಂಧ–ಅನಾಥರ ಬಾಳಿಗೆ ಕರುಣೆ–ಯ ಕುಟುಂಬವಾಗಿದೆ. ಸಾರ್ವಜನಿಕರು ತಮ್ಮ ಮನೆಯ ಶುಭಾರಂಭದ ಕಾರ್ಯಗಳನ್ನು ಇಂತಹ ಆಶ್ರಮಗಳಲ್ಲಿ ನೆರವೇರಿಸುವುದರಿಂದ ನಿಜವಾದ ಪುಣ್ಯ ಪ್ರಾಪ್ತಿಯಾಗುತ್ತದೆ ಎಂದರು.

ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವ ಸ್ವಾಮಿ ಹಿರೇಮಠ ಮಾತನಾಡಿ, ಸೇವಾ ಕಾರ್ಯಗಳಿಗೆ ಗುರುಗಳ ಆಶೀರ್ವಾದವೇ ಸ್ಫೂರ್ತಿ ಎಂದರು. ಈ ಸಂದರ್ಭದಲ್ಲಿ ಕೀರ್ತಿ ಗಿರಡ್ಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಆಶ್ರಮದ ಪದಾಧಿಕಾರಿಗಳು, ದಾನಿಗಳು ಹಾಗೂ ಊರಿನ ಪ್ರಮುಖರು ಉಪಸ್ಥಿತರಿದ್ದರು.

# ಶರಣಬಸವೇಶ್ವರ ಸಂಸ್ಥಾನದಲ್ಲಿ ಶ್ರಾವಣ ಮಾಸದಂಗವಾಗಿ ಆ. 12ರಿಂದ 40 ದಿನಗಳ ಧಾರ್ಮಿಕ-ಸಾಮಾಜಿಕ ಪ್ರವಚನ ಹಾಗೂ ವೈವಿಧ್ಯಮಯ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ







ಪವಿತ್ರ ಶ್ರಾವಣ ಮಾಸದಂಗವಾಗಿ ಹಾಗೂ ಶರಣಬಸವೇಶ್ವರ ಸಂಸ್ಥಾನದ 8ನೇ ಮಹಾದಾಸೋಹ ಪೀಠಾಧಿಪತಿಗಳಾದ ಲಿಂಗೈಕ್ಯ ಪೂಜ್ಯ ಡಾ. ಶರಣಬಸವಪ್ಪ ಅಪ್ಪಾಜಿಯವರ ಪ್ರಥಮ ಪುಣ್ಯತಿಥಿ ಹಾಗೂ ಸಂಸ್ಥಾನದ 7ನೇ ಮಹಾದಾಸೋಹ ಪೀಠಾಧಿಪತಿಗಳಾದ ಲಿಂಗೈಕ್ಯ ಪೂಜ್ಯ ದೊಡ್ಡಪ್ಪ ಅಪ್ಪಾಜಿಯವರ 43ನೇ ಪುಣ್ಯತಿಥಿಯ ಸ್ಮರಣಾರ್ಥ ವಾರ್ಷಿಕ 40 ದಿನಗಳ ಧಾರ್ಮಿಕ, ಸಾಮಾಜಿಕ, ಸಾಂಸ್ಕೃತಿಕ ಹಾಗೂ ಶೈಕ್ಷಣಿಕ ಕಾರ್ಯಕ್ರಮಗಳನ್ನು ಆಗಸ್ಟ್ 12ರಿಂದ ಶರಣಬಸವೇಶ್ವರ ದೇವಸ್ಥಾನ ಹಾಗೂ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧೀನದ ಶಿಕ್ಷಣ ಸಂಸ್ಥೆಗಳಲ್ಲಿ ಹಮ್ಮಿಕೊಳ್ಳಲಾಗಿದೆ.

ಕಳೆದ 250ಕ್ಕೂ ಹೆಚ್ಚು ವರ್ಷಗಳಿಂದ ಶ್ರಾವಣ ಮಾಸದಂಗವಾಗಿ ಶರಣಬಸವೇಶ್ವರ ದೇವಸ್ಥಾನದಲ್ಲಿ ನಿರಂತರವಾಗಿ ನಡೆಯುತ್ತಿರುವ ಈ ಮಹತ್ವದ ಧಾರ್ಮಿಕ–ಸಾಮಾಜಿಕ ಕಾರ್ಯಕ್ರಮವು ಇದೇ ಮೊದಲ ಬಾರಿಗೆ ಸಂಸ್ಥಾನದ 9ನೇ ಪೀಠಾಧಿಪತಿಗಳಾದ ಪೂಜ್ಯ ದೊಡ್ಡಪ್ಪ ಅಪ್ಪಾಜಿಯವರ ನೇತೃತ್ವದಲ್ಲಿ ಹಾಗೂ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷರು ಹಾಗೂ ಶರಣಬಸವ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ಮಾತೋಶ್ರೀ ಪೂಜ್ಯ ಡಾ. ದಾಕ್ಷಾಯಿಣಿ ಅವ್ವಾಜಿಯವರ ಮಾರ್ಗದರ್ಶನದಲ್ಲಿ ನಡೆಯಲಿದೆ. ಈ 40 ದಿನಗಳ ಕಾರ್ಯಕ್ರಮಗಳ ಪ್ರಮುಖ ಉದ್ದೇಶ ಲಿಂಗೈಕ್ಯ ಪೂಜ್ಯ ಡಾ. ಶರಣಬಸವಪ್ಪ ಅಪ್ಪಾಜಿಯವರು ಸಮಾಜಕ್ಕೆ, ವಿಶೇಷವಾಗಿ ಶಿಕ್ಷಣ ಹಾಗೂ ಸಾಮಾಜಿಕ ಕ್ಷೇತ್ರಕ್ಕೆ ನೀಡಿರುವ ಅಪಾರ ಕೊಡುಗೆಯನ್ನು ಜನತೆಗೆ ಪರಿಚಯಿಸುವುದಾಗಿದೆ.

ಶ್ರಾವಣ ಮಾಸದ 30 ದಿನಗಳ ಕಾಲ ಪ್ರತಿದಿನ ಒಂದು ಗಂಟೆ ಅವಧಿಯ ಸಂತ ಶರಣಬಸವೇಶ್ವರರ ಜೀವನ ಮತ್ತು ಸಂದೇಶ ಕುರಿತ ಧಾರ್ಮಿಕ ಪ್ರವಚನವನ್ನು ಕಲಬುರಗಿ ಜಿಲ್ಲೆಯ ಸುಂಟನೂರಿನ ಖ್ಯಾತ ವಾಗ್ಮಿ ಶ್ರೀ ಬಂಡಯ್ಯ ಶಾಸ್ತ್ರಿಗಳು, ಶರಣಬಸವೇಶ್ವರ ದೇವಸ್ಥಾನದ ಆವರಣದಲ್ಲಿರುವ ಅಖಿಲ ಭಾರತ ಶಿವಾನುಭವ ಮಂಟಪದಲ್ಲಿ ನಡೆಸಿಕೊಡಲಿದ್ದಾರೆ. ಇದರ ಜೊತೆ–ಗೆ, ಡಾ. ಶರಣಬಸವಪ್ಪ ಅಪ್ಪಾಜಿಯವರು ಶಿಕ್ಷಣ, ಸಮಾಜಸೇವೆ ಹಾಗೂ ವಿವಿಧ ಕ್ಷೇತ್ರಗಳಿಗೆ ನೀಡಿರುವ ಜೀವಮಾನದ ಸಾಧನೆ ಕುರಿತು 40 ದಿನಗಳ ಕಾಲ ವಿಶೇಷ ಉಪನ್ಯಾಸಗಳನ್ನೂ ಆಯೋಜಿಸಲಾಗಿದೆ. ಶಿಕ್ಷಣ ತಜ್ಞರು, ಸಮಾಜಸೇವಕರು ಹಾಗೂ ಡಾ. ಅಪ್ಪಾಜಿಯವರೊಂದಿಗೆ ನಿಕಟವಾಗಿ ಕಾರ್ಯನಿರ್ವಹಿಸಿದ ಗಣ್ಯರು ಧಾರ್ಮಿಕ ಪ್ರವಚನದ ನಂತರ ಶಿವಾನುಭವ ಮಂಟಪದಲ್ಲಿ ಈ ವಿಶೇಷ ಉಪನ್ಯಾಸಗಳನ್ನು ನೀಡಲಿದ್ದಾರೆ.

ಗುರುವಾರ ಸಂಜೆ ಕಲಬುರಗಿ ನಗರದ ಶರಣಬಸವೇಶ್ವರ ದೇವಸ್ಥಾನದ ಆವರಣದಲ್ಲಿರುವ ದಾಸೋಹ ಮಹಾಮನೆಯಲ್ಲಿ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷರು ಹಾಗೂ ಶರಣಬಸವ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ಮಾತೋಶ್ರೀ ಪೂಜ್ಯ ಡಾ. ದಾಕ್ಷಾಯಿಣಿ ಅವ್ವಾಜಿಯವರ ಅಧ್ಯಕ್ಷತೆಯಲ್ಲಿ ಹಾಗೂ ಸಂಘದ ಕಾರ್ಯದರ್ಶಿ ಶ್ರೀ ಬಸವರಾಜ ದೇಶಮುಖ ಅವರ ಉಪಸ್ಥಿತಿಯಲ್ಲಿ ಸಂಘದ ಎಲ್ಲಾ ಶಾಲಾ–ಕಾಲೇಜುಗಳ ಪ್ರಾಂಶುಪಾಲರು, ಶರಣಬಸವ ವಿಶ್ವವಿದ್ಯಾಲಯದ ಉಪಕುಲಪತಿಗಳು ಹಾಗೂ ಅಧಿಕಾರಿಗಳ ಸಭೆ ನಡೆಯಿತು. ಈ ಸಭೆಯಲ್ಲಿ ನಗರದಲ್ಲಿರುವ ಸಂಘದ ಎಲ್ಲಾ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳಿಂದ ವಿವಿಧ ಸಾಮಾಜಿಕ ಹಾಗೂ ಜನಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ತೀರ್ಮಾನಿಸಲಾಯಿತು.

ಕ್ರೀಡಾಕೂಟ, ಮ್ಯಾರಥಾನ್, ಉಚಿತ ಆರೋಗ್ಯ ತಪಾಸಣಾ ಶಿಬಿರ, ರಕ್ತದಾನ ಶಿಬಿರ, ಸ್ವಚ್ಛತಾ ಹಾಗೂ ಜಾಗೃತಿ ಅಭಿಯಾನ, ಮಹಿಳಾ ಶಿಕ್ಷಕಿಯರು ಮತ್ತು ವಿದ್ಯಾರ್ಥಿನಿಯರ ಬೈಕ್ ರ್‍ಯಾಲಿ ಸೇರಿದಂತೆ ಲಿಂಗೈಕ್ಯ ಪೂಜ್ಯ ಡಾ. ಶರಣಬಸವಪ್ಪ ಅಪ್ಪಾಜಿಯವರ ಸಾಧನೆಗಳನ್ನು ಪರಿಚಯಿಸುವ ಹತ್ತು ಹಲವು ಕಾರ್ಯಕ್ರಮಗಳು ಜರುಗಲಿವೆ. ಸಂಸ್ಥಾನದ ಮಹಾಮನೆಯಲ್ಲಿ ನಡೆದ ಈ ಸಭೆಯಲ್ಲಿ ಸಂಸ್ಥಾನದ 9ನೇ ಮಹಾದಾಸೋಹ ಪೀಠಾಧಿಪತಿಗಳಾದ ಪೂಜ್ಯ ದೊಡ್ಡಪ್ಪ ಅಪ್ಪಾಜಿ ಅವರು ಪಾಲ್ಗೊಂಡರು. ಹಿಂದೂ ಪಂಚಾಂಗದ ಪ್ರಕಾರ ಡಾ. ಶರಣಬಸವಪ್ಪ ಅಪ್ಪಾಜಿಯವರ ಪ್ರಥಮ ಪುಣ್ಯತಿಥಿ ಸೆಪ್ಟೆಂಬರ್ 2ರಂದು ನಡೆಯಲಿದ್ದು, ಆ ದಿನ ಜರುಗುವ ಭವ್ಯ ಸಮಾರಂಭದಲ್ಲಿ ವಿವಿಧ ಮಠಗಳ ಪೀಠಾಧಿಪತಿಗಳು ಭಾಗವಹಿಸಲಿರುವರು. ಈ ಕಾರ್ಯಕ್ರಮದಲ್ಲಿ ಡಾ. ನೀಲಾಂಬಿಕಾ ಶೇರಿಕಾರ್ ಅವರು ಸಂಪಾದಿಸಿರುವ, ಡಾ. ಶರಣಬಸವಪ್ಪ ಅಪ್ಪಾಜಿಯವರೊಂದಿಗೆ ನಿಕಟ ಸಂಪರ್ಕ ಹೊಂದಿದ್ದ ವಿವಿಧ ಗಣ್ಯರ ಲೇಖನಗಳು ಹಾಗೂ ನೆನಪುಗಳ ಸಂಕಲನವಾದ "ಮಹಾಮಾನವ" ಕೃತಿಯನ್ನು ಲೋಕಾರ್ಪಣೆ ಮಾಡಲಾಗುವುದು.

ಇದೇ ವೇಳೆ ವಿವಿಧ ಶಾಲಾ–ಕಾಲೇಜುಗಳಲ್ಲಿ ಉತ್ತಮ ಫಲಿತಾಂಶ ಸಾಧಿಸಲು ಶ್ರಮಿಸಿದ ಅತ್ಯುತ್ತಮ ಶಿಕ್ಷಕರನ್ನು ಸನ್ಮಾನಿಸಿ ಪ್ರಶಸ್ತಿ ಪ್ರದಾನ ಮಾಡಲಾಗುವುದು. ಶ್ರಾವಣೋತ್ಸವದ ಅಂಗವಾಗಿ ನಡೆದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಗುವುದು. ಸಭೆಯಲ್ಲಿ ಈ ಅವಧಿಯಲ್ಲಿ ಅಂತರ್‌ಶಾಲಾ ಹಾಗೂ ಅಂತರ್‌ಕಾಲೇಜು ವಾಲಿಬಾಲ್ ಪಂದ್ಯಾವಳಿ, ಶಿಕ್ಷಕರು ಹಾಗೂ ವಿದ್ಯಾರ್ಥಿಗಳಿಗಾಗಿ ಮ್ಯಾರಥಾನ್ ಸೇರಿದಂತೆ ವಿವಿಧ ಕ್ರೀಡಾ ಚಟುವಟಿಕೆಗಳನ್ನು ಆಯೋಜಿಸಲು ತೀರ್ಮಾನಿಸಲಾಯಿತು. ವಿಶ್ವವಿದ್ಯಾಲಯ, ಕಾಲೇಜುಗಳು ಹಾಗೂ ಶಾಲೆಗಳಲ್ಲಿ ಡಾ. ಶರಣಬಸವಪ್ಪ ಅಪ್ಪಾಜಿಯವರ ಜೀವನ ಹಾಗೂ ಆದರ್ಶಗಳ ಕುರಿತು ಭಾಷಣ, ಚರ್ಚಾ ಸ್ಪರ್ಧೆ, ಚಿತ್ರಕಲೆ, ಸಂಗೀತ ಹಾಗೂ ಇತರೆ ಸಾಂಸ್ಕೃತಿಕ ಸ್ಪರ್ಧೆಗಳನ್ನೂ ನಡೆಸಲಾಗುವುದೆಂದು ತೀರ್ಮಾನಿಸಲಾಯಿತು.

ಸಭೆಯಲ್ಲಿ ಶರಣಬಸವ ವಿಶ್ವವಿದ್ಯಾಲಯದ ಉಪಕುಲಪತಿ ಪ್ರೊ. ಅನಿಲಕುಮಾರ ಬಿಡವೆ, ನಿರ್ದೇಶಕ ಪ್ರೊ. ವಿ. ಡಿ. ಮೈತ್ರಿ, ಕುಲಸಚಿವರಾದ ಡಾ. ಲಕ್ಷ್ಮೀ ಪಾಟೀಲ ಮಾಕಾ, ಕುಲಸಚಿವ (ಮೌಲ್ಯಮಾಪನ) ಡಾ. ಎಸ್. ಎಚ್. ಹೊನ್ನಳ್ಳಿ, ಹಣಕಾಸು ಅಧಿಕಾರಿ ಡಾ. ಕಿರಣ್ ಮಕಾ, ಡೀನ್ ಶಿವಕುಮಾರ ಜವಳಿಗಿ, ಕಲಾ ಕಾಲೇಜಿನ ಪ್ರಾಂಶುಪಾಲ ಪ್ರೊ. ಸುರೇಶ್ ನಂದಗಾಂವ್, ಡಾ. ಶಿವರಾಜ ಶಾಸ್ತ್ರಿ ಸೇರಿದಂತೆ ಸಂಘದ ಎಲ್ಲ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಪ್ರತಿನಿಧಿಗಳು ಉಪಸ್ಥಿತರಿದ್ದರು.

# ಮುಕ್ತ ಮನಸ್ಸಿನಿಂದ ಕ್ರೀಡೆಯಲ್ಲಿ ಭಾಗವಹಿಸಿ ; ಟಿ.ಪಿ.ಒ ಚಂದ್ರಶೇಖರ

• ಮಲ್ಲಮ್ಮ ನುಡಿ ವಾರ್ತೆ ಮುದಗಲ್



ವಿದ್ಯಾರ್ಥಿಗಳು ಮುಕ್ತ ಮನಸ್ಸಿನಿಂದ ಕ್ರೀಡೆಯಲ್ಲಿ ಭಾಗವಹಿಸಿ ಕೀರ್ತಿಗೆ ಪಾತ್ರರಾಗಬೇಕು ಎಂದು ತಾಲೂಕ ದೈಹಿಕ ಶಿಕ್ಷಣಾಧಿಕಾರಿ ಚಂದ್ರಶೇಖರ ಶುಕ್ರವಾರ ಹೇಳಿದರು. ಪಟ್ಟಣ ಸಮೀಪದ ತುಂಬಲಗಡ್ಡಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 2026–27ನೇ ಸಾಲಿನ ಕ್ಲಸ್ಟರ ಮಟ್ಟದ ಕ್ರೀಡಾ ಕೂಟದ ಕ್ರೀಡಾ ಜ್ಯೋತಿ ಬೆಳಗಿಸುವ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು ಕ್ರೀಡೆಯಲ್ಲಿ ಸೋಲು ಗೆಲುವು ಮುಖ್ಯವಲ್ಲ, ಕ್ರೀಡಾ ಚಟುವಟಿಕೆಯಲ್ಲಿ ಭಾವಹಿಸುವುದು ಮುಖ್ಯವಾಗಿದೆ. ಕ್ರೀಡಾ ನಿಯಮಕ್ಕೆ ಎಲ್ಲರೂ ಭದ್ಧರಾಗಬೇಕು, ವಿಧ್ಯಾರ್ಥಿಗಳು ತಾಲೂಕು, ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಆಡುವಂತಾಗಬೇಕು. ಮುಕ್ತ ಮನಸ್ಸಿನಿಂದ ಕ್ರೀಡೆಯಲ್ಲಿ ಭಾಗವಹಿಸಿ ಕ್ರೀಡೆಯಲ್ಲಿ ಜಯಗಳಿಸಿ ಶಾಲೆ ಹಾಗೂ ಊರಿಗೆ ಕೀರ್ತಿ ತನ್ನಿರಿ ಎಂದರು. ತಾಲೂಕ ಪ್ರಾಥಮಿಕ ಶಿಕ್ಷಣ ಸಂಘ ಅಧ್ಯಕ್ಷ ಗುರುಸಂಗಯ್ಯ ಗಣಾಚಾರಿ ಮಾತನಾಡಿ ಕ್ರೀಡೆಯಿಂದ ಆರೋಗ್ಯದ ಭಾಗ್ಯ ಕಾಣಬಹುದಾಗಿದೆ. ಆಟದಂತೆ ಪಾಠದಲ್ಲೂ ಮನಸ್ಸು ಇಟ್ಟರೆ ಸುಲಭವಾಗಿ ಗೆಲುವು ಸಾಧಿಸಬಹುದು. ಇಂದು ಪ್ರಾರಂಭವಾಗುವ ಕ್ರೀಡಾ ಕೂಟದಲ್ಲಿ 11ಶಾಲಾ ವಿಧ್ಯಾರ್ಥಿಗಳು ಭಾಗವಹಿಸಲಿದ್ದಾರೆ. ಕ್ರೀಡೆಯಲ್ಲಿ ಭಾಗವಹಿಸುವುದರಿಂದ ಬುದ್ಧಿ ಚುರುಕಾಗುವುದು ಎಂದು ತಿಳಿಸಿದರು. ದೈಹಿಕ ಶಿಕ್ಷಕ ಮಹಾಂತೇಶ ಪ್ರತಿಜ್ಞಾವಿಧಿ ಬೋಧಿಸಿದರು. ಸಹ ಶಿಕ್ಷಕ ನಿಂಗಣ್ಣ ಎಂ ಕಾರ್ಯಕ್ರಮ ನಿರೂಪಣೆ, ಸಿಆರ್‌ಪಿ ವಿಜಯಕುಮಾರ ಮೇಟಿ ವಂದನಾರ್ಪಣೆ ಮಾಡಿದರು. ಎಸ್ಡಿಎಂಸಿ ಅಧ್ಯಕ್ಷೇ ವನಮಾಲ ಯಮನೂರು, ಉಪಾಧ್ಯಕ್ಷ ಅಬ್ದುಲ್ ಖಾದರ ದೋಟಿಹಾಳ, ಕಾಸೀಂಸಾಬ ಬಡಿಗೇರ, ಹೆಚ್ ಎಂ ಶಿವಬಸ್ಸಪ್ಪ ಅಂಗಡಿ, ಜಿತೇಂದ್ರ ಕುಮಾರ ಗುತ್ತೇದಾರ, ಅನಂತರಾವ್ ಕುಲಕರ್ಣಿ, ಸಾಬನಗೌಡ, ರಾಮುಲು ಗುತ್ತೇದಾರ, ಹನುಮಪ್ಪ, ದೇವಪ್ಪ ಜೂಲಗುಡ್ಡ, ಸಿಆರ್‌ಪಿ ಶ್ರೀಶೈಲಗೌಡರ್, ಹೇಮಯ್ಯ ತಂತಗುಂಟಿ, ಬಸವರಾಜ ಮಾನಪ್ಪ ಬಡಿಗೇರ, ಸಂಗಪ್ಪ ಟಕ್ಕಳಗಿ, ಸುಭಾಸ ರೆಡ್ಡೆರ್, ಕಲ್ಲೂಡೆಪ್ಪ ಯಮನಪ್ಪ, ಲಕ್ಕಪ್ಪ, ಹನುಮಪ್ಪ ಯಮನಪ್ಪ, ತಿಪ್ಪಣ್ಣ, ಶಿವನಗೌಡ, ಲೋಕಪ್ಪ ದೇಸಾಯಿ, ಸಂಗನಬಸ್ಸಪ್ಪ, ಆನಂದಪ್ಪ, ಹನುಮಪ್ಪ, ಸಾಬಣ್ಣ ಸೇರಿದಂತೆ ಇತರರಿದ್ದರು.

# ದಡೇಸುಗೂರಿನಲ್ಲಿ ಮಾನಸಿಕ ಆರೋಗ್ಯ ಜಾಗೃತಿ ಮತ್ತು ತಪಾಸಣಾ ಶಿಬಿರ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು



ಜು. 24:ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು, ಜಿಲ್ಲಾ ಮಾನಸಿಕ ಆರೋಗ್ಯ ವಿಭಾಗ ರಾಯಚೂರು, ತಾಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಸಿಂಧನೂರು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ದಡೇಸುಗೂರು ಇವರ ಸಂಯುಕ್ತಾಶ್ರಯದಲ್ಲಿ ಇಂದು ದಡೇಸುಗೂರು ಪ್ರಾಥಮಿಕ ಆರೋಗ್ಯ ಕೇಂದ್ರದ ಆವರಣದಲ್ಲಿ "ಮಾನಸಿಕ ಆರೋಗ್ಯ ಜೊತೆಗೆ ಉಚಿತ ಆರೋಗ್ಯ ತಪಾಸಣಾ ಶಿಬಿರ" ಹಾಗೂ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.


ಈ ವೇಳೆ ಡಾ. ಮನೋಹರ್ ಪತ್ತಾರ ಮನೋವೈದ್ಯರು, ರಾಯಚೂರು ಅವರು ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿ, ಮಾನಸಿಕ ಕಾಯಿಲೆಯ ಲಕ್ಷಣಗಳು, ವ್ಯಕ್ತಿತ್ವ ದೋಷಗಳು, ದೈಹಿಕ ಬದಲಾವಣೆಗಳು ಮತ್ತು ವಿಚಿತ್ರ ಮಾತನಾಡುವ ನಡವಳಿಕೆಗಳ ಬಗ್ಗೆ ವಿಸ್ತೃತವಾಗಿ ತಿಳಿಸಿದರು. ಭ್ರಾಂತಿ, ಬುದ್ಧಿಭ್ರಮೆ, ಖಿನ್ನತೆ, ನಿರುತ್ಸಾಹ, ತಳಮಳ, ಹಾಗೂ ಮಾದಕ ವಸ್ತು ಮತ್ತು ಮದ್ಯಪಾನದ ಮೇಲಿನ ನಿಯಂತ್ರಣ ಕಳೆದುಕೊಳ್ಳುವುದು ಮಾನಸಿಕ ಅಸ್ವಸ್ಥತೆಯ ಲಕ್ಷಣಗಳಾಗಿವೆ. ಅತಿಯಾದ ನಿದ್ರೆ, ಹಸಿವು, ಜ್ಞಾಪಕ ಶಕ್ತಿ ಕುಂಠಿತಗೊಳ್ಳುವುದು ಮತ್ತು ಸೂಕ್ತ ನಿರ್ಧಾರ ಕೈಗೊಳ್ಳಲು ಆಗದ ಸಂದರ್ಭದಲ್ಲಿ ತಕ್ಷಣವೇ ಆಪ್ತ ಸಮಾಲೋಚನೆ ಹಾಗೂ ಚಿಕಿತ್ಸೆ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

ತದನಂತರ ಡಾ. ಆಂಜನೇಯ (ಆಡಳಿತ ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ, ದಡೇಸುಗೂರು) ಮಾತನಾಡಿ, ವೈಯಕ್ತಿಕ ಮತ್ತು ಸಾಮಾಜಿಕ ಚಟುವಟಿಕೆಗಳಲ್ಲಿ ಬದಲಾವಣೆಗಳು ಕಂಡುಬಂದಾಗ ಮಾನಸಿಕ ಒತ್ತಡ ನಿರ್ವಹಣೆಗೆ ವೈದ್ಯರ ಸಲಹೆ ಪಡೆಯುವುದು ಅತ್ಯಾವಶ್ಯಕವಾಗಿದೆ. ಸಿಂಧನೂರಿನಲ್ಲಿ ಪ್ರತಿ ತಿಂಗಳ ಮೂರನೇ ಮಂಗಳವಾರ ವಿಶೇಷ ಕ್ಲಿನಿಕ್ ಇರಲಿದ್ದು, ಮಾನಸಿಕ ಸಮಸ್ಯೆ ಇರುವವರು ಇದರ ಸದುಪಯೋಗಪಡಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಆಸ್ಪತ್ರೆಗಳನ್ನು ಸಂಪರ್ಕಿಸುವಂತೆ ತಿಳಿಸಿದರು.

ಜೊತೆಗೆ ಶ್ರೀಮತಿ ಗೀತಾ ಹಿರೇಮಠ(ತಾಲೂಕು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳು) ಮಾತನಾಡಿ, ಬೈಪೋಲಾರ್, ಮನೋವಿಕಲತೆ, ಸನ್ನಿ, ಮರಿವಿನ ರೋಗ, ಬುದ್ಧಿಮಾಂದ್ಯತೆ ಮತ್ತು ಮಾದಕ ದ್ರವ್ಯ ವ್ಯಸನದಂತಹ ಅಪಾಯಕಾರಿ ಲಕ್ಷಣಗಳ ಬಗ್ಗೆ ಎಚ್ಚರಿಕೆ ವಹಿಸಬೇಕು. ಈ ರೀತಿಯ ಸಮಸ್ಯೆಗಳಿಗೆ ಸರಿಯಾದ ವೈದ್ಯಕೀಯ ಚಿಕಿತ್ಸೆ ಪಡೆದರೆ ಸಂಪೂರ್ಣವಾಗಿ ಗುಣಪಡಿಸಿಕೊಳ್ಳಬಹುದು ಎಂದು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಅರುಣ್ ಕುಮಾರ್ ಹಾಗೂ ಡಿ.ಎಂ. ಎಚ್.ಪಿ, ತಂಡ ರಾಯಚೂರು, ಅಭಿಲಾಷ್ ಸಿ ಎಚ್ ಓ, ಶಾಹಿಲಾ ಪಿ ಎಚ್ ಸಿ ಓ, ಸುನೀತಾ , ವಿನೋದಾ ಎಸ್ ಎನ್, ಸೇರಿದಂತೆ ಆಶಾ ಕಾರ್ಯಕರ್ತೆಯರು, ಗ್ರಾಮಸ್ಥರು ಇದ್ದರು.

# ರಕ್ತದಾನ ಮಾಡಿ ಅಮೂಲ್ಯ ಜೀವ ಉಳಿಸಿ



ವಿಜಯಪುರ ಜು24: ನಗರದ ಪ್ರತಿಷ್ಠಿತ ರೋಟರಿ ಸಂಸ್ಥೆ ಹಾಗೂ ಬಿಎಲ್‌ಡಿಇ ಫಾರ್ಮಸಿ ಕಾಲೇಜ ಸಹಯೋಗದೊಂದಿಗೆ, ಫಾರ್ಮಸಿ ಮಹಾವಿದ್ಯಾಲಯದಲ್ಲಿ ರಕ್ತದಾನ ಶಿಬಿರವನ್ನು ಏರ್ಪಡಿಸಲಾಗಿತ್ತು. ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಪ್ರಾಂಶುಪಾಲ ಡಾ. ಮಲ್ಲಿಕಾರ್ಜುನ ಶೆಟ್ಟಿ ಮಾತನಾಡಿ, ರಕ್ತದಾನವು ಎಲ್ಲ ದಾನಗಳಲ್ಲಿ ಶ್ರೇಷ್ಠದಾನ, ಇದ–ರಿಂದ ಅನೇಕ ಜನರ ಜೀವ ಉಳಿಸಲು ಸಹಾಯವಾಗುತ್ತದೆ. ರಕ್ತದಾನ ಮಾಡಿದರೆ ನಮ್ಮಲ್ಲಿ ಮತ್ತೆ ಹೊಸರಕ್ತವು ಉತ್ಪತ್ತಿಯಾಗುತ್ತದೆ. ಕಾರಣ ಪ್ರತಿಯೊಬ್ಬರೂ ರಕ್ತದಾನ ಶಿಬಿರದಲ್ಲಿ ಪಾಲ್ಗೊಳ್ಳಬೇಕೆಂದರು. ರೋಟರಿ ಸಂಸ್ಥೆಯ ಅಧ್ಯಕ್ಷ ರಾಕೇಶ್ ಜೋಷಿ ಮಾತನಾಡಿ, ರೋಟರಿ ಸಂಸ್ಥೆಯಿಂದ ಹಲವಾರು ಕಾರ್ಯಕ್ರಮಗಳನ್ನು ಪ್ರಸಕ್ತ ವರ್ಷದಲ್ಲಿ ಹಮ್ಮಿಕೊಳ್ಳಲಾಗುತ್ತಿದೆ. ಸಂಸ್ಥೆಯಿಂದ ಸಾಮಾನ್ಯ ಜನರಿಗೆ ಎಲ್ಲ ರೀತಿಯಿಂದ ಅನುಕೂಲ ಕಲ್ಪಿಸಲಾಗುತ್ತದೆ ಎಂದರು. ಸಾನಿಧ್ಯ ವಹಿಸಿದ್ದ ಪ್ರಜಾಪಿತ ಬ್ರಹ್ಮಕುಮಾರಿ ರಾಜಯೋಗಿನಿ ಸುವರ್ಣ ಅಕ್ಕನವರು ರಕ್ತದಾನವು ಮಹಾನ್ ಮಾನವೀಯತೆಯ ಕಾರ್ಯವಾಗಿದ್ದು, ರಕ್ತದಾನ ಮಾಡಿದವರು ಪರಮಾತ್ಮನ ಕೃಪೆಗೆ ನೇರ ಪಾತ್ರರಾಗುತ್ತಾರೆ ಎಂದರು.

ಇದೇ ಸಂದರ್ಭದಲ್ಲಿ ರಕ್ತದಾನ ಮಾಡಿದವರನ್ನು ಪ್ರಶಸ್ತಿ ಪತ್ರದೊಂದಿಗೆ ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಸಿಬ್ಬಂದಿಗಳಾದ ಸುಶೀಲ್ ಕುಮಾರ. ಎಲ್, ಪ್ರಶಾಂತ ಜೋರಾಪುರ, ನಂಜಪ್ಪಯ್ಯ, ರೋಟರಿ ಸಂಸ್ಥೆ ಪದಾಧಿಕಾರಿಗಳಾದ ಇಮಾಮಸಾಬ ಹುಲ್ಲೂರ್, ಡಾ. ರವೀಂದ್ರ ಬೆಳ್ಳಿ, ಗೋಪಾಲ ಕುಲಕರ್ಣಿ, ರಾಜೇಂದ್ರ ಜೋಷಿ, ಚಂದ್ರಶೇಖರ ಸಿಂಧೂರ, ನೀರಜ ಖುಣವಾಲ, ಪ್ರಕಾಶ್ ಚಿಕ್ಕಲಕಿ, ಭೋಗಶೆಟ್ಟಿ, ಪ್ರಕಾಶ ಮಠ, ಕಲ್ಲಪ್ಪ ಮೇತ್ರಿ, ಶಿಬಿರದಲ್ಲಿ ಪಾಲ್ಗೊಂಡಿದ್ದರು. ಈ ಸಂದರ್ಭದಲ್ಲಿ ರೋಟರಿ ಅಧ್ಯಕ್ಷರು ಸಮೇತವಾಗಿ ಫಾರ್ಮಸಿ ಕಾಲೇಜಿನ ವಿದ್ಯಾರ್ಥಿಗಳು ರಕ್ತದಾನ ಶಿಬಿರದಲ್ಲಿ ಪಾಲ್ಗೊಂಡು ರಕ್ತದಾನ ಮಾಡಿದರು.

# ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಖಂಡಿಸಿ ದಲಿತ ಸಂಘರ್ಷ ಸಮಿತಿ ಪ್ರತಿಭಟನೆ : ಕೇಂದ್ರ ಶಿಕ್ಷಣ ಸಚಿವರ ರಾಜೀನಾಮೆಗೆ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನೀಟ್ ಸೇರಿದಂತೆ ದೇಶದ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ನಡೆದಿರುವ ಅಕ್ರಮಗಳು ಹಾಗೂ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣಗಳನ್ನು ಖಂಡಿಸಿ, ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ (ಆರ್) (ಡಿ.ಜಿ. ಸಾಗರ್ ಬಣ) ಜಿಲ್ಲಾ ಸಮಿತಿ ನೇತೃತ್ವದಲ್ಲಿ ಶುಕ್ರವಾರ ಬಳ್ಳಾರಿ ಜಿಲ್ಲಾಧಿಕಾರಿ ಕಚೇರಿ ಆವರಣದ ಎದುರು ಧರಣಿ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನಾಕಾರರು ದೇಶದ ಪರೀಕ್ಷಾ ವ್ಯವಸ್ಥೆಯಲ್ಲಿ ಪಾರದರ್ಶಕತೆ ಮತ್ತು ವಿಶ್ವಾಸಾರ್ಹತೆ ಕಾಪಾಡುವಲ್ಲಿ ಕೇಂದ್ರ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿದರು. ನೀಟ್ ಸೇರಿದಂತೆ ವಿವಿಧ ರಾಷ್ಟ್ರೀಯ ಪರೀಕ್ಷೆಗಳಲ್ಲಿ ನಡೆದಿರುವ ಅಕ್ರಮಗಳಿಂದ ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯಕ್ಕೆ ಧಕ್ಕೆಯಾಗಿದ್ದು, ಈ ಹಿನ್ನೆಲೆಯಲ್ಲಿ ಪರೀಕ್ಷಾ ವ್ಯವಸ್ಥೆಯಲ್ಲಿ ಸಮಗ್ರ ಸುಧಾರಣೆ ತರಬೇಕು ಎಂದು ಒತ್ತಾಯಿಸಿದರು.

ದೆಹಲಿ ಜಂತರ್ ಮಂತರ್‌ನಲ್ಲಿ ಸೋನಂ ವಾಂಗ್ಚುಕ್ ನೇತೃತ್ವದಲ್ಲಿ ನಡೆಯುತ್ತಿರುವ ಉಪವಾಸ ಸತ್ಯಾಗ್ರಹಕ್ಕೆ ಬೆಂಬಲ ವ್ಯಕ್ತಪಡಿಸಿದ ಪ್ರತಿಭಟನಾಕಾರರು, ವಿದ್ಯಾರ್ಥಿಗಳ ನ್ಯಾಯಯುತ ಬೇಡಿಕೆಗಳಿಗೆ ಕೇಂದ್ರ ಸರ್ಕಾರ ಸ್ಪಂದಿಸಬೇಕು ಎಂದು ಆಗ್ರಹಿಸಿದರು. ದೇಶದ ಯುವಜನರ ಕನಸುಗಳನ್ನು ರಕ್ಷಿಸುವುದು ಸರ್ಕಾರದ ಸಂವಿಧಾನಾತ್ಮಕ ಹಾಗೂ ನೈತಿಕ ಹೊಣೆಗಾರಿಕೆಯಾಗಿದೆ ಎಂದು ಅವರು ಹೇಳಿದರು.




ಪ್ರತಿಭಟನೆ ಬಳಿಕ ಜಿಲ್ಲಾಧಿಕಾರಿಗಳ ಮೂಲಕ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಗೆ ಮನವಿ ಸಲ್ಲಿಸಿ, ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಹಾಗೂ ಇತರ ಪರೀಕ್ಷಾ ಅಕ್ರಮಗಳಿಗೆ ನೈತಿಕ ಹೊಣೆ ಹೊತ್ತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ ರಾಜೀನಾಮೆ ನೀಡಬೇಕು ಅಥವಾ ಅವರನ್ನು ಸಚಿವ ಸಂಪುಟದಿಂದ ವಜಾಗೊಳಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ರಾಜ್ಯ ಸಂಘಟನಾ ಸಂಚಾಲಕ ಎ. ಮಾನಯ್ಯ, ಶೋಷಿತ ಸಮುದಾಯಗಳ

ಜಿಲ್ಲಾಧ್ಯಕ್ಷ ಕೆ. ಗಾದಿಲಿಂಗನಗೌಡ, ರಾಜ್ಯ ಉಪಾಧ್ಯಕ್ಷ ನರಸಪ್ಪ, ಚಲುವಾದಿ ಮಹಾಸಭೆಯ ವಿ.ಎಸ್. ಶಿವಶಂಕರ್, ಕರ್ನಾಟಕ ಪ್ರಾಂತ್ಯ ರೈತ ಸಂಘದ ಜಿಲ್ಲಾಧ್ಯಕ್ಷ ಹೆಚ್.ಬಿ. ಗಂಗಪ್ಪ, ದೇವದಾಸ್, ಕೆ.ಹೆಚ್. ಆಂಜನೇಯ, ಬಿ. ರಮೇಶ್, ಟಿ.ಎಂ. ಎರಿಸ್ವಾಮಿ, ಬೆಳಗಲ್ಲು ಹುಲುಗಪ್ಪ, ಗಂಗಾಧರ, ಹೆಚ್. ಮಲ್ಲಪ್ಪ, ಜಗದೀಶ್, ಕುಮಾರ್ ಮೆಟ್ರಿ (ಕಂಪ್ಲಿ), ಎಂ. ದೊಡ್ಡಬಸಪ್ಪ, ಶಂಕರ್, ಎಸ್. ರಫಿ, ಭಿಮೇಶ್, ಎಂ.ಎಸ್. ಭಿಮಶಂಕರ್, ಎರಿಸ್ವಾಮಿ ಹಲಕುಂದಿ, ತಿಪ್ಪಯ್ಯ, ಲಕ್ಷ್ಮಣ, ಹನುಮಂತ, ರಮೇಶ್, ಅಂಜಿ, ಎನ್ನಪ್ಪ, ದುರುಗಪ್ಪ ತಾಳವಾರ, ಚಿಕ್ಕ ಗಡಿಲಿಂಗಪ್ಪ ಸೇರಿದಂತೆ ಹಲವು ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

# ಬಾಲ್ಯ ವಿವಾಹ ಆತಂಕಕಾರಿ, ಮದುವೆಗೆ ದೈಹಿಕ ಮಾನಸಿಕ ಪಕ್ವತೆ ಅಗತ್ಯ: ನ್ಯಾಯಾಧೀಶ ಸಿದ್ಧಲಿಂಗ ಪ್ರಭು



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಜಿಲ್ಲೆಯಲ್ಲಿ ಇನ್ನೂ ಬಾಲ್ಯ ವಿವಾಹಗಳು ನಡೆಯುತ್ತಿರುವುದು ಕಳವಳಕಾರಿ ವಿಚಾರ. ಮದುವೆಗೆ ದೈಹಿಕ ಮತ್ತು ಮಾನಸಿಕ ಸಾಮರ್ಥ್ಯದ ಅಗತ್ಯವಿರುತ್ತದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಸಿದ್ಧಲಿಂಗ ಪ್ರಭು ಅವರು ಹೇಳಿದರು.

ರೀಡ್ಸ್ ಸಂಸ್ಥೆ, ಮಕ್ಕಳ ವಿಶೇಷ ಪೊಲೀಸ್ ಘಟಕ ಬಳ್ಳಾರಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ) ಇವರ ಸಂಯುಕ್ತಾಶ್ರಯದಲ್ಲಿ 'ಬಾಲ್ಯವಿವಾಹ ನಿಷೇಧ, ಪೋಕ್ಸೋ ಕಾಯ್ದೆ, ಸೈಬರ್ ಕ್ರೈಂ, ಮಾದಕ ದ್ರವ್ಯ ಮುಕ್ತ, ಮಕ್ಕಳ ಮೇಲಿನ ದೌರ್ಜನ್ಯ ತಡೆ' ಕುರಿತು ನಗರದ ರಾಘವ ಕಲಾಮಂದಿರದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಸಮಾವೇಶ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

18 ವರ್ಷಕ್ಕಿಂತ ಕಡಿಮೆ ವಯಸ್ಸಿನ ಹೆಣ್ಣುಮಕ್ಕಳಿಗೆ ಮದುವೆ ಮಾಡುವುದರಿಂದ ಅವರ ಆರೋಗ್ಯ ಹಾಗೂ ವೈವಾಹಿಕ ಜೀವನದ ಮೇಲೆ ಗಂಭೀರ ಪರಿಣಾಮ ಬೀರುತ್ತದೆ. ಗ್ರಾಮ ಮಟ್ಟದಲ್ಲಿ ಬಾಲ್ಯ ವಿವಾಹಗಳ ಕುರಿತು ಜಾಗೃತಿ ಮೂಡಿಸಬೇಕು. ಇಂತಹ ಘಟನೆಗಳು ಕಂಡುಬಂದಲ್ಲಿ ತಕ್ಷಣವೇ ಪೊಲೀಸರು ಅಥವಾ ಸಂಬಂಧಿಸಿದ ಅಧಿಕಾರಿಗಳಿಗೆ ಮಾಹಿತಿ ನೀಡಬೇಕು ಎಂದು ಕರೆ ನೀಡಿದರು.

ಪೋಕ್ಸೋ ವಿಶೇಷ ನ್ಯಾಯಾಲಯವಿದ್ದರೂ, ತಪ್ಪಿತಸ್ಥರಿಗೆ ಕಠಿಣ ಶಿಕ್ಷೆಯಾಗುವ ಪ್ರಮಾಣ ಹೆಚ್ಚಾಗಬೇಕಿದೆ. ಸಮಾಜ ಬಾಹಿರ ಚಟುವಟಿಕೆಗಳಲ್ಲಿ ತೊಡಗುವವರಿಗೆ ಶಿಕ್ಷೆಯಾದಾಗ ಮಾತ್ರ ಇಡೀ ಸಮಾಜಕ್ಕೆ ಸರಿಯಾದ ಸಂದೇಶ ರವಾನೆಯಾಗುತ್ತದೆ. ಪೋಕ್ಸೋ ಪ್ರಕರಣಗಳಲ್ಲಿ ಪೊಲೀಸ್ ಮತ್ತು ನ್ಯಾಯಾಂಗದ ಜೊತೆಗೆ ಸಮಾಜ ಹಾಗೂ ವಿದ್ಯಾರ್ಥಿಗಳ ಪಾತ್ರವೂ ಪ್ರಮುಖವಾಗಿದೆ ಎಂದರು.

ಅದೇರೀತಿಯಾಗಿ, ಇತ್ತೀಚೆಗೆ ಹೆಚ್ಚುತ್ತಿರುವ ಬ್ಯಾಂಕಿಂ-ಗ್ ವಂಚನೆಗಳು, ಉದ್ಯೋಗದ ಹೆಸರಿನಲ್ಲಿ ವಂಚನೆ ಹಾಗೂ ಸಾಮಾಜಿಕ ಮಾಧ್ಯಮಗಳ ದುರ್ಬಳಕೆ ಕುರಿತು ವಿದ್ಯಾರ್ಥಿಗಳು ಜಾಗೃತರಾಗಿರಬೇಕು. ನಕಲಿ ದಾಖಲೆಗಳನ್ನು ಬಳಸಿ ಬ್ಯಾಂಕ್ ಖಾತೆ ತೆರೆಯುವುದು ಹಾಗೂ ಯುವತಿಯರ ಫೋಟೋಗಳನ್ನು ದುರ್ಬಳಕೆ ಮಾಡಿಕೊಂಡು ಬೆದರಿಕೆ ಹಾಕುವ ಪ್ರಕರಣಗಳ ವಿರುದ್ಧ ಮುಂಜಾಗ್ರತಾ ಕ್ರಮಗಳನ್ನು ವಹಿಸುವುದು ಅತ್ಯಗತ್ಯ ಎಂದು ಅರಿವು ಮೂಡಿಸಿದರು.

ಯುವಜನತೆ ಮಾದಕ ದ್ರವ್ಯಗಳ ದಾಸರಾಗುವುದನ್ನು ತಡೆಯಲು ಪೊಲೀಸ್ ಇಲಾಖೆಯಿಂದ ನಿರಂತರ ಜಾಗೃತಿ ಜಾಥಾ ಹಾಗೂ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ವಿದ್ಯಾರ್ಥಿಗಳು ಇಂತಹ ದುಶ್ಚಟಗಳಿಂದ ದೂರವಿದ್ದು, ಸಮಾಜಕ್ಕೆ ಒಳಿತಾಗುವ ನಿಟ್ಟಿನಲ್ಲಿ ಕಾರ್ಯಾಚರಿಸಬೇಕು ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಸುಮನ್ ಡಿ.ಪೆನ್ನೇಕರ್ ಅವರು ಮಾತನಾಡಿ, ಬಾಲ್ಯ ವಿವಾಹವು ಹೆಣ್ಣುಮಕ್ಕಳ ಜೀವನ ಮತ್ತು ಭವಿಷ್ಯವನ್ನು ಅಂಧಕಾರ-ಕ್ಕೆ ತಳ್ಳುತ್ತದೆ. ಇಡೀ ಜೀವನವನ್ನು ಗಂಡ, ಮಕ್ಕಳ ಸೇವೆಯಲ್ಲೇ ಕಳೆದುಹೋಗುವಂತೆ ಮಾಡುವ ಈ ಪದ್ಧತಿಯನ್ನು ತಡೆಯಲೇಬೇಕಾಗಿದೆ ಎಂದು ಹೇಳಿದರು.

ಬಾಲ್ಯ ವಿವಾಹ ತಡೆ ಕಾಯ್ದೆಯಡಿ ಹೆಣ್ಣುಮಕ್ಕಳು ಅಪರಾಧಿಯಾಗುವುದಿಲ್ಲ, ಬದಲಿಗೆ ಸಂತ್ರಸ್ತರಾಗುತ್ತಾರೆ. ಮದುವೆ ಮಾಡಿ ಕೊಟ್ಟ ಪೋಷಕರು, ಗಂಡನ ಮನೆಯವರು ಹಾಗೂ ಮದುವೆಗೆ ಸಹಕರಿಸಿದವರೇ ಕಾನೂನಿನ ಮುಂದೆ ಅಪರಾಧಿಗಳಾಗುತ್ತಾರೆ ಎಂದರು.

ಮಕ್ಕಳಿಗೆ ಕನಸು ಕಾಣಲು, ಓದಲು ಮತ್ತು ಸಾಧನೆ ಮಾಡಲು ಅವಕಾಶ ನೀಡಿ. ಆಗ ಮಾತ್ರ ಪೋಷಕರ ಹೆಸರು ಎತ್ತರಕ್ಕೆ ಬೆಳೆಯುತ್ತದೆ. ಬಾಲ್ಯ ವಿವಾಹ ನಡೆಯುತ್ತಿರುವುದು ಕಂಡುಬಂದರೆ ತಕ್ಷಣವೇ ಸಂಬಂಧಪಟ್ಟ ಇಲಾಖೆಗಳಿಗೆ, ಪೊಲೀಸ್ ಹೆಲ್ಪ್‌ಲೈನ್ ಅಥವಾ 1098 ಸಂಖ್ಯೆಗೆ ಕರೆ ಮಾಡಬಹುದಾಗಿದೆ. ಕರೆ ಮಾಡುವವರ ಮಾಹಿತಿ ಮತ್ತು ವಿವರಗಳನ್ನು ಗೌಪ್ಯವಾಗಿಡಲಾಗುತ್ತದೆ ಎಂದು ತಿಳಿಸಿದರು.

ಸ್ವ-ಸಹಾಯ ಸಂಘಗಳ ಮಹಿಳೆಯರು ಮತ್ತು ಹಿರಿಯರು ತಮ್ಮ ಜಾಗೃತಿಯನ್ನು ಹತ್ತಾರು ಜನರಿಗೆ ಹಂಚುವ ಮೂಲಕ ಬಾಲ್ಯ ವಿವಾಹ ಎಂಬ ಸಾಮಾಜಿಕ ಪಿಡುಗನ್ನು ನಿರ್ಮೂಲನೆ ಮಾಡಲು ಪಣತೊಡಬೇಕು ಎಂದು ಕರೆ ನೀಡಿದರು.

ಸಮಾವೇಶದಲ್ಲಿ ಹದಿಹರೆಯದ ಹೆಣ್ಣುಮಕ್ಕಳು ಬಾಲ್ಯವಿವಾಹದ ಕುರಿತು ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯರು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ, ಎಎಸ್‌ಪಿ ನವೀನ್ ಕುಮಾರ್, ಬಳ್ಳಾರಿ ನಗರ ಡಿವೈಎಸ್‌ಪಿ ಗೋವಿಂದರಾಜುಲು, ರೀಡ್ಸ್ ಸಂಸ್ಥೆ ಕಾರ್ಯನಿರ್ವಾಹಕ ನಿರ್ದೇಶಕ ಸಿ.ತಿಪ್ಪೇಶಪ್ಪ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರಾದ ತ್ರಿವೇಣಿ ಪತ್ತಾರ್ ಸೇರಿದಂತೆ ಮಕ್ಕಳು, ಯುವಕ-ಯುವತಿಯರು ಮತ್ತು ಸ್ವ-ಸಹಾಯ ಸಂಘದ ಮಹಿಳೆಯರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಇದಕ್ಕೂ ಮುನ್ನ ನಗರದ ಎಸ್‌ಪಿ ಕಚೇರಿಯಿಂದ ಗಡಿಗಿ ಚೆನ್ನಪ್ಪ ವೃತ್ತ, ರಾಘವ ಕಲಾ ಮಂದಿರದ ವೇದಿಕೆ ಸಭಾಂಗಣದವರೆಗೆ ಜಾಗೃತಿ ಜಾಥಾ ನಡೆಯಿತು.

# ನಟ ನಂದಮೂರಿ ಬಾಲಕೃಷ್ಣ ಶೀಘ್ರ ಗುಣಮುಖರಾಗಲಿ ಎಂದು ಬಳ್ಳಾರಿಯಲ್ಲಿ ವಿಶೇಷ ಪೂಜೆ



• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ತೆಲುಗು ಚಿತ್ರರಂಗದ ಖ್ಯಾತ ನಟ, ಆಂಧ್ರಪ್ರದೇಶದ ಮಾಜಿ ಮುಖ್ಯಮಂತ್ರಿ ಎನ್.ಟಿ. ರಾಮಾರಾವ್ ಅವರ ಪುತ್ರ ಹಾಗೂ ಹಿಂದೂಪುರ ಕ್ಷೇತ್ರದ ಹ್ಯಾಟ್ರಿಕ್ ಶಾಸಕ ನಂದಮೂರಿ ಬಾಲಕೃಷ್ಣ ಅವರು ತಮ್ಮ 111ನೇ ಚಿತ್ರದ ಚಿತ್ರೀಕರಣದ ವೇಳೆ ಗಾಯಗೊಂಡ ಹಿನ್ನೆಲೆ, ಅವರ ಶೀಘ್ರ ಗುಣಮುಖಕ್ಕಾಗಿ ಬಳ್ಳಾರಿಯ ಆದಿದೇವತೆ ಶ್ರೀ ಕನಕ ದುರ್ಗಮ್ಮ ದೇವಸ್ಥಾನದಲ್ಲಿ ಶುಕ್ರವಾರ ವಿಶೇಷ ಪೂಜೆ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ನಂದಮೂರಿ ಅಭಿಮಾನಿ ಎಲ್. ಮಲ್ಲಿಕಾರ್ಜುನ, ನಂದಮೂರಿ ಬಾಲಕೃಷ್ಣ ಅವರು ರಾಜಕೀಯ ಹಾಗೂ ಸಮಾಜಸೇವೆಯಲ್ಲಿ ಸಕ್ರಿಯರಾಗಿದ್ದು, ವಿಶೇಷವಾಗಿ ಬಸವತಾರಕಂ ಕ್ಯಾನ್ಸರ್ ಆಸ್ಪತ್ರೆ ಮೂಲಕ ಸಾವಿರಾರು ಬಡ ರೋಗಿಗಳಿಗೆ ಉಚಿತ ಹಾಗೂ ಗುಣಮಟ್ಟದ ಚಿಕಿತ್ಸೆ ಒದಗಿಸುವ ಮೂಲಕ ಮಾನವೀಯ ಸೇವೆ ಸಲ್ಲಿಸುತ್ತಿದ್ದಾರೆ. ಇಂತಹ ಮಹಾನ್ ವ್ಯಕ್ತಿಗೆ ಯಾವುದೇ ರೀತಿಯ ತೊಂದರೆ ಆಗದಿರಲಿ, ಅವರು ಶೀಘ್ರ ಚೇತರಿಸಿಕೊಂಡು ಮತ್ತೆ ಜನಸೇವೆ ಹಾಗೂ ಚಿತ್ರರಂಗದಲ್ಲಿ ಸಕ್ರಿಯರಾಗಲಿ ಎಂಬ ಸಂಕಲ್ಪದೊಂದಿಗೆ ವಿಶೇಷ ಪೂಜೆ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು. ಜು.21ರಂದು ಕಾಕಿನಾಡ ಬಂದರು ಪ್ರದೇಶದಲ್ಲಿ ನಡೆಯುತ್ತಿದ್ದ ಚಿತ್ರದ ಆಕ್ಷನ್ ದೃಶ್ಯದ ಚಿತ್ರೀಕರಣ ವೇಳೆ ಸಂಭವಿಸಿದ ಅವಘಡದಲ್ಲಿ ಬಾಲಕೃಷ್ಣ ಅವರ ಎಡ ಕಾಲಿಗೆ ಗಾಯವಾಗಿದೆ ಎನ್ನಲಾಗಿದೆ. ಈ ಹಿನ್ನೆಲೆಯಲ್ಲಿ ಅವರು ಶೀಘ್ರ ಗುಣಮುಖರಾಗಿ ಆರೋಗ್ಯವಂತರಾಗಲಿ ಎಂದು ಅಭಿಮಾನಿಗಳು ಹಾಗೂ ಭಕ್ತರು ವಿಶೇಷ ಪೂಜೆ ನೆರವೇರಿಸಿ ಪ್ರಾರ್ಥಿಸಿದರು.

ಪೂಜಾ ಕಾರ್ಯಕ್ರಮದಲ್ಲಿ ಕೆ.ವಿ. ಸತ್ಯನಾರಾಯಣ ಸ್ವಾಮಿ, ಹುಳುಗಪ್ಪ, ರಾಜ, ಹೊನ್ನೂರಪ್ಪ, ಶೇಖರ್ ಸೇರಿದಂತೆ ಹಲವರು ಉಪಸ್ಥಿತರಿದ್ದು, ಬಾಲಕೃಷ್ಣ ಅವರ ಶೀಘ್ರ ಗುಣಮುಖಕ್ಕಾಗಿ ಪ್ರಾರ್ಥಿಸಿದರು.

# ದೇವಪ್ಪ ಅವರಿಗೆ ಪಿಎಚ್‌ಡಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ರಾಜ್ಯಶಾಸ್ತ್ರ ಅಧ್ಯಯನ ವಿಭಾಗದ ಸಂಶೋಧನಾರ್ಥಿ ದೇವಪ್ಪ ಅವರಿಗೆ ಪಿಎಚ್‌ಡಿ ಪದವಿ ಲಭಿಸಿದೆ. ವಿವಿಯ ಸಮಾಜ ವಿಜ್ಞಾನ ನಿಕಾಯದ ರಾಜ್ಯಶಾಸ್ತ್ರ ಅಧ್ಯಯನ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ.ಮೋಹನ್ ದಾಸ್.ಕೆ ಅವರ ಮಾರ್ಗದರ್ಶನದಲ್ಲಿ "ಎ ಸ್ಟಡಿ ಆನ್ ವೋಟರ್ಸ್ ಬಿಹೇವಿಯರ್ ಇನ್ ಗ್ರಾಮ್ ಪಂಚಾಯತ್ ಎಲೆಕ್ಷನ್ಸ್ ವಿತ್ ಸ್ಪೆಷಲ್ ರೆಫರೆನ್ಸ್ ಟು ಬಳ್ಳಾರಿ ಡಿಸ್ಟ್ರಿಕ್ಟ್ (2010-2020)" ಎಂಬ ವಿಷಯದ ಮೇಲೆ ಮಹಾ ಪ್ರಬಂಧ ಮಂಡಿಸಿದ ಹಿನ್ನೆಲೆಯಲ್ಲಿ ಪಿಎಚ್‌ಡಿ ಪದವಿ ನೀಡಲಾಗಿದೆ ಎಂದು ವಿಶ್ವವಿದ್ಯಾಲಯವು ಪ್ರಕಟಣೆಯಲ್ಲಿ ತಿಳಿಸಿದೆ.

# ಭಾಗ್ಯಲಕ್ಷ್ಮೀ ಯೋಜನೆಯ ಪರಿಪಕ್ವ ಮೊತ್ತ ಪಾವತಿಗೆ ಪ್ರಸ್ತಾಪನೆ ಸಲ್ಲಿಕೆಗೆ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಂಡೂರು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ ವತಿಯಿಂದ 2007-08ನೇ ಸಾಲಿನಿಂದ ದಿನಾಂಕ 31-072008ರವರೆಗೆ ಜನಿಸಿ, ಭಾಗ್ಯಲಕ್ಷ್ಮೀ ಯೋಜನೆಯಡಿ ಬಾಂಡ್ ಪಡೆದು 18 ವರ್ಷ ಪೂರ್ಣಗೊಂಡಿರುವ ಫಲಾನುಭವಿಗಳಿಗೆ ಪರಿಪಕ್ವ ಮೊತ್ತ ಪಾವತಿಸಲು ಪ್ರಸ್ತಾಪನೆಗಳನ್ನು ಸ್ವೀಕರಿಸಲಾಗುತ್ತಿದೆ. ಅರ್ಹ ಫಲಾನುಭವಿಗಳು ತಕ್ಷಣವೇ ತಮ್ಮ ಹತ್ತಿರದ ಅಂಗನವಾಡಿ ಕೇಂದ್ರ ಅಥವಾ ಸಂಡೂರಿನ ಕೆ.ಹೆಚ್.ಬಿ. ಕಾಲೋನಿಯಲ್ಲಿರುವ ಸ್ತ್ರೀ ಶಕ್ತಿ ಭವನದ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ. ಸಲ್ಲಿಸಬೇಕಾದ ಅಗತ್ಯ ದಾಖಲೆಗಳು: ಭಾಗ್ಯಲಕ್ಷ್ಮೀ ಮೂಲ ಬಾಂಡ್ ಮತ್ತು ಮಾರ್ಗ ಬಾಂಡ್ ಜೆರಾಕ್ಸ್ ಪ್ರತಿ (ಮೂಲ ಬಾಂಡ್ ಕಳೆದುಹೋಗಿದ್ದಲ್ಲಿ ಎಫ್.ಐ.ಆರ್. ಪ್ರತಿ ಅಗತ್ಯ). ದಿನಾಂಕ/ಹೆಸರು ವ್ಯತ್ಯಾಸವಿದ್ದಲ್ಲಿ ಕೋರ್ಟ್ ಅಫಿಡವಿಟ್. ಪ್ರಸ್ತುತ ವ್ಯಾಸಂಗ ಪ್ರಮಾಣ ಪತ್ರ / ಅಂಕಪಟ್ಟಿ ಹಾಗೂ ಎಸ್.ಎಸ್.ಎಲ್.ಸಿ ಅಂಕಪಟ್ಟಿ. ಜನನ ಪ್ರಮಾಣ ಪತ್ರ. ಬಿ.ಪಿ.ಎಲ್. ಕಾರ್ಡ್ (ಕಡ್ಡಾಯ). ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಪುಸ್ತಕ ಮತ್ತು ಇತ್ತೀಚಿನ ಬ್ಯಾಂಕ್ ಸ್ಟೇಟ್‌ಮೆಂಟ್ ಜೆರಾಕ್ಸ್ ಪ್ರತಿ. ಮಗು, ತಂದೆ ಮತ್ತು ತಾಯಿಯ ಆಧಾರ್ ಕಾರ್ಡ್‌ಗಳು. ಸಂತಾನ ಹರಣ ಪ್ರಮಾಣ ಪತ್ರ (ಇಲ್ಲದಿದ್ದಲ್ಲಿ ವಂಶವೃಕ್ಷ). ತಂದೆ/ತಾಯಿ ಮರಣ ಹೊಂದಿದ್ದಲ್ಲಿ ಮರಣ ಪ್ರಮಾಣ ಪತ್ರ.

ಸೂಚನೆ: ಫಲಾನುಭವಿಯ ಆಧಾರ್ ಕಾರ್ಡ್‌ಗೆ ಲಿಂಕ್ ಆಗಿರುವ ಮೊಬೈಲ್ ಸಂಖ್ಯೆಯೊಂದಿಗೆ ಕಚೇರಿಗೆ ಖುದ್ದಾಗಿ ಹಾಜರಾಗಿ, ಒಟಿಪಿ ಯನ್ನು ಒದಗಿಸಬೇಕಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ದೂ.08395-261156 ಗೆ ಸಂಪರ್ಕಿಸಬಹುದಾಗಿದೆ ಎಂದು ಸಂಡೂರು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಸ್‌ಐಆರ್ ಪ್ರಕ್ರಿಯೆ 100% ಪೂರ್ಣಗೊಳಿಸಿದ ಬಿಎಲ್‌ಒ ಗಳಿಗೆ ತಹಸೀಲ್ದಾರರಿಂದ ಸನ್ಮಾನ



• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (SIR-Special Intensive Revision) ಅಭಿಯಾನದಲ್ಲಿ ಅತ್ಯುತ್ತಮ ಸಾಧನೆ ತೋರಿ, 100% ಕಾರ್ಯ ಪೂರ್ಣಗೊಳಿಸಿದ ತಾಲೂಕಿನ ಮತಗಟ್ಟೆ ಅಧಿಕಾರಿಗಳಿಗೆ (BLO) ಕಮಲನಗರ ತಹಸೀಲ್ದಾರ್ ಅಮಿತಕುಮಾರ್ ಕುಲಕರ್ಣಿ ಅವರು ಶಾಲು ಹೊದಿಸಿ ಸನ್ಮಾನಿಸಿ ಅಭಿನಂದಿಸಿದರು.

ತಾಲೂಕಿನ ಡಿಗ್ಗಿ ಗ್ರಾಮ ಪಂಚಾಯತ್ ವ್ಯಾಪ್ತಿಯ ರಾಂಪುರ ಗ್ರಾಮದ ಬಿಎಲ್‌ಒ ಬಾಲಿಕಾ ದತ್ತಾತ್ರೇಯ ರಾಂಪುರ ಹಾಗೂ ತೋರಣಾವಾಡಿ ಗ್ರಾಮದ ಬಿಎಲ್‌ಒ ಭಾಗ್ಯಶ್ರೀ ಪಾಟೀಲ ಅವರು ತಮ್ಮ ಮತಗಟ್ಟೆ ವ್ಯಾಪ್ತಿಯಲ್ಲಿ ನೀಡಲಾಗಿದ್ದ ಎ???ಐಆರ್ ಫಾರ್ಮ್ ವಿತರಣೆ, ಪರಿಶೀಲನೆ (Verification) ಹಾಗೂ ಆನ್‌ಲೈನ್ ಡಿಜಿಟಲೀಕರಣ ಪ್ರಕ್ರಿಯೆಯನ್ನು ಅತ್ಯಂತ ನಿಷ್ಠೆಯಿಂದ ನೂರಕ್ಕೆ ನೂರರಷ್ಟು ಯಶಸ್ವಿಯಾಗಿ ಪೂರ್ಣಗೊಳಿಸಿದ್ದಾರೆ.

ಈ ಹಿಂದೆ ಶಾಸಕರಾದ ಪ್ರಭು ಚವ್ಹಾಣ್ ಅವರಿಂದ ಸನ್ಮಾನಿತರಾಗಿದ್ದ ಬಾಲಿಕಾ ದತ್ತಾತ್ರೇಯ ಅವರು, ಇದೀಗ ತಾಲೂಕು ಆಡಳಿತ ಮಟ್ಟದಲ್ಲೂ ತಮ್ಮ ದಕ್ಷ ಸೇವೆಗಾಗಿ ಕಮಲನಗರ ತಹಸೀಲ್ದಾರ್ ಕಾರ್ಯಾಲಯದಲ್ಲಿ ತಹಸೀಲ್ದಾರರ ಕೈಯಿಂದ ಗೌರವ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ತಹಸೀಲ್ದಾರ್ ಅಮಿತಕುಮಾರ್ ಅವರು, "ಚುನಾವಣಾ ಆಯೋಗದ ನಿರ್ದೇಶನದಂತೆ ಮತದಾರರ ಪಟ್ಟಿಯನ್ನು ಪರಿಷ್ಕರಿಸುವ ಮತ್ತು ನವೀಕರಿಸುವ ಮಹತ್ವದ ಜವಾಬ್ದಾರಿಯನ್ನು ಬಿಎಲ್‌ಒಗಳು ಅತ್ಯಂತ ನಿಷ್ಠೆಯಿಂದ ನಿರ್ವಹಿಸಿದ್ದಾರೆ. ಇವರ ಈ ಸಾಧನೆ ಇತರ ಸಿಬ್ಬಂದಿಗೂ ಮಾದರಿಯಾಗಿದೆ," ಎಂದು ಶ್ಲಾಘಿಸಿದರು.

ಈ ಸಂದರ್ಭದಲ್ಲಿ ತಾಲೂಕು ಆಡಳಿತದ ಪ್ರಮುಖ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಕಾಯಕದ ಜೊತೆಗೆ ಆರೋಗ್ಯದ ಕಡೆಯೂ ಗಮನವಿರಲಿ: ಅಳವಂಡಿ ಮರುಳಾರಾಧ್ಯ ಸ್ವಾಮೀಜಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



:ಕಾಯಕದ ಜೊತೆಗೆ ಪ್ರತಿಯೊಬ್ಬರೂ ತಮ್ಮ ಆರೋಗ್ಯದ ಕಡೆಗೂ ಹೆಚ್ಚಿನ ಗಮನಹರಿಸಬೇಕು ಎಂದು ಅಳವಂಡಿ ಸಿದ್ದೇಶ್ವರ ಮಠದ ಮರುಳಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಹೇಳಿದರು. ಕೊಪ್ಪಳ ತಾಲ್ಲೂಕಿನ ಅಳವಂಡಿ ಗ್ರಾಮದ ಸಿದ್ದೇಶ್ವರ ಸಮುದಾಯ ಭವನದಲ್ಲಿ ಜಿಲ್ಲಾ ಆಯುಷ್ ಇಲಾಖೆ ಕೊಪ್ಪಳ, ಮುಂಡರಗಿಯ ಎಸ್.ಬಿ.ಎಸ್. ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ, ಹುಬ್ಬಳ್ಳಿಯ ಎಂ.ಎಂ. ಜೋಶಿ ನೇತ್ರ ವಿಜ್ಞಾನ ಸಂಸ್ಥೆ, ಗದಗದ ಅಂಬಿಕಾ ರಕ್ತನಿಧಿ ಕೇಂದ್ರ ಹಾಗೂ ಅಳವಂಡಿ ಗ್ರಾಮ ಪಂಚಾಯಿತಿ ವತಿಯಿಂದ ಬುಧವಾರ ಆಯೋಜಿಸಿದ್ದ ಬೃಹತ್ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಆಧುನಿಕ ಜೀವನಶೈಲಿ ಹಾಗೂ ಬದಲಾದ ಆಹಾರ ಪದ್ಧತಿಯಿಂದಾಗಿ ಇತ್ತೀಚಿನ ದಿನಗಳಲ್ಲಿ ಸಣ್ಣ ವಯಸ್ಸಿನಲ್ಲಿಯೇ ಅನೇಕ ದೀರ್ಘಕಾಲದ ಕಾಯಿಲೆಗಳು ಕಾಣಿಸಿಕೊಳ್ಳುತ್ತಿವೆ. ಹೀಗಾಗಿ ಮುಂಜಾಗ್ರತಾ ಕ್ರಮವಾಗಿ ಕಾಲಕಾಲಕ್ಕೆ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವುದು ಅಗತ್ಯವಾಗಿದೆ. ಆರೋಗ್ಯವೇ ನಿಜವಾದ ಸಂಪತ್ತು. ಆದ್ದರಿಂದ ಪ್ರತಿಯೊಬ್ಬರೂ ತಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದು ಹೇಳಿದರು. ಜಿಲ್ಲಾ ಆಯುಷ್ ಅಧಿಕಾರಿ ಪರ್ವತಗೌಡ ಹಿರೇಗೌಡ್ರು ಮಾತನಾಡಿ, ಎಲ್ಲಾ ಸಂಪತ್ತಿಗಿಂತ ಆರೋಗ್ಯ ಸಂಪತ್ತು ದೊಡ್ಡದು. ಗ್ರಾಮೀಣ ಭಾಗದ ಜನರಿಗೆ ಗುಣಮಟ್ಟದ ವೈದ್ಯಕೀಯ ಸೇವೆ ತಲುಪಿಸುವುದು ಹಾಗೂ ಆರೋಗ್ಯದ ಕುರಿತು ಜಾಗೃತಿ ಮೂಡಿಸುವುದು ಇಂತಹ ಶಿಬಿರಗಳ ಮುಖ್ಯ ಉದ್ದೇಶವಾಗಿದೆ. 'ಎಲ್ಲಾ ಭಾಗ್ಯಕ್ಕಿಂತ ಆರೋಗ್ಯ ಭಾಗ್ಯ ಮೇಲು' ಎಂದರು. ಮುಂಡರಗಿಯ ಎಸ್.ಬಿ.ಎಸ್. ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯದ ಕಾರ್ಯದರ್ಶಿ ಡಾ. ಸಿದ್ದಲಿಂಗಸ್ವಾಮಿ ಇನಾಮದಾರ ಮಾತನಾಡಿ, ಆಯುರ್ವೇದವು ಕೇವಲ ರೋಗ ಶಮನ ಮಾಡುವುದಷ್ಟೇ ಅಲ್ಲದೆ, ಕಾಯಿಲೆಗಳು ಬಾರದಂತೆ ತಡೆಯುವಲ್ಲಿಯೂ ಮಹತ್ವದ ಪಾತ್ರ ವಹಿಸುತ್ತದೆ. ಗ್ರಾಮೀಣ ಭಾಗದ ಪ್ರತಿಯೊಬ್ಬರಿಗೂ ತಜ್ಞ ವೈದ್ಯರ ಸೇವೆ ದೊರೆಯಬೇಕು ಎಂಬ ಉದ್ದೇಶದಿಂದ ವಿವಿಧ ಪ್ರಮುಖ ಸಂಸ್ಥೆಗಳು ಒಂದಾಗಿ ಈ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸಿವೆ. ಸಾರ್ವಜನಿಕರು ಇಂತಹ ಉಚಿತ ಆರೋಗ್ಯ ಶಿಬಿರಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು. ಶಿಬಿರದಲ್ಲಿ ಕುತ್ತಿಗೆ ನೋವು, ಬೆನ್ನು ನೋವು, ಮೊಣಕಾಲು ನೋವು, ಕೀಲು ನೋವು, ಚರ್ಮರೋಗ, ಮೈಗ್ರೇನ್ ಹಾಗೂ ತಲೆನೋವು, ಅಲರ್ಜಿ, ಅಸ್ತಮಾ, ಕಿಡ್ನಿ ಕಲ್ಲು, ಪಿತ್ತಕೋಶದ ಕಲ್ಲು, ಮಧುಮೇಹ, ರಕ್ತದೊತ್ತಡ, ಹೃದಯ ಸಂಬಂಧಿ ಸಮಸ್ಯೆಗಳು, ಮಹಿಳೆಯರ ಆರೋಗ್ಯ ಸಮಸ್ಯೆಗಳು ಸೇರಿದಂತೆ ವಿವಿಧ ಕಾಯಿಲೆಗಳ ಉಚಿತ ತಪಾಸಣೆ ನಡೆಸಲಾಯಿತು. ಕಾರ್ಯಕ್ರಮದಲ್ಲಿ ಪ್ರಾಚಾರ್ಯ ಎಸ್.ಆರ್. ಜಾಗೀರದಾರ, ಪಿಡಿಓ ಕೊಟ್ರಪ್ಪ ಅಂಗಡಿ, ಅನ್ವರ್ ಗಡಾದ, ಶ್ರೀನಿವಾಸ್, ಹನುಮಂತಪ್ಪ, ವೀರಭದ್ರಯ್ಯ, ಬುಡ್ಡ ಅಶೋಕ್, ವೈದ್ಯಾಧಿಕಾರಿಗಳಾದ ದತ್ತಾತ್ರೇಯ, ಮುತ್ತು, ಸವಿತಾ, ಶಿಲ್ಪಾ, ಅಂಬಿಕಾ, ಕವಿತಾ, ವಿಜಯಲಕ್ಷ್ಮೀ, ಹಾಲಸ್ವಾಮಿ, ಎಸ್.ವಿ. ಹಿರೇಮಠ, ಶಹನಾ, ಗಾನವಿ, ಮಧುಶ್ರೀ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಯುವಕರನ್ನು ಕೆಣಕಬಾರದು: ಶಾಸಕ



**ವಿಜಯಪುರ:** ಯುವಕರನ್ನು ಯಾರೂ ಕೆಣಕಬಾರದು, ಅವರನ್ನು ಕೆಣಕಿದವರಾರೂ ಉದ್ಧಾರವಾಗಿಲ್ಲ ಎಂದು ವಿಧಾನ ಪರಿಷತ ಶಾಸಕ ಸುನೀಲಗೌಡ ಪಾಟೀಲ ಹೇಳಿದ್ದಾರೆ.

ಈ ಕುರಿತು ಮಾಧ್ಯಮ ಪ್ರಕಟಣೆ ನೀಡಿರುವ ಅವರು, ಭಾರತ ಯುವಕರ ದೇಶ. ಯುವಕರು ದೇಶದ ಶಕ್ತಿ. ದೇಶದ ಭವಿಷ್ಯ ಯುವಕರ ಮೇಲೆ ನಿಂತಿದೆ. ಅವರು ಮನಸ್ಸು ಮಾಡಿದರೆ ಇತಿಹಾಸ ರಚಿಸಬಲ್ಲರು ಎಂದು ಅವರು ತಿಳಿಸಿದ್ದಾರೆ.

ದೇಶದಲ್ಲಿ ಪ್ರತಿವರ್ಷ 20 ಲಕ್ಷಕ್ಕೂ ಹೆಚ್ಚು ಯುವಕರು ಸ್ಪರ್ಧಾತ್ಮಕ ಪರೀಕ್ಷೆ ಬರೆಯುತ್ತಿದ್ದು, ಅದಕ್ಕಾಗಿ ಹಗಲು- ರಾತ್ರಿ ಶ್ರಮವಹಿಸಿ ತಯಾರಿ ನಡೆಸುತ್ತಾರೆ. ಆದರೆ, ಪ್ರಶ್ನೆ ಸೋರಿಕೆಯಂಥ ಘಟನೆಗಳು ವಿದ್ಯಾರ್ಥಿಗಳು ಮಾತ್ರವಲ್ಲ ಅವರ ಪೋಷಕರ ಕನಸು ಮತ್ತು ಶ್ರಮವನ್ನೂ ನುಚ್ಚುನೂರು ಮಾಡುತ್ತವೆ. ಈಗ ದೇಶಾದ್ಯಂತ ಯುವಕರು ತಮಗಾಗಿರುವ ಅನ್ಯಾಯದ ವಿರುದ್ಧ ನೋವನ್ನು ಪ್ರತಿಭಟನೆಯ ರೂಪದಲ್ಲಿ ಹೊರ ಹಾಕುತ್ತಿದ್ದಾರೆ. ಆದರೆ, ಕೇಂದ್ರ ಸರಕಾರ ಈ ಪ್ರತಿಭಟನೆಯನ್ನು ನಿರ್ವಹಿಸುತ್ತಿರುವ ರೀತಿ ಖಂಡನೀಯವಾಗಿದೆ. ದೇಶದ ಭವಿಷ್ಯ ಎಂದೇ ಪರಿಗಣಿಸಲಾಗುವ ಯುವಕರು ನಮ್ಮ ಮಕ್ಕಳಿದ್ದಂತೆ. ಇಂಥ ಕಠಿಣ ಪರಿಸ್ಥಿತಿಯಲ್ಲಿ ನಾವೆಲ್ಲರೂ ಯುವಜನತೆಯೊಂದಿಗೆ ಪಕ್ಷಾತೀತವಾಗಿ ಬೆಂಬಲವಾಗಿ ನಿಲ್ಲಬೇಕಾಗಿದೆ. ಯುವಕರ ಭಾವನೆಗಳು ಮತ್ತು ವ್ಯಕ್ತಪಡಿಸುತ್ತಿರುವ ನೋವಿಗೆ ನಾವೆಲ್ಲರೂ ದನಿಗೂಡಿಸಬೇಕಾಗಿದೆ ಎಂದು ಅವರು ತಿಳಿಸಿದ್ದಾರೆ.

## ಮೆಚ್ಚುಗೆಗೆ ಪಾತ್ರವಾದ ಸಿಪಾಯಿ ಸಿದ್ದಮ್ಮನ ಪ್ರಾಮಾಣಿಕತೆ



**ಕೆಂಭಾವಿ:** ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಸಂಚಾಲಕ ಮೋಹನರಡ್ಡಿ ಡಿಗ್ಗಾವಿ ಕೈಬೆರಳಲ್ಲಿ ಇದ್ದ 5 ಗ್ರಾಂ ಬಂಗಾರದ ಉಂಗುರ ಗುರುವಾರ ಮಧ್ಯಾಹ್ನ ಕಳೆದು ಕೆಲ ಹೊತ್ತು ಗಾಬರಿಗೆ ಕಾರಣವಾಗಿತ್ತು , ಎಲ್ಲಾ ಶಿಕ್ಷಕರು ಸೇರಿ ಎಷ್ಟೇ ಹುಡುಕಿದರೂ ಸಿಗಲಿಲ್ಲ, ಶುಕ್ರವಾರ ಬೆಳಿಗ್ಗೆ ತರಗತಿ ಕೋಣೆಯಲ್ಲಿ ಕೈಗೂಡಿಸುವಾಗ ಸುಮಾರು 80 ಸಾವಿರ ರೂಪಾಯಿ ಮೌಲ್ಯದ ಚಿನ್ನದ ಹಾಗೂ ಮುತ್ತಿನ ಉಂಗುರ ಸಿಪಾಯಿ ಸಿದ್ದಮ್ಮನ ಕೈಗೆ ಸಿಕ್ಕ ತಕ್ಷಣ ಮೋಹನರಡ್ಡಿ ಡಿಗ್ಗಾವಿಯವರಿಗೆ ನೀಡಿದ ಸಿದ್ದಮ್ಮ ಅವರ ಪ್ರಾಮಾಣಿಕತೆ ಮತ್ತು ಕರ್ತವ್ಯ ನಿಷ್ಠೆಯನ್ನು ಶ್ಲಾಘಿಸಿ ಶಾಲೆಯ ಮುಖ್ಯ ಗುರುಗಳು, ಶಿಕ್ಷಕ ವೃದ ಸೇರಿ ಶಾಲಾ ಮಕ್ಕಳ ಸಮ್ಮುಖದಲ್ಲೇ ವಿಶೇಷವಾಗಿ ಸನ್ಮಾನಿಸಿ ಅಭಿನಂದಿಸಿ ಗೌರವಿಸಲಾಯಿತು.

ಇದೇ ವೇಳೆ ಮಾತನಾಡಿದ ಸಂಸ್ಥೆಯ ಸಂಚಾಲಕ ಮೋಹನರಡ್ಡಿ ಡಿಗ್ಗಾವಿ ಸಿದ್ದಮ್ಮ ಅವರ ಪ್ರಾಮಾಣಿಕತೆ ಎಲ್ಲರಿಗೂ ಮಾದರಿಯಾಗಿದ್ದು, ಇಂತಹ ಮೌಲ್ಯಗಳು ಸಮಾಜದಲ್ಲಿ ಇನ್ನಷ್ಟು ಬೆಳೆಯಬೇಕು" ಎಂದವರು ಶಾಲಾ ಮಕ್ಕಳು ಕೂಡ ತಮ್ಮ ದೈನಂದಿನ ಬದುಕಿನಲ್ಲಿ ಸಿಗುವ ಬೆಲೆ ಬಾಳುವ ಬೆಳ್ಳಿ, ಬಂಗಾರದ, ವಸ್ತುಗಳು ಸಿಕ್ಕರೆ ಸಂಬಂಧಪಟ್ಟವರಿಗೆ ತಲುಪಿಸುವ ಮೂಲಕ ಪ್ರಾಮಾಣಿಕತೆ ಮೆರೆಯಬೇಕು ಎಂದು ಕಿವಿಮಾತು ಹೇಳಿದರು.

ಈ ಘಟನೆ ಶಾಲೆಯಲ್ಲಿ ಸಂತಸದ ವಾತಾವರಣವನ್ನು ಸೃಷ್ಟಿಸಿತು. ಸಿಪಾಯಿ ಸಿದ್ದಮ್ಮ ಅವರ ಪ್ರಾಮಾಣಿಕತೆಗೆ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ವರ್ಗದವರು ಅಪಾರ ಮೆಚ್ಚುಗೆ ವ್ಯಕ್ತಪಡಿಸಿದರು.

## ಪಿ.ಎಚ್.ಡಿ ಪದವಿ ಪಡೆದ ಡಾ. ಹತ್ತಿಮರದ ಶರಣಬಸಪ್ಪ ನಾಯಕರಿಗೆ ಸನ್ಮಾನ



**ಗಂಗಾವತಿ:** ನಗರದ ಮೂಲ ನಿವಾಸಿ ಹಾಗೂ ಹತ್ತಿಮರದ ಮನೆತನದ ಡಾ. ಹತ್ತಿಮರದ ಶರಣಬಸಪ್ಪ ನಾಯಕ ಅವರಿಗೆ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದಿಂದ ಡಾಕ್ಟರ್ ಆಫ್ ಫಿಲಾಸಫಿ ಪದವಿ ಲಭಿಸಿದ ಹಿನ್ನೆಲೆಯಲ್ಲಿ ಗಂಡುಗಲಿ ಕುಮಾರರಾಮ ಸೇನೆ ಹಾಗೂ ಅಖಿಲ ಕರ್ನಾಟಕ ಹರಿಹರ-ಹಕ್ಕ ಬುಕ್ಕ ನಾಯಕ ವೇದಿಕೆ ವತಿಯಿಂದ ಆತ್ಮೀಯವಾಗಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಕುಮಾರರಾಮನ ವಂಶಸ್ಥ ಎಚ್. ರಾಜೇಶ್ ನಾಯಕ, ಗ್ರಾಮೀಣ ಹಿನ್ನೆಲೆಯ ಪ್ರತಿಭಾವಂತ ಶರಣಬಸಪ್ಪ ಅವರು ಶಾಲಾ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಲೇ ನಿರಂತರ ಅಧ್ಯಯನ ನಡೆಸಿ "An Economic Analysis of Agro-Based Industries in Koppal District" ಎಂಬ ವಿಷಯದ ಕುರಿತು ಸಂಶೋಧನೆ ಮಾಡಿ ಪಿ.ಎಚ್.ಡಿ ಪದವಿ ಪಡೆದಿರುವುದು ಗಂಗಾವತಿ ನಗರಕ್ಕೆ ಹೆಮ್ಮೆಯ ಸಂಗತಿಯಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ನಾಗರಾಜ್ ನಾಯಕ (ಖಜಾಂಚಿ), ಚಿರಂಜೀವಿ, ಎಚ್. ರಮೇಶ್, ಎಚ್. ಯಮನೂರ, ಅರುಣಾ ರಫಿ ಹಾಗೂ ಕುಮಾರರಾಮ ಸೇನೆಯ ಪ್ರಧಾನ ಕಾರ್ಯದರ್ಶಿ ಹರನಾಯಕ ಸೇರಿದಂತೆ ಹಲವರು ಉಪಸ್ಥಿತರಿದ್ದು, ಡಾ. ಶರಣಬಸಪ್ಪ ನಾಯಕರನ್ನು ಅಭಿನಂದಿಸಿ ಶುಭ ಹಾರೈಸಿದರು.

# ಪತ್ರಕರ್ತರು ನಿಷ್ಪಕ್ಷಪಾತ ವರದಿಗಾರಿಕೆಗೆ ಆದ್ಯತೆ ನೀಡಲಿ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪತ್ರಿಕಾ ರಂಗವು ಅತ್ಯಂತ ಗೌರವಾನ್ವಿತ ಕ್ಷೇತ್ರವಾಗಿದ್ದು, ಪತ್ರಕರ್ತರು ಜನಸಾಮಾನ್ಯರ ಪ್ರತಿನಿಧಿಗಳಾಗಿ ಕಾರ್ಯನಿರ್ವಹಿಸಬೇಕು. ಸದಾ ನಿಖರ, ಸತ್ಯ ಹಾಗೂ ನಿಷ್ಪಕ್ಷಪಾತ ಮಾಹಿತಿಯನ್ನು ಸಂಗ್ರಹಿಸಿ, ಜವಾಬ್ದಾರಿಯುತವಾಗಿ ಜನರಿಗೆ ತಲುಪಿಸುವ ಅಭ್ಯಾಸವನ್ನು ರೂಢಿಸಿಕೊಳ್ಳಬೇಕು. ಇದರಿಂದ ಸಮಾಜದಲ್ಲಿ ಪಾರದರ್ಶಕತೆ, ವಿಶ್ವಾಸ ಮತ್ತು ಪ್ರಜಾಪ್ರಭುತ್ವದ ಮೌಲ್ಯಗಳು ಬಲಗೊಳ್ಳುತ್ತವೆ ಎಂದು ಹಿರಿಯ ಪತ್ರಕರ್ತ ಹಾಗೂ ಹೋರಾಟಗಾರ ವೈ. ಎನ್.ಗೌಡರ ಹೇಳಿದರು.

ತಾಲೂಕಿನ ಅಳವಂಡಿ ಗ್ರಾಮದ ಗೋಣಿ ಬಸವೇಶ್ವರ ಸಮುದಾಯ ಭವನದಲ್ಲಿ ಅಳವಂಡಿ ಹೋಬಳಿ ಪತ್ರಕರ್ತರ ವತಿಯಿಂದ ಆಯೋಜಿಸಿದ್ದ ಪತ್ರಿಕಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಶಾಸಕಾಂಗ, ಕಾರ್ಯಾಂಗ ಮತ್ತು ನ್ಯಾಯಾಂಗದ ಜೊತೆಗೆ ಪತ್ರಿಕಾ ರಂಗವೂ ಪ್ರಜಾಪ್ರಭುತ್ವದ ಪ್ರಮುಖ ಅಂಗವಾಗಿದೆ. ಪತ್ರಿಕೋದ್ಯಮವು ಸಮಾಜದ ಧ್ವನಿಯಾಗಿ ಕಾರ್ಯನಿರ್ವಹಿಸುತ್ತದೆ. ಒಬ್ಬ ಉತ್ತಮ ಪತ್ರಕರ್ತನು ಸುದ್ದಿಯನ್ನು ಹುಡುಕಿಕೊಂಡು ಹೋಗಬೇಕು. ಸುದ್ದಿ ತಾನಾಗಿಯೇ ಬರುವುದಿಲ್ಲ. ಆಗ ಮಾತ್ರ ಪತ್ರಕರ್ತನನ್ನು ಹಾಗೂ ಅವರು ಪ್ರತಿನಿಧಿಸುವ ಪತ್ರಿಕೆಯನ್ನು ಸಮಾಜ ಗುರುತಿಸುತ್ತದೆ. ಸಮಾಜದಲ್ಲಿನ



ಜ್ವಲಂತ ಸಮಸ್ಯೆಗಳನ್ನು ಬೆಳಕಿಗೆ ತಂದು, ಅವುಗಳ ಪರಿಹಾರಕ್ಕೆ ದಾರಿಮಾಡಿಕೊಡುವ ಶಕ್ತಿ ಪತ್ರಿ- ಕೆಗಿದೆ. ಆದ್ದರಿಂದ ಪತ್ರಕರ್ತರು ನಿಖರತೆ, ಸತ್ಯನಿಷ್ಠೆ ಮತ್ತು ಜವಾಬ್ದಾರಿಯುತ ವರದಿಗಾರಿಕೆಯನ್ನು ರೂಢಿಸಿಕೊಳ್ಳಬೇಕು ಎಂದರು.

ಸಿದ್ದೇಶ್ವರ ಮಠದ ಮರುಳಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಪತ್ರಕರ್ತರು ಸಮಾಜದ ಕಣ್ಣುಗಳಿದ್ದಂತೆ. ಸಮಾಜದ ಆಗುಹೋಗುಗಳನ್ನು ಜನಸಾಮಾನ್ಯರಿಗೆ ತಲುಪಿಸುವ ಮೂಲಕ ಪ್ರಜಾಪ್ರಭುತ್ವದ ನಾಲ್ಕನೇ ಅಂಗವಾಗಿ ಮಹತ್ವದ ಜವಾಬ್ದಾರಿ ನಿರ್ವಹಿಸುತ್ತಿದ್ದಾರೆ. ಸತ್ಯ, ನಿಷ್ಠೆ ಮತ್ತು ವಾಸ್ತವಾಂಶಗಳಿಗೆ ಆದ್ಯತೆ ನೀಡಿ ಸಮಾಜದ ಧ್ವನಿಯಾಗಿ ಕಾರ್ಯನಿರ್ವಹಿಸಬೇಕು ಎಂದರು.

ಬಿಜೆಪಿ ಗ್ರಾಮೀಣ ಮಂಡಲ ಅಧ್ಯಕ್ಷ ವಿರೇಶ ಸಜ್ಜನ ಮಾತನಾಡಿ, ಪತ್ರಿಕೋದ್ಯಮವು ಕೇವಲ ಸುದ್ದಿಯನ್ನು ಪ್ರಕಟಿಸುವ ಮಾಧ್ಯಮವಲ್ಲ. ಸಮಾಜದ ಸಮಸ್ಯೆಗಳನ್ನು ಬೆಳಕಿಗೆ ತಂದು ಸಂಬಂಧಿಸಿದವರ ಗಮನ ಸೆಳೆಯುವ ಹಾಗೂ ಜನರಲ್ಲಿ ಜಾಗೃತಿ ಮೂಡಿಸುವ ಶಕ್ತಿಯುತ ವೇದಿಕೆಯಾಗಿದೆ. ಗ್ರಾಮೀಣ ಭಾಗದ ಪತ್ರಕರ್ತರು ಸ್ಥಳೀಯ ಜನರ ಸಮಸ್ಯೆಗಳು, ರೈತರ ಸಂಕಷ್ಟಗಳು, ಶಿಕ್ಷಣ, ಆರೋಗ್ಯ, ಮೂಲಸೌಕರ್ಯ ಸೇರಿದಂತೆ ಅಭಿವೃದ್ಧಿಗೆ ಸಂಬಂಧಿಸಿದ ವಿಷಯಗಳನ್ನು ನಿರಂತರವಾಗಿ ವರದಿ ಮಾಡುವ ಮೂಲಕ ಸಮಾಜಮುಖಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂದರು.

ಮಾಜಿ ತಾಪಂ ಸದಸ್ಯ ಡಾ. ಸಿದ್ದಲಿಂಗಸ್ವಾಮಿ ಇನಾಮದಾರ ಮಾತನಾಡಿ, ಅಳವಂಡಿ ಹೋಬಳಿಯ ಪತ್ರಕರ್ತರು ಗ್ರಾಮೀಣ ಜನರ ಧ್ವನಿಯಾಗಿ ಕಾರ್ಯನಿರ್ವಹಿಸುತ್ತಿದ್ದು, ಸ್ಥಳೀಯ ಸಮಸ್ಯೆಗಳಿಗೆ ಪರಿಹಾರ ದೊರಕಿಸುವಲ್ಲಿ ಪತ್ರಿಕಾ ವರದಿಗಳು ಪ್ರಮುಖ ಪಾತ್ರ ವಹಿಸುತ್ತಿವೆ. ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳ ಗಮನಕ್ಕೆ ಸಾರ್ವಜನಿಕರ ಸಮಸ್ಯೆಗಳನ್ನು ತಂದು, ಅವುಗಳಿಗೆ ಸ್ಪಂದನೆ ದೊರಕುವಂತೆ ಮಾಡುವಲ್ಲಿ ಪತ್ರಕರ್ತರ ಸೇವೆ ಶ್ಲಾಘನೀಯವಾಗಿದೆ ಎಂದರು.

ವಕೀಲ ಗುರುಬಸವರಾಜ ಹಳ್ಳಿಕೇರಿ ಮಾತನಾಡಿ, ವರದಿಗಾರಿಕೆಯಲ್ಲಿ ದಕ್ಷತೆ, ನಿಷ್ಠುರತೆ ಹಾಗೂ ನಿಖರತೆಯನ್ನು ರೂಢಿಸಿಕೊಳ್ಳಬೇಕು. ಭಾಷಾ ಪ್ರಾವೀಣ್ಯತೆಯನ್ನು ಬೆಳೆಸಿಕೊಳ್ಳಬೇಕು. ಮಾಧ್ಯಮ ಕ್ಷೇತ್ರದಲ್ಲಿ ಮುದ್ರಣ ಮಾಧ್ಯಮವು ಅತ್ಯಂತ ಪ್ರಮುಖ ಪಾತ್ರ ವಹಿಸುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಪತ್ರಿಕಾ ವಿತರಕರಾದ ಶರಣಪ್ಪ ಗೊಂಡಬಾಳ, ರಮೇಶ ಓಜನಹಳ್ಳಿ ಹಾಗೂ ಎಸ್ಎಸ್ಎಲ್ಸಿ ಮತ್ತು ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಪಿಎಸ್ಐ ಪ್ರಹ್ಲಾದ ನಾಯಕ, ಭರಮಪ್ಪ ನಗರ, ಸಿದ್ದಲಿಂಗಸ್ವಾಮಿ ಇನಾಮದಾರ, ಗುರುಬಸವರಾಜ ಹಳ್ಳಿಕೇರಿ, ಅನ್ವರಹುಸೇನ ಗಡಾದ, ಚೌಡಪ್ಪ ಜಂತ್ಲಿ, ಸಂಜಯ ಚವಡಾಳ, ಕೊಟ್ರಪ್ಪ ಅಂಗಡಿ, ನೀಲಪ್ಪ ಕರಿಗಾರ, ತೋಟಪ್ಪ ಶಿಂತ್ರ, ಹೊನ್ನಪ್ಪಗೌಡ ಪಾಟೀಲ, ನಾಗರಾಜ ಹಾವಿನಾಳ, ನವೀನ ಇನಾಮದಾರ, ರೂಪಾ ನಾಯ್ದು, ಶರಣಬಸನಗೌಡ ಪಾಟೀಲ, ಹನುಮಂತಪ್ಪ ಕುರಿ, ರಮೇಶ ಬುಡ್ಡನಗೌಡ್ರ, ನೀಲಪ್ಪ ಹಕ್ಕಂಡಿ, ಪತ್ರಕರ್ತರಾದ ಸುರೇಶ ಸಂಗರಡ್ಡಿ, ಜುನಸಾಬ ವಡ್ಡಟ್ಟಿ, ಮಲ್ಲಿಕಾರ್ಜುನ ಪಾಟೀಲ, ಬಿ.ಎನ್. ಹೊರಪೇಟಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಜಿಲ್ಲಾ ಆಸ್ಪತ್ರೆಯಲ್ಲಿ ವಿಶ್ವ ಮೆದುಳು ದಿನಾಚರಣೆ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಛೇರಿ, ಜಿಲ್ಲಾ ಕುಷ್ಠರೋಗ ನಿಯಂತ್ರಣಾಧಿಕಾರಿಗಳ ಕಾರ್ಯಾಲಯ ಹಾಗೂ ಜಿಲ್ಲಾ ಬೋಧಕ ಆಸ್ಪತ್ರೆ ಇವರ ಸಂಯುಕ್ತ ಆಶ್ರಯದಲ್ಲಿ ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ ಕಾರ್ಯಕ್ರಮದ ಅಂಗವಾಗಿ ಮೆದುಳಿನ ಆರೋಗ್ಯದ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಜುಲೈ 22 ರಂದು ಜಿಲ್ಲಾ ಆಸ್ಪತ್ರೆಯಲ್ಲಿ ವಿಶ್ವ ಮೆದುಳು ದಿನಾಚರಣೆ ಯನ್ನು "ಮೆದುಳು ಆರೋಗ್ಯ: ಎಲ್ಲರಿಗೂ ಲಭ್ಯವಾಗಲಿ" ಎಂಬ ಘೋಷವಾಕ್ಯದೊಂದಿಗೆ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಕೊಪ್ಪಳ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಸಹ ಪ್ರಾಧ್ಯಾಪಕರಾದ ಡಾ. ಮಂಜುನಾಥ ಅವರು ಮಾತನಾಡಿ, ಮೆದುಳಿನ ಆರೋಗ್ಯ ಹಾಗೂ ನರವೈಜ್ಞಾನಿಕ ಕಾಯಿಲೆಗಳ ಕುರಿತು ಉಪಯುಕ್ತ ಮಾಹಿತಿಯನ್ನು ನೀಡಿದರು. ಉತ್ತಮ ಮೆದುಳಿನ ಆರೋಗ್ಯವನ್ನು ಕಾಪಾಡಿಕೊಳ್ಳುವ ಮಹತ್ವ, ನರವೈಜ್ಞಾನಿಕ ಕಾಯಿಲೆಗಳ ಆರಂಭಿಕ ಲಕ್ಷಣಗಳನ್ನು ಗುರುತಿಸುವುದು ಹಾಗೂ ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳುವುದರಿಂದ



ಮೆದುಳಿಗೆ ಸಂಬಂಧಿಸಿದ ಕಾಯಿಲೆಗಳ ಅಪಾಯವನ್ನು ಹೇಗೆ ಕಡಿಮೆ ಮಾಡಬಹುದು ಎಂಬುದರ ಕುರಿತು ವಿವರವಾಗಿ ತಿಳಿಸಿದರು ಹಾಗೂ ತಲೆನೋವು, ಅಪಸ್ಮಾರ, ಮರೆವಿನ ಕಾಯಿಲೆ ಹಾಗೂ ಪಾರ್ಶ್ವವಾಯು ಎಂಬ ನಾಲ್ಕು ಪ್ರಮುಖ ನರವೈಜ್ಞಾನಿಕ ಕಾಯಿಲೆಗಳ ಬಗ್ಗೆ ಮಾಹಿತಿ ನೀಡಿದರು. ನರರೋಗಗಳಿಗೆ ಸಂಬಂಧಿಸಿದ ಖಾಯಿಲೆಗಳಿಗೆ ಜಿಲ್ಲಾ ಆಸ್ಪತ್ರೆಯಿಂದ ಚಿಕಿತ್ಸೆ ಲಭ್ಯವಾಗುವ ವ್ಯವಸ್ಥೆಯನ್ನು ಕಭೀ ಕಾರ್ಯಕ್ರಮದ ಮೂಲಕ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಕಭೀ ಕಾರ್ಯಕ್ರಮದ ಫಿಸಿಯೋಥೆರಪಿಸ್ಟ್ ಆದ ಡಾ. ಚೈತ್ರಾ ಸರೋದೆ ಅವರು ಕಭೀ ಕಾರ್ಯಕ್ರಮದಲ್ಲಿ ನರವೈಜ್ಞಾನಿಕ ಕಾಯಿಲೆಗಳಾದ ತಲೆನೋವು, ಪಾರ್ಶ್ವವಾಯು, ಅಪಸ್ಮಾರ ಹಾಗೂ ಡಿಮಾನ್ಷಿಯ ಅಂತಹ ಕಾಯಿಲೆಗಳಿಗೆ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ನೀಡಲಾಗುತ್ತದೆ. ಹಾಗೂ ನರವೈಜ್ಞಾನಿಕ ಕಾಯಿಲೆ ಇರುವಂತಹ ವ್ಯಕ್ತಿಗೆ ಬೆಂಗಳೂರಿನ ನಿಮ್ಹಾನ್ಸ್ ಇಂದ ಟೆಲಿ ನ್ಯೂರೋಲಾಜಿ ಎಂಬ ಸೇವೆಯನ್ನು ನೀಡಲಾಗುತ್ತದೆ ಅದರ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದು ತಿಳಿಸಿದರು ಹಾಗೂ ಫಿಸಿಯೋಥೆರಪಿ ಸೇವೆಯು ರೋಗಿಗಳ ಪುನರ್ವಸತಿಯಲ್ಲಿ ಅವುಗಳ ಮಹತ್ವವನ್ನು ವಿವರಿಸಿದರು.

ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮ ಕ್ಲಿನಿಕಲ್ ಸೈಕಾಲಜಿಸ್ಟ್ ಶಾಂತಾ ಅವರು ತಂಬಾಕು ಸೇವನೆಯಿಂದ ದೈಹಿಕ ಹಾಗೂ ಮಾನಸಿಕ ಆರೋಗ್ಯದ ಮೇಲೆ ಉಂಟಾಗುವ ಹಾನಿಕಾರಕ ಪರಿಣಾಮಗಳ ಕುರಿತು ಮಾಹಿತಿ ನೀಡಿದರು. ಅವರು ಧೂಮಪಾನ ಹಾಗೂ ಧೂಮರಹಿತ ತಂಬಾಕು ಉತ್ಪನ್ನಗಳ ಬಳಕೆಯಿಂದ ಉಂಟಾಗುವ ಅಪಾಯಗಳನ್ನು ವಿವರಿಸಿ, ತಂಬಾಕು ಸೇವನೆಯನ್ನು ತ್ಯಜಿಸುವುದರಿಂದ ದೊರೆಯುವ ಆರೋಗ್ಯಕರ ಪ್ರಯೋಜನಗಳ ಬಗ್ಗೆ ತಿಳಿಸಿದರು.

ಎನ್.ಸಿ.ಡಿ ಘಟಕದ ಆಪ್ತಸಮಾಲೋಚಕರಾದ ಶಿವಪುತ್ರಪ್ಪ ಮಾತನಾಡಿ ದಿನನಿತ್ಯದ ಚಟುವಟಿಕೆಯಲ್ಲಿ ಮೆದುಳನ್ನು ಯಾವ ರೀತಿ ಕಾಪಾಡಿಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕೊಪ್ಪಳ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ವೈದ್ಯರಾದ ಡಾ. ಸಾಗರ್ ಹಾಗೂ ಡಾ. ರಾಮ್, ಡಾ. ಶರಣಪ್ಪ, ದಂತ ವಿಭಾಗದ ಡಾ. ಮಂಜುಳಾ, ಎನ್‌ಸಿಡಿ ಹಾಗೂ ಆರ್‌ಕೆಎಸ್‌ಕೆ ಕಾರ್ಯಕ್ರಮಗಳ ಸಿಬ್ಬಂದಿಗಳು ಹಾಗೂ ಕಭೀ ಕಾರ್ಯಕ್ರಮದ ತಂಡದ ಎಲ್ಲಾ ಸದಸ್ಯರು ಭಾಗವಹಿಸಿದ್ದರು. ವಿಶ್ವ ಮೆದುಳು ದಿನಾಚರಣೆಯನ್ನು ಯಶಸ್ವಿಯಾಗಿ ನಡೆಸಲು ಸಹಕರಿಸಿದ ಎಲ್ಲಾ ಗಣ್ಯರು, ಸಿಬ್ಬಂದಿ ಹಾಗೂ ಭಾಗವಹಿಸಿದ ಎಲ್ಲರಿಗೂ ಧನ್ಯವಾದಗಳನ್ನು ತಿಳಿಸಿದರು.

# ಮಕ್ಕಳೊಂದಿಗೆ ಊಟ ಮಾಡಿ, ಆಹಾರದ ಗುಣಮಟ್ಟ ಪರಿಶೀಲನೆ

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

ಕಾರಜೋಳದಲ್ಲಿರುವ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗೆ ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ಭೇಟಿ ನೀಡಿ, ಶಾಲೆಯ ಶೈಕ್ಷಣಿಕ ಚಟುವಟಿಕೆಗಳು ಹಾಗೂ ವಸತಿ ವ್ಯವಸ್ಥೆ ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಶಾಲೆಯ ವಿದ್ಯಾರ್ಥಿಗಳೊಂದಿಗೆ ಆತ್ಮೀಯವಾಗಿ ಸಂವಾದ ನಡೆಸಿದ ಜಿಲ್ಲಾಧಿಕಾರಿಗಳು, ಮಕ್ಕಳೊಂದಿಗೆ ಊಟ ಮಾಡಿ ಆಹಾರದ ಗುಣಮಟ್ಟ ಪರಿಶೀಲಿಸಿದರು. ಬಳಿಕ ಮಾತನಾಡಿದ ಜಿಲ್ಲಾಧಿಕಾರಿಗಳು, ವಸತಿ ಶಾಲೆಯಲ್ಲಿರುವ ವಿದ್ಯಾರ್ಥಿಗಳಿಗೆ ನಿತ್ಯ ಗುಣಮಟ್ಟದ ಶಿಕ್ಷಣ, ಪೌಷ್ಟಿಕ ಆಹಾರ ಹಾಗೂ ಉತ್ತಮ ಸೌಲಭ್ಯ ಒದಗಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜೊತೆಗೆ ವಸತಿ ಶಾಲೆಯಲ್ಲಿರುವ ತಂಗಿರುವ ವಿದ್ಯಾರ್ಥಿಗಳಿಗೆ ಮೆನ್ಯೂವಿನಂತೆ ಉಪಹಾರ



ಹಾಗೂ ಊಟದ ವ್ಯವಸ್ಥೆಗೆ ನಿಗಾ ವಹಿಸಬೇಕು ಎಂದ ಅವರು, ಊಟ ಹಾಗೂ ಉಪಹಾರದ ವ್ಯವಸ್ಥೆಯಲ್ಲಿ ನಿಲಯದ ನಿಲಯ ಪಾಲಕರು, ಪ್ರಾಚಾರ್ಯರು ಹಾಗೂ ಶಿಕ್ಷಕರು ವಿಶೇಷ ಮುತುವರ್ಜಿ ವಹಿಸಬೇಕು. ಶುಚಿತ್ವ ಮತ್ತು ಸ್ವಚ್ಚತೆಗೆ ಆದ್ಯತೆ ನೀಡಬೇಕು. ಮಕ್ಕಳಲ್ಲಿ ಓದುವ ಹವ್ಯಾಸ ರೂಢಿಸುವ ನಿಟ್ಟಿನಲ್ಲಿ ವಿವಿಧ ಬೋಧನಾ ಉಪಕ್ರಮಗಳನ್ನು ಅನ್ವಯಿಸಬೇಕು. ಇಲ್ಲಿ ಇರುವ ಮಕ್ಕಳ ಆರೋಗ್ಯ ಅವರು ಎದುರಿಸುತ್ತಿರುವ ಚಿಕ್ಕ ಚಿಕ್ಕ ವಿಷಯಗಳನ್ನು ಕೇಳಿ ತಿಳಿದುಕೊಂಡು ಪರಿಹರಿಸಿ, ಮಕ್ಕಳ ಸ್ನೇಹಿಯಾಗಿ, ಅವರು ಇಲ್ಲಿ ವಿದ್ಯಾರ್ಜನೆ ಮಾಡಲು ಪ್ರೋತ್ಸಾಹ ನೀಡಬೇಕು ಮಕ್ಕಳ ಆಸಕ್ತಿ ಕ್ಷೇತ್ರ ಗುರುತಿಸಿ ಅವರಿಗೆ ಮೋಟಿವೇಟ್ ಮಾಡಬೇಕು. ಇದು ಶಿಕ್ಷಕ ರೂಢಿಸಿಕೊಳ್ಳಬೇಕಾದ ಕೌಶಲ್ಯವೂ ಆಗಿದೆ ಎಂದು ಪ್ರಾಚಾರ್ಯರು ಹಾಗೂ ಸಿಬ್ಬಂದಿಗೆ ಜಿಲ್ಲಾಧಿಕಾರಿ ಸೂಚಿಸಿದರು.

ಬಳಿಕ ಮಕ್ಕಳ ಸ್ನಾನ ಕೋಣೆ ಹಾಗೂ ಶೌಚಾಲಯ ಸೌಲಭ್ಯಗಳ ಲಭ್ಯತೆ ಬಗ್ಗೆ ಮಾಹಿತಿ ಪಡೆದುಕೊಂಡರು. ಮಕ್ಕಳಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ನೋಡಿಕೊಳ್ಳಬೇಕು ಎಂದು ಸಲಹೆ ಮಾಡಿದರು. ವಿದ್ಯಾರ್ಥಿಗಳು ವಸತಿ ಶಾಲೆಯಲ್ಲಿ ಲಭ್ಯವಿರುವ ಸಕಲ ಸೌಲಭ್ಯಗಳನ್ನು ಪಡೆದು- ಕೊಂಡು, ಚೆನ್ನಾಗಿ ಅಭ್ಯಾಸ ಮಾಡಿ, ಪರೀಕ್ಷೆಯಲ್ಲಿ ಹೆಚ್ಚು ಅಂಕ ಗಳಿಸುವ ಮೂಲಕ ಕಲಿತ ಶಾಲೆ, ಶಿಕ್ಷಕರಿಗೆ ಹಾಗೂ ನಿಮ್ಮ ತಂದೆ-ತಾಯಿಗಳ ಕೀರ್ತಿ ಹೆಚ್ಚಿಸಬೇಕು ಎಂದು ಕಿವಿಮಾತು ಹೇಳಿದರು.

ಬಳಿಕ ಅಡುಗೆಯವರನ್ನುದ್ದೇಶಿಸಿ ಮಾತನಾಡಿದ ಜಿಲ್ಲಾಧಿಕಾರಿಗಳು, ಮಕ್ಕಳಿಗೆ ಆಹಾರ ಸಿದ್ಧಪಡಿಸುವ ಮುನ್ನ ಅಡುಗೆ ಸಿಬ್ಬಂದಿ ಶುಚಿತ್ವಕ್ಕೆ ಮೊದಲಾದ್ಯತೆ ನೀಡಬೇಕು ಎಂದರು. ಈ ಸಂದರ್ಭದಲ್ಲಿ ಶಾಲೆಯ ಪ್ರಾಚಾರ್ಯರು, ನಿಲಯ ಪಾಲಕರು, ಶಿಕ್ಷಕರು ಹಾಗೂ ಸಿಬ್ಬಂದಿ ಪಾಲ್ಗೊಂಡಿದ್ದರು.

# ದೆಹಲಿ ಪೊಲೀಸರ ಬಲಪ್ರಯೋಗ ಖಂಡನೀಯ

• ಮಲ್ಲಮ್ಮ ನುಡಿ ವಾರ್ತೆ ವಿಜಯನಗರ

ನೀಟ್ ಪರೀಕ್ಷಾ ವ್ಯವಸ್ಥೆಯಿಂದ ವಿದ್ಯಾರ್ಥಿಗಳಿಗೆ ಉಂಟಾಗಿರುವ ಅನ್ಯಾಯಕ್ಕೆ ನ್ಯಾಯ ಒದಗಿಸುವಂತೆ ಕೇಂದ್ರ ಶಿಕ್ಷಣ ಸಚಿವರ ರಾಜೀನಾಮೆಗೆ ಆಗ್ರಹಿಸಿ ಜುಲೈ 20, 2026ರಂದು ದೇಶದ ವಿವಿಧ ವಿದ್ಯಾರ್ಥಿ ಮತ್ತು ಯುವಜನ ಸಂಘಟನೆಗಳು ನೀಡಿದ್ದ "ಸಂಸತ್ ಚಲೋ" ಕರೆಯ ಸಂದರ್ಭದಲ್ಲಿ ಪ್ರತಿಭಟನಾನಿರತ ವಿದ್ಯಾರ್ಥಿಗಳು ಮತ್ತು ಯುವಜನರ ಮೇಲೆ ದೆಹಲಿ ಪೊಲೀಸರು ನಡೆಸಿದ ಬಲಪ್ರಯೋಗ ಖಂಡನೀಯ ಎಂದು ಸಿಪಿಐ ಜಿಲ್ಲಾ ಮುಖಂಡ ಹಲಗಿ ಸುರೇಶ್ ಹೇಳಿದರು

ಪಟ್ಟಣದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಪ್ರತಿಭಟನೆನ್ನು ಉದ್ದೇಶಿಸಿ ಮಾತನಾಡಿರು ಮಂತರ್‌ನಲ್ಲಿ ನಡೆದ ಹೋರಾಟದಲ್ಲಿ ಎಐಎಸ್ಎಫ್ ಹಾಗೂ ವಿವಿಧ ಎಡಪಂಥೀಯ ವಿದ್ಯಾರ್ಥಿ-ಯುವಜನ ಸಂಘಟನೆಗಳು ಸಕ್ರಿಯವಾಗಿ ಪಾಲ್ಗೊಂಡಿದ್ದವು. ಎಐಎಸ್ಎಫ್ ವತಿಯಿಂದ ಉಚಿತ ಗ್ರಂಥಾಲಯದ ಮೂಲಕ ವಿದ್ಯಾರ್ಥಿಗಳಲ್ಲಿ ವೈಚಾರಿಕ ಜಾಗೃತಿ ಮೂಡಿಸುವ ಕಾರ್ಯವೂ ನಡೆಯಿತು. ಅಲ್ಲದೆ, ಪಂಜಾಬಿನ ಭಗತ್ ಸಿಂಗ್ ಜನ್ಮಭೂಮಿಯಿಂದ ಪವಿತ್ರ ಮಣ್ಣನ್ನು ಜಂತರ್ ಮಂತರ್‌ಗೆ ತಂದು ಹೋರಾಟಕ್ಕೆ ಕ್ರಾಂತಿಕಾರಿ ಸಂದೇಶ ನೀಡಲಾಯಿತು. ವಿದ್ಯಾರ್ಥಿಗಳು ಉಪವಾಸ ಸತ್ಯಾಗ್ರಹ ಸೇರಿದಂತೆ ವಿವಿಧ ಹೋರಾಟಗಳಲ್ಲಿ ಭಾಗವಹಿಸಿದ್ದರು.

ಜೆಪಿ ನೇತೃತ್ವದಲ್ಲಿ ಸೋನಂ ವಾಂಗ್ಚುಕ್




ಉಪವಾಸ ಸತ್ಯಾಗ್ರಹ ನಡೆಸುತ್ತಿದ್ದ ವೇಳೆ ಅವರನ್ನು ಬಲವಂತವಾಗಿ ಆಸ್ಪತ್ರೆಗೆ ದಾಖಲಿಸಿದ ಘಟನೆ ವಿದ್ಯಾರ್ಥಿ-ಯುವಜನರಲ್ಲಿ ಮತ್ತಷ್ಟು ಆಕ್ರೋಶಕ್ಕೆ ಕಾರಣವಾಯಿತು. ಜುಲೈ 19ರಂದು ಸಾವಿರಾರು ವಿದ್ಯಾರ್ಥಿಗಳು ಜಂತರ್ ಮಂತರ್‌ಗೆ ಆಗಮಿಸಿದ್ದರೆ, ಜುಲೈ 20ರಂದು ನಡೆದ "ಸಂಸತ್ ಚಲೋ" ಕಾರ್ಯಕ್ರಮದಲ್ಲಿ ಲಕ್ಷಾಂತರ ಯುವಜನರು ಪಾಲ್ಗೊಂಡಿದ್ದರು. ಶಾಂತಿಯುತವಾಗಿ ಪ್ರತಿಭಟನೆ ನಡೆಸುತ್ತಿದ್ದ ವಿದ್ಯಾರ್ಥಿಗಳಿಗೆ ಜಂತರ್ ಮಂತರ್ ಪ್ರವೇಶಿಸಲು ಅವಕಾಶ ನೀಡದೆ, ಅವರ ಮೇಲೆ ಪೊಲೀಸರು ಬಲಪ್ರಯೋಗ ನಡೆಸಿರುವುದು ಪ್ರಜಾಪ್ರಭುತ್ವ ವಿರೋಧಿ ಕ್ರಮವಾಗಿದೆ ಎಂದು ಅವರು ಆರೋಪಿಸಿದರು.

ವಿದ್ಯಾರ್ಥಿಗಳ ನ್ಯಾಯಸಮ್ಮತ ಬೇಡಿಕೆಗಳನ್ನು ಈಡೇರಿಸುವ ಬದಲು ಚಳುವಳಿಯನ್ನು ಹತ್ತಿಕ್ಕಲು ಕೇಂದ್ರ ಸರ್ಕಾರ ಸರ್ವಾಧಿಕಾರಿ ಧೋರಣೆ ಅನುಸರಿಸುತ್ತಿದೆ. ವಿದ್ಯಾರ್ಥಿ-ಯುವಜನರ ಮೇಲಿನ ಪೊಲೀಸ್ ದಾಳಿಯನ್ನು ಖಂಡಿಸಿ, ವಿದ್ಯಾರ್ಥಿಗಳ ನೈಜ ಬೇಡಿಕೆಗಳನ್ನು ಈಡೇರಿಸಲು ಹಾಗೂ ಕೇಂದ್ರ ಶಿಕ್ಷಣ ಸಚಿವರು ಮತ್ತು ಗೃಹ ಸಚಿವರ ರಾಜೀನಾಮೆಗೆ ಆಗ್ರಹಿಸಿ ಜುಲೈ 23ರಂದು ರಾಜ್ಯದ ಎಲ್ಲಾ ಜಿಲ್ಲೆ ಹಾಗೂ ತಾಲೂಕು ಕೇಂದ್ರಗಳಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಿಪಿಐ ಕಾರ್ಯದರ್ಶಿ ಬಾವಾಜಿ ಜಂಗ್ಲಿ ಸಾಬ್, ಎಐಕೆಎಸ್ ಅಧ್ಯಕ್ಷ ಡಿ. ಮುಕುಂದಗೌಡ, ಎಐಎಸ್ಎಫ್ ಸಂಚಾಲಕ ಪಿ.ಎಂ. ತೋಟಯ್ಯ, ಸಿದ್ದೇಶ್, ಪ್ರಜ್ವಲ್, ಪಕ್ಕಿರೇಶ್, ಅಂಜಿನಪ್ಪ ದಾಸರ್, ಮಕರಬ್ಬಿ, ಮುತ್ತು, ಕೆ.ಟಿ. ಪೀರಾವಲಿ, ಮೆಹಬೂಬ್ ದೊಡ್ಡಮನೆ, ಕುಮಾರ, ಕೆ. ಭರತ್, ಫೀರಸಾಬ್ ಸೇರಿದಂತೆ ಇತರರು ಇದ್ದರು.

# ಸಾರ್ವಜನಿಕರಿಗೆ ಶೀಘ್ರವಾಗಿ ನಮೂನೆ ಸಲ್ಲಿಸುವಂತೆ ಮನವಿ



**ಕಲಬುರಗಿ:** ದರ್ಗಾ ಹಜರತ್ ಖ್ವಾಜಾ ಬಂದೇನವಾಜ್ (ರ.ಹ.) ಅವರ ಸಜ್ಜಾದಾ ನಶೀನ್ ಹಾಗೂ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಅಧ್ಯಕ್ಷರಾದ ಡಾ. ಹಫೀಜ್ ಸಯ್ಯದ್ ಮೊಹಮ್ಮದ್ ಅಲಿ ಅಲ್ ಹುಸ್ಸೈನಿ ಅವರು ನಡೆಯುತ್ತಿರುವ ವಿಶೇಷ ತೀವ್ರ ಪರಿಷ್ಕರಣೆ (ಖಠಿಜ-ಭಿಚಿಟ ಖಟಣಜಟಿಜ ಖಜಝುಠಟಿ – ಖಖಖ) ಕಾರ್ಯಕ್ರಮದ ಅಂಗವಾಗಿ ತಮ್ಮ ಎಣಿಕೆ ನಮೂನೆಯನ್ನು ಯಶಸ್ವಿಯಾಗಿ ಭರ್ತಿ ಮಾಡಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಬಿಎಲ್‌ಒ (ಪಿ–151) ಶ್ರೀ ಅಫ್ಜಲ್ ರಶೀದ್, ನೋಡಲ್ ಅಧಿಕಾರಿ ಶ್ರೀ ಶರಣಕುಮಾರ ತೆಂಗ್ಲಿ ಹಾಗೂ ಬಿಎಲ್‌ಒ ಮೇಲ್ವಿಚಾರಕಿ ಶ್ರೀಮತಿ ಅಶ್ವಿನಿ ಕುಲಕರ್ಣಿ ಅವರು ನಮೂನೆಯನ್ನು ಪರಿಶೀಲಿಸಿ ಸಲ್ಲಿಕೆ ಪ್ರಕ್ರಿಯೆ ಪೂರ್ಣಗೊಳಿಸಿದರು. ಕಲಬುರಗಿ ಮಹಾನಗರ ಪಾಲಿಕೆಯ ಸದಸ್ಯ ಜನಾಬ್ ಖುಸ್ರೋ ಜಗೀರ್‌ದಾರ್ ಅವರು ಸಹ ಉಪಸ್ಥಿತರಿದ್ದರು.

ಈ ಕುರಿತು ಮಾತನಾಡಿದ ಡಾ. ಹಫೀಜ್ ಸಯ್ಯದ್ ಮೊಹಮ್ಮದ್ ಅಲಿ ಅಲ್ ಹುಸ್ಸೈನಿ ಅವರು, ಕಲಬುರಗಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳ ನಾಗರಿಕರು ತಮ್ಮ ಎಸ್‌ಐಆರ್ ಎಣಿಕೆ ನಮೂನೆಗಳನ್ನು ಶೀಘ್ರವಾಗಿ ಭರ್ತಿ ಮಾಡಿ ಸಲ್ಲಿಸುವಂತೆ ಮನವಿ ಮಾಡಿದರು. ಪ್ರಕ್ರಿಯೆ ಪೂರ್ಣಗೊಳ್ಳಲು ಇನ್ನು ಕೆಲವೇ ದಿನಗಳು ಬಾಕಿ ಇರುವುದರಿಂದ ಕೊನೆಯ ಕ್ಷಣದವರೆಗೆ ಕಾಯದೇ ಅಗತ್ಯ ದಾಖಲೆಗಳೊಂದಿಗೆ ನಮೂನೆ ಸಲ್ಲಿಸಬೇಕು ಎಂದು ಅವರು ತಿಳಿಸಿದರು.

ಕೊನೆಯ ದಿನಗಳಲ್ಲಿ ಹೆಚ್ಚಿನ ಜನರು ಆಗಮಿಸುವ ಸಾಧ್ಯತೆ ಇರುವುದರಿಂದ ಅನಗತ್ಯ ತೊಂದರೆಗಳನ್ನು ತಪ್ಪಿಸಲು ಮುಂಚಿತವಾಗಿಯೇ ನಮೂನೆ ಸಲ್ಲಿಸುವಂತೆ ಅವರು ಸಲಹೆ ನೀಡಿದರು. ಅಲ್ಲದೆ, ಎಲ್ಲಾ ಅರ್ಹ ಮತದಾರರು ಬೂತ್ ಮಟ್ಟದ ಅಧಿಕಾರಿಗಳೊಂದಿಗೆ ಸಹಕರಿಸಿ ತಮ್ಮ ವಿವರಗಳನ್ನು ಪರಿಶೀಲಿಸಿ ನವೀಕರಿಸಿಕೊಳ್ಳುವಂತೆ ಕರೆ ನೀಡಿದರು.

# ಸೂರಜ್ ಫೌಂಡೇಶನ್ ವತಿಯಿಂದ ನೋಟ್ ಬುಕ್ ವಿತರಣೆ



**ಪೀಣ್ಯ, ದಾಸರಹಳ್ಳಿ:** ವಿಧಾನಸಭಾ ಕ್ಷೇತ್ರದ ಗ್ರಹಲಕ್ಷ್ಮೀ ಲೇಔಟ್ "ಸರ್ಕಾರಿ ಮಾದರಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಅಗತ್ಯವಾದ ಶೈಕ್ಷಣಿಕ ಸಾಮಗ್ರಿಗಳನ್ನು ಒದಗಿಸುವುದು ಸಮಾಜದ ಜವಾಬ್ದಾರಿಯಾಗಿದೆ. ಇಂತಹ ಸೇವಾ ಕಾರ್ಯಗಳು ಮಕ್ಕಳಲ್ಲಿ ಶಿಕ್ಷಣದ ಬಗ್ಗೆ ಮತ್ತಷ್ಟು ಆಸಕ್ತಿ ಮೂಡಿಸಲು ಸಹಕಾರಿಯಾಗಲಿವೆ. ಶಿಕ್ಷಣದ ಮೂಲಕವೇ ಉತ್ತಮ ಸಮಾಜ ನಿರ್ಮಾಣ ಸಾಧ್ಯ. ಸರ್ಕಾರಿ ಶಾಲಾ ಮಕ್ಕಳ ಪರಿಸ್ಥಿತಿ ನೋಡಿ ಅವರ ಕಷ್ಟ ನೋಡಿ ಅವರ ನೆರವಿಗಾಗಿ ಹುಟ್ಟಿದ ಸಂಸ್ಥೆಯೇ ಸೂರಜ್ ಫೌಂಡೇಶನ್," ಎಂದು ಶಾಸಕ ಎಸ್ ಮುನಿರಾಜು ಹೇಳಿದರು.

ನೆಲಗದರನಹಳ್ಳಿಯ ಗೃಹಲಕ್ಷ್ಮಿ ಬಡಾವಣೆಯ ಸರ್ಕಾರಿ ಮಾದರಿ ಪ್ರಾಥಮಿಕ ಪಾಠಶಾಲೆಯಲ್ಲಿ ಸೂರಜ್ ಫೌಂಡೇಶನ್ ವತಿಯಿಂದ ಹಮ್ಮಿಕೊಂಡಿದ್ದ ಸರ್ಕಾರಿ ಶಾಲಾ ಮಕ್ಕಳಿಗೆ ಉಚಿತ ನೋಟ್‌ಬುಕ್ ವಿತರಣೆ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟನೆ ಮಾಡಿ 1500 ಶಾಲಾ ಮಕ್ಕಳಿಗೆ ನೋಟ್ ಬುಕ್ ವಿತರಣೆ ಮಾಡಿ ಅವರು ಮಾತನಾಡಿದರು. ಸೂರಜ್ ಫೌಂಡೇಶನ್‌ನ ಸಂಸ್ಥಾಪಕ ಅಧ್ಯಕ್ಷೆ ಶ್ರೀಮತಿ ಸುಜಾತ ಮುನಿರಾಜು ಅವರು ಮಾತನಾಡಿ, "ನಮ್ಮ ಶಾಸಕರಿಗೆ ಸರ್ಕಾರಿ ಶಾಲಾ ಮಕ್ಕಳೆಂದರೆ ವಿಶೇಷವಾದ ಪ್ರೀತಿ. ಸರ್ಕಾರಿ ಶಾಲಾ ಮಕ್ಕಳಿಗೆ ನೆರವಾಗುವ ಉದ್ದೇಶದಿಂದ ಸೂರಜ್ ಫೌಂಡೇಶನ್ ನಿರಂತರವಾಗಿ ಸಾಮಾಜಿಕ ಹಾಗೂ ಶೈಕ್ಷಣಿಕ ಸೇವಾ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದೆ. ಮುಂದಿನ ದಿನಗಳಲ್ಲಿಯೂ ವಿದ್ಯಾರ್ಥಿಗಳ ಅಭಿವೃದ್ಧಿಗೆ ಪೂರಕವಾಗುವ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು," ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಾಜಿ ನಗರ ಸಭಾ ಸದಸ್ಯರು ಹಾಗೂ ಚೆನ್ನಗಿರಿಯಪ್ಪ, ಮಹಿಳಾ ಮುಖಂಡ ಕೌಶಲ್ಯ, ಬಿಜೆಪಿ ಪ್ರಭಾವಿ ಮುಖಂಡ ರಮ್ಯಾ ಭೈರೇಗೌಡ, ಮಾಜಿ ಎಸ್‌ಡಿಎಂಸಿ ಸದಸ್ಯ ನಾಗರಾಜ್, ವಾರ್ಡ್ ಬಿಜೆಪಿ ಅಧ್ಯಕ್ಷ ಶಿವಪ್ರಕಾಶ್, ಶ್ರೀಧರ್, ಅಪ್ಪಿ, ಅಭಿ, ಬಿಜು, ಹನುಮಂತರಾಜು, ಗಂಗನರಸಯ್ಯ, ರಾಜೇಶ್ವರಿ, ನಿ ನಾಗಮಣಿ ಎಸ್, ಹಿರಿಯ ಶಿಕ್ಷಕ ಕೃಷ್ಣಮೂರ್ತಿ, ಪ್ರಾಥಮಿಕ ಶಿಕ್ಷಕರ ಸಂಘದ ಅಧ್ಯಕ್ಷ ಕೆ ಎಸ್ ಕೃಷ್ಣಮೂರ್ತಿ, ಶಿಕ್ಷಕರು ಉಪಸ್ಥಿತರಿದ್ದರು.

# ಜೆಇಇ ಸಾಧಕರಿಗೆ ಪ್ರತಿಭಾ ಪುರಸ್ಕಾರ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲದ ಅನುಭವ ಮಂಟಪದಲ್ಲಿ ಶನಿವಾರ ಬೆಳಿಗ್ಗೆ 10 ಗಂಟೆಗೆ ಜೆಇಇ ಮೇನ್ಸ್ ಮತ್ತು ಅಡ್ವಾನ್ಸ್ಡ ಸಾಧಕ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ ಸಮಾರಂಭ ಜರುಗಲಿದೆ. ಬೆಂಗಳೂರಿನ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಹೆಚ್.ಪ್ರಸನ್ನಕುಮಾರ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಬಸವಕಲ್ಯಾಣ ಅನುಭವ ಮಂಟಪದ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು, ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ ಎಂದು ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್‌ನ ಆಡಳಿತಾಧಿಕಾರಿ ಮೋಹನ ರೆಡ್ಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಗಡಿಯಲ್ಲಿ ಶೈಕ್ಷಣಿಕ ಕ್ರಾಂತಿ**

ಗಡಿಭಾಗದಲ್ಲಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಅವರು ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್‌ನಡಿ ಕಟ್ಟಿದ ವಿದ್ಯಾಸಂಸ್ಥೆ ಇಂದು ರಾಜ್ಯದಲ್ಲಿ ಬಹುದೊಡ್ಡ ಶೈಕ್ಷಣಿಕ ಕ್ರಾಂತಿ ಮಾಡುತ್ತಿದೆ.

ಡಾ.ಚನ್ನಬಸವ ಪಟ್ಟದ್ದೇವರು ಸ್ವಾತಂತ್ರ್ಯ ಪೂರ್ವದಲ್ಲಿ ಜ್ಞಾನ ದೀವಿಗೆಯನ್ನು ಹೊತ್ತಿಸಿದರು. ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಬರಿಗೈಯಿಂದ 1992 ರಲ್ಲಿ ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್ ಸ್ಥಾಪಿಸುವ ಮೂಲಕ ಕಲ್ಯಾಣ ಕರ್ನಾಟಕದ ಗಡಿಭಾಗದಲ್ಲಿ ಅರಿವಿನ ಕಾವೇರಿಯನ್ನು ಹರಿಸಿದ್ದಾರೆ. ಪೂಜ್ಯರು ಸ್ವತಃ ತಾವೇ ಶಿಕ್ಷಕರಾಗಿ, ಮುಖ್ಯಗುರುಗಳಾಗಿ ಮಕ್ಕಳ ಸರ್ವಾಂಗೀಣ ಅಭಿವೃದ್ಧಿಯ ಭದ್ರಬುನಾದಿಯನ್ನು ಹಾಕಿದ್ದಾರೆ. ಕೇವಲ 40 ಮಕ್ಕಳು ಹಾಗೂ 4 ಜನ ಶಿಕ್ಷಕ ಸಿಬ್ಬಂದಿಯರಿಂದ ಪ್ರಾರಂಭ ಮಾಡಿರುವ ಈ ಸಂಸ್ಥೆ ಇಂದು 60 ಅಂಗಸಂಸ್ಥೆ ಹೊಂದಿದ್ದು, ಸುಮಾರು 2000 ಶಿಕ್ಷಕ, ಶಿಕ್ಷಕೇತರ ಸಿಬ್ಬಂದಿ ಹಾಗೂ 20 ಸಾವಿರಕ್ಕೂ ಹೆಚ್ಚು ಮಕ್ಕಳು ವ್ಯಾಸಂಗ ಮಾಡುವ ಮಟ್ಟಕ್ಕೆ ಬೆಳೆಸಿರುವ ಶ್ರೇಯಸ್ಸು ಪೂಜ್ಯರಿಗೆ ಸಲ್ಲುತ್ತದೆ. ಬೀದರ ಜಿಲ್ಲೆಯ ಭಾಲ್ಕಿ, ಔರಾದ, ಕಮಲನಗರ, ಹುಮನಾಬಾದ ತಾಲೂಕುಗಳ ಗ್ರಾಮೀಣ ಭಾಗದಲ್ಲಿ ಎಲ್.ಕೆ.ಜಿ. ಯಿಂದ ಪಿ.ಯು.ಸಿ. ವರೆಗೆ ಶಾಲಾ ಮತ್ತು ಕಾಲೇಜುಗಳನ್ನು ಪ್ರಾರಂಭಿಸಿ, ಗ್ರಾಮೀಣ ಭಾಗದ ಮಕ್ಕಳ ವಿದ್ಯಾಭ್ಯಾಸಕ್ಕೆ ಅನುಕೂಲ ಮಾಡಿಕೊಟ್ಟಿದ್ದಾರೆ.

2016 ರ ಶೈಕ್ಷಣಿಕ ಸಾಲಿನಲ್ಲಿ ಬಸವಕಲ್ಯಾಣ ತಾಲೂಕಿನ ಗೊಗ್ಗಾವೆಂಬ ಕುಗ್ರಾಮದಿಂದ ಬಂದ ಕು.ಸಂದೀಪ ಎಂಬ ವಿದ್ಯಾರ್ಥಿ ಐಐಟಿಗೆ ಪ್ರವೇಶ ಪಡೆದ ಮೊದಲ ವಿದ್ಯಾರ್ಥಿಯಾಗಿದ್ದನು. ಅವನ ಸಾಧನೆ ಗಮನಿಸಿ ಅಂದಿನ ಬೀದರ ಜಿಲ್ಲಾಧಿಕಾರಿ ಸಮೀರ ಶುಕ್ಲಾ ಅವರು ಭೇಟಿ ನೀಡಿದರು. ಅವನ ಮನೆ ತಂದೆ-ತಾಯಿ ಪರಿಸ್ಥಿತಿಯನ್ನು ನೋಡಿ ಆಶ್ಚರ್ಯ ಉಂಟಾಯಿತು. ಇದು ಬಡತನದಲ್ಲಿ ಅರಳಿದ ಪ್ರತಿಭೆ ಎಂದು ಅತ್ಯಂತ ಹೆಮ್ಮೆಯಿಂದ ಗೌರವಿಸಿದರು.

ಪ್ರಸಕ್ತ ಸಾಲಿನಲ್ಲಿ ಜೆಇಇ ಅಡ್ವಾನ್ಸ್ಡ ಅಂಗವಿಕಲ ಕೋಟದಾಡಿ ವಿಶ್ವರಾಜ ಎಂಬ ವಿದ್ಯಾರ್ಥಿ ದೇಶದಲ್ಲಿಯೇ ಮೊದಲನೆಯ ರ್‍ಯಾಂಕ್ ಬಂದಿರುವುದು ನಾಡಿನ ಇತಿಹಾಸದಲ್ಲಿ ಸುವರ್ಣಾಕ್ಷರಗಳಿಂದ ಬರೆಯುವ ಸಾಧನೆಯಾಗಿದೆ. ಐಐಟಿ 16, ಎನ್‌ಐಟಿ 24, ಐಐಐಟಿ 11 ಮತ್ತು ಬಿಐಟಿಎಸ್‌ಗೆ 5 ವಿದ್ಯಾರ್ಥಿಗಳು ಪ್ರವೇಶ ಪಡೆದಿರುವುದು ಹೆಮ್ಮೆಯ ಸಾಧನೆಯಾಗಿದೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ಐಐಟಿ ಮತ್ತು ನೀಟ್ ಪರೀಕ್ಷೆಗೆ ಬೇಕಾಗುವ ತರಬೇತಿ ಹಾಗೂ ಸೂಕ್ತ ಮಾರ್ಗದರ್ಶನ ಮಾಡುವ ಈ ಭಾಗದಲ್ಲಿ ಶೈಕ್ಷಣಿಕ ಕೇಂದ್ರವಾಗಿ ಪರಮ ಪೂಜ್ಯರು ನಿರ್ಮಾಣ ಮಾಡುತ್ತಿದ್ದಾರೆ. ಪ್ರತಿ ದಿವಸ 14 ರಿಂದ 16 ಗಂಟೆವರೆಗೆ ಅಭ್ಯಾಸ ಮತ್ತು 24 ತಿಂಗಳು ನಿರಂತರ ಪ್ರಯತ್ನದ ಫಲವಾಗಿ ವಿದ್ಯಾರ್ಥಿಗಳು ರಾಷ್ಟ್ರಮಟ್ಟದಲ್ಲಿ ಸಾಧನೆ ಮಾಡುತಿದ್ದಾರೆ. ಇಲ್ಲಿಯವರೆಗೆ ಸುಮಾರು 150 ವಿದ್ಯಾರ್ಥಿ ಐಐಟಿ ಮತ್ತು ನೀಟ್ ಪ್ರವೇಶ ಪಡೆದಿರುವುದು ಹೆಮ್ಮೆಯ ಸಂಗತಿಯಾಗಿದೆ. 200 ವಿದ್ಯಾರ್ಥಿಗಳು ಐಐಟಿ ಕಾಲೇಜುಗಳಲ್ಲಿ ಪ್ರವೇಶ ಪಡೆದು ದೇಶ ವಿದೇಶಗಳಲ್ಲಿ ತಂತ್ರಜ್ಞಾನ ವಿಭಾಗದಲ್ಲಿ ಸೇವೆಗೈಯುತ್ತಿದ್ದಾರೆ.

ಈ ಅಪೂರ್ವ ಸಾಧನೆಗೆ ಉಭಯ ಪೂಜ್ಯರ ದೂರದೃಷ್ಟಿಯ ಮಾರ್ಗದರ್ಶನ, ಪ್ರಾಚಾರ್ಯರು ಮತ್ತು ಉಪನ್ಯಾಸಕರ ಬೋಧನೆ, ವಿದ್ಯಾರ್ಥಿಗಳ ಪರಿಶ್ರಮ ಮತ್ತು ಪಾಲಕರ ಸಹಕಾರ ಇವುಗಳ ಸಂಗಮದಿಂದ ಕಲ್ಯಾಣ ಕರ್ನಾಟಕ ಭಾಗದ ಹಿರಿಮೆ ಹೆಚ್ಚಾಗಿದೆ. ಮಹಾರಾಷ್ಟ್ರ, ತೆಲಂಗಾಣ ಗಡಿಭಾಗದಲ್ಲಿ ಶ್ರೀ ಚನ್ನಬಸವೇಶ್ವರ ಗುರುಕುಲ ಮಾಡುತ್ತಿರುವ ಶೈಕ್ಷಣಿಕ ಸಾಧನೆಯಿಂದ ಕಲ್ಯಾಣ ಕರ್ನಾಟಕ ದೇಶದ ನಕಾಶೆಯಲ್ಲಿ ಗೌರವದ ಸ್ಥಾನ ಪಡೆದಿರುವುದು ಸಮಸ್ತ ಕನ್ನಡಿಗರಿಗೆ ಹೆಮ್ಮೆಯ ಸಂಗತಿಯಾಗಿದೆ.

## ಕಾರ್ಯನಿರ್ವಾಹಕ ನಿರ್ದೇಶಕರ ಪರಿಚಯ



**ರಾಜ್ಯದ ಚಿಕ್ಕಮಗಳೂರು ಜಿಲ್ಲೆಯ ಕಬ್ಬಿಗರಹಳ್ಳಿ ಗ್ರಾಮದಲ್ಲಿ 1981ರ ಮೇ 15 ರಂದು ಜನಿಸಿದ ಹೆಚ್.ಪ್ರಸನ್ನಕುಮಾರ ಅವರು ಕುವೆಂಪು ವಿಶ್ವವಿದ್ಯಾಲಯದಿಂದ ಅರ್ಥಶಾಸ್ತ್ರ ವಿಷಯದಲ್ಲಿ ಎಂ.ಎ ಪದವಿ ಪೂರ್ಣಗೊಳಿಸಿದ್ದಾರೆ. 2006ರ ಬ್ಯಾಚ್‌ನ ಸಹಾಯಕ ಆಯುಕ್ತರಾಗಿರುವ ಇವರು 2008ರಲ್ಲಿ ಸೇವೆಗೆ ಸೇರ್ಪಡೆಗೊಂಡಿದ್ದಾರೆ. ಶರಣರ ಭೂಮಿ ಬಸವಕಲ್ಯಾಣದಲ್ಲಿ ಸುಮಾರು 3 ವರ್ಷಗಳ ಕಾಲ ಸಹಾಯಕ ಆಯುಕ್ತರಾಗಿ ಸೇವೆ ಸಲ್ಲಿಸಿದ್ದಾರೆ. ನಂತರ ಒಂದು ವರ್ಷ ಕೊಡಗು ಹೆಚ್ಚುವರಿ ಜಿಲ್ಲಾಧಿಕಾರಿಯಾಗಿ ಕಾರ್ಯನಿರ್ವಹಿಸಿದ್ದಾರೆ. ಕಾರವಾರ, ವಿಜಯಪೂರ ಜಿಲ್ಲೆಗಳಲ್ಲಿ ಸುಮಾರು 5 ವರ್ಷ ಹೆಚ್ಚುವರಿ ಜಿಲ್ಲಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ್ದಾರೆ. ಬಳಿಕ ನವದೆಹಲಿ ಕರ್ನಾಟಕ ಭವನದಲ್ಲಿ ಉಪನಿವಾಸಿ ಆಯುಕ್ತ, ಉಡುಪಿ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಂಗಳೂರು ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ನಿರ್ದೇಶಕರಾಗಿಯು ಕೂಡ ಸೇವೆ ಸಲ್ಲಿಸಿದ್ದಾರೆ. ಪ್ರಸ್ತುತ 2024ರ ಮೇ ತಿಂಗಳಿನಿಂದ ಕೆಇಎ ಕಾರ್ಯನಿರ್ವಾಹಕ ನಿರ್ದೇಶಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ.**

# ಹರಸೂರ್ ಗ್ರಾಮದಲ್ಲಿ ಆರೋಗ್ಯ ಶಿಬಿರ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಸ್ಥಳೀಯ ಕೆಬಿಎನ ವಿವಿಯ ಮೆಡಿಕಲ ನಿಕಾಯದ ಕಮ್ಯುನಿಟಿ ಮೆಡಿಸಿನ, ಬಯೋ ಕೆಮಿಸ್ಟ್ರಿ ಮತ್ತು ಫಾರೆನ್ಸಿಕ್ ಮೆಡಿಸಿನ ವಿಭಾಗಗಳಿಂದ ಗುರುವಾರ ಹರಸೂರ ಗ್ರಾಮದಲ್ಲಿ ಉಚಿತ ಆರೋಗ್ಯ ಶಿಬಿರ ವನ್ನು ಆಯೋಜಿಸಲಾಗಿತ್ತು.

ಮೆಡಿಕಲ್ ಡೀನ ಡಾ ಗುರು ಪ್ರಸಾದ ಈ ಮೊದಲು ಹರಸೂರ್ ಗ್ರಾಮದಲ್ಲಿ ಉಚಿತ ಕ್ಯಾಂಪ್ ಮಾಡಿದ್ದು, ಇವತ್ತು ಮತ್ತೇ ಈ ಗ್ರಾಮದಲ್ಲಿ ಇಂದು ಇನ್ನೊಮ್ಮೆ ಉಚಿತ ಕ್ಯಾಂಪ ಹಮ್ಮಿಕೊಳ್ಳಲಾಗಿದೆ. ಈ ಶಿಬಿರದ ಸದುಪಯೋಗ ಪಡಿಸಿಕೊಂಡು ಆರೋಗ್ಯಮಯ ಜೀವನವನ್ನು ನಡೆಸಿ ಎಂದರು. ಸಹಕಾರ ನೀಡಿ ಕ್ಯಾಂಪ ನಡೆಸಲು ಸ್ಥಳ ಅವಕಾಶ ಮಾಡಿಕೊಟ್ಟ ನಾಗಣ್ಣ ಹಾಗೂ ಊರಿನ ಮುಖಂಡರಿಗೆ ಧನ್ಯವಾದಗಳನ್ನು ತಿಳಿಸಿದರು.

ಡಾ ನಜಮುಸ್ಸಹರ ಕುಡಚಿ ಇವರು ವಿದ್ಯುತ



ಅಪಘಾತಗಳ ಬಗ್ಗೆ ಮಾತನಾಡಿ ವಿದ್ಯುತ ನಗೆಲ್ಲರಿಗೆ ಅತಿ ಅವಶ್ಯಕ ಇದೆ. ಹಳ್ಳಿಗಳಲ್ಲಿ ವಿದ್ಯುತ ತಂತಿಗಳನ್ನು ಸರಿಯಾಗಿ ಹಾಕಿರುವುದಿಲ್ಲ. ಸ್ವಿಚಗಳನ್ನು ಬಂದ ಮಾಡಬೇಕು. ಮಕ್ಕಳ ವಿಷಯದಲ್ಲಿ ಜಾಗೃತೆ ವಹಿಸಬೇಕು. ಮಳೆ ಬರುವಾಗ ಗಿಡದ ಕೆಳಗೆ ನಿಲ್ಲಬಾರದು. ಎಂದು ಹೇಳಿದರು.

ಬಯೋಕ್ಯಾಮಿಸ್ಟ್ರಿಮುಖಸ್ಥೆಡಾ ಸಬಾ ಮಧುಮೆಹದ ಬಗ್ಗೆ ತಿಳಿ ಹೇಳಿದರು. ಕ್ಯಾಂಪನಲ್ಲಿ ಮಧು ಮೆಹ ಕಂಡು ಬಂದರೆ, ಮತ್ತೊಮ್ಮೆ ಉಚಿತ ಟೆಸ್ಟ್ ಮಾಡಿ ರಿಪೋರ್ಟ್ ಕೊಡುತ್ತೇವೆ. ನಂತರ ಕೆಬಿಎನ್ ಆಸ್ಪತ್ರೆಯಲ್ಲಿ ಉಚಿತ ಚಿಕಿತ್ಸೆ ನೀಡಲಾಗುವುದು ಎಂದರು.

# ವಾಶ್‌ರೂಮ್ ಬಳಕೆಯ ಬಗ್ಗೆ ಅರಿವು ಅಗತ್ಯ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ದೇಶದ ಹೆಮ್ಮೆಯಾದ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ಅತ್ಯಾಧುನಿಕ ಸೌಲಭ್ಯಗಳ ಮೂಲಕ ಭಾರತೀಯ ರೈಲ್ವೆಯ ಹೊಸ ಮುಖವನ್ನು ಜಗತ್ತಿಗೆ ಪರಿಚಯಿಸಿದೆ. ಆದರೆ ಎಷ್ಟೇ ಆಧುನಿಕ ಸೌಲಭ್ಯಗಳನ್ನು ಕಲ್ಪಿಸಿದರೂ, ಅವುಗಳನ್ನು ಸರಿಯಾಗಿ ಬಳಸುವ ಸಂಸ್ಕೃತಿ ಇಲ್ಲದಿದ್ದರೆ ಆ ಸೌಲಭ್ಯಗಳ ಮೌಲ್ಯ ಕ್ಷೀಣಿಸುತ್ತದೆ. ಇತ್ತೀಚಿನ ದಿನಗಳಲ್ಲಿ ವಂದೇ ಭಾರತ್ ರೈಲುಗಳ ವಾಶ್‌ರೂಮ್‌ಗಳನ್ನು ಕೆಲವರು ಅಜಾಗರೂಕತೆಯಿಂದ ಬಳಸುತ್ತಿರುವುದರಿಂದ ಸ್ವಚ್ಛತೆ ಹದಗೆಡುವ ಘಟನೆಗಳು ಕಂಡುಬರುತ್ತಿವೆ. ಇದರಿಂದ ಇತರ ಪ್ರಯಾಣಿಕರು ತೊಂದರೆ ಅನುಭವಿಸುವಂತಾಗಿದೆ.



ಹೀಗಾಗಿ, ವಂದೇ ಭಾರತ್ ರೈಲಿನಲ್ಲಿ ಪ್ರಯಾಣ ಆರಂಭವಾಗುವ ಮುನ್ನವೇ ವಾಶ್‌ರೂಮ್ ಅನ್ನು ಹೇಗೆ ಬಳಸಬೇಕು, ಬಳಸಿದ ನಂತರ ಫ್ಲಷ್ ಮಾಡುವುದು, ನೀರನ್ನು ಮಿತವಾಗಿ ಬಳಸುವುದು, ಕಸವನ್ನು ಶೌಚಾಲಯದಲ್ಲಿ ಹಾಕದೆ ಕಸದ ಬುಟ್ಟಿಗೆ ಹಾಕುವುದು ಹಾಗೂ ಸ್ವಚ್ಛತೆಯನ್ನು ಕಾಪಾಡುವುದು ಹೇಗೆ ಎಂಬ ಕುರಿತು ಕನ್ನಡ ಸೇರಿದಂತೆ ಎಲ್ಲ ಪ್ರಾದೇಶಿಕ ಭಾಷೆಗಳಲ್ಲಿ ಧ್ವನಿ ಸಂದೇಶಗಳು, ಡಿಜಿಟಲ್ ಪರದೆಗಳು ಮತ್ತು ಮಾಹಿತಿ ಫಲಕಗಳ ಮೂಲಕ ಸ್ಪಷ್ಟ ಮಾರ್ಗದರ್ಶನ ನೀಡುವುದು ಅತ್ಯಗತ್ಯವಾಗಿದೆ.

ಸ್ವಚ್ಛ ಭಾರತ ಅಭಿಯಾನವು ಕೇವಲ ರಸ್ತೆ ಮತ್ತು ನಗರಗಳಿಗೆ ಮಾತ್ರ ಸೀಮಿತವಾಗಬಾರದು. ದೇಶದ ಅತ್ಯಾಧುನಿಕ ರೈಲುಗಳಲ್ಲಿಯೂ ಅದೇ ಮನೋಭಾವ ಪ್ರತಿಬಿಂಬಿಸಬೇಕು. ಸಾರ್ವಜನಿಕ ಆಸ್ತಿಯನ್ನು ಸಂರಕ್ಷಿಸುವುದು ಸರ್ಕಾರದಷ್ಟೇ ನಾಗರಿಕರ ಜವಾಬ್ದಾರಿಯೂ ಆಗಿದೆ. ರೈಲಿನಲ್ಲಿ ಸ್ವಚ್ಛತೆಯನ್ನು ಕಾಪಾಡುವ ಪ್ರತಿಯೊಬ್ಬ ಪ್ರಯಾಣಿಕ ದೇಶದ ಗೌರವವನ್ನು ಹೆಚ್ಚಿಸುವ ಕೆಲಸ ಮಾಡುತ್ತಾನೆ.

ಆದ್ದರಿಂದ ಭಾರತೀಯ ರೈಲ್ವೆ ಇಲಾಖೆ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ, ಪ್ರತಿಯೊಂದು ವಂದೇ ಭಾರತ್ ರೈಲಿನಲ್ಲೂ ವಾಶ್‌ರೂಮ್ ಬಳಕೆಯ ಕುರಿತು ಕಡ್ಡಾಯ ಜಾಗೃತಿ ಕಾರ್ಯಕ್ರಮ, ದೃಶ್ಯ-ಶ್ರವ್ಯ ಮಾಹಿತಿ ಹಾಗೂ ಸಿಬ್ಬಂದಿಯಿಂದ ಮಾರ್ಗದರ್ಶನ ವ್ಯವಸ್ಥೆ ಜಾರಿಗೊಳಿಸಬೇಕು.

# ಜಿಲ್ಲಾಧಿಕಾರಿಗಳ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಿದ ಬಿಜೆಪಿ..!

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

ರಾಜ್ಯದಲ್ಲಿ ಆಡಳಿತಾರೂಢ ಕಾಂಗ್ರೆಸ್ ಸರ್ಕಾರದ ದಬ್ಬಾಳಿಕೆ ನಿಯಂತ್ರಿಸುವುದು ಹಾಗೂ ರಾಷ್ಟ್ರದಲ್ಲಿ ಕೆಲವೊಂದು ದುಷ್ಟಶಕ್ತಿಗಳು ಕಾನೂನು-ಸುವ್ಯವಸ್ಥೆಯ ಹಾಳು ಮಾಡುತ್ತಿವೆ ಎಂದು ಭಾರತೀಯ ಜನತಾ ಪಕ್ಷದ ಕಾರ್ಯಕರ್ತರು ಶುಕ್ರವಾರ ಬೃಹತ್ ಪ್ರತಿಭಟನಾ ರ್‍ಯಾಲಿ ನಡೆಸಿದರು.

ನಗರದ ಡಾ.ಬಿ.ಆರ್. ಅಂಬೇಡ್ಕರ ವೃತ್ತದಿಂದ ಜಿಲ್ಲಾಧಿಕಾರಿಗಳ ಕಚೇರಿವರೆಗೆ ಕಾಂಗ್ರೆಸ್ ಸರ್ಕಾರದ ವಿರುದ್ಧ ಘೋಷಣೆ ಹಾಕಿ ಜಿಲ್ಲಾಧಿಕಾರಿ ಕಚೇರಿ ತಲುಪಿ, ರಾಜ್ಯದಲ್ಲಿ ಕಾನೂನು-ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಮುನ್ನಚ್ಚರಿಕೆ ಕ್ರಮ ಕೈಗೊಳ್ಳುವಂತೆ ಸರ್ಕಾರಕ್ಕೆ ನಿರ್ದೇಶನ ನೀಡುವಂತೆ ರಾಜ್ಯಪಾಲರಿಗೆ ಲಿಖಿತ ಮನವಿಯನ್ನು ಜಿಲ್ಲಾಧಿಕಾರಿಗಳ ಮುಖಾಂತರ ಸಲ್ಲಿಸಿದರು.




ಈ ವೇಳೆ ನೇತೃತ್ವವಹಿಸಿದ್ದ ಬಿಜೆಪಿ ಜಿಲ್ಲಾಧ್ಯಕ್ಷ ಗುರುಲಿಂಗಪ್ಪ ಅಂಗಡಿ ಮಾತನಾಡಿ, ಪ್ರಸ್ತುತ ಕರ್ನಾಟಕ ರಾಜ್ಯದಲ್ಲಿ ಅಧಿಕಾರದಲ್ಲಿರುವ ಕಾಂಗ್ರೆಸ್ ಸರ್ಕಾರದ ಆಡಳಿತದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಸಂಪೂರ್ಣವಾಗಿ ಕುಸಿದುಬಿದ್ದಿದ್ದು, ರಾಜ್ಯಾದ್ಯಂತ ಅಕ್ಷರಶಃ ಗೂಂಡಾ ರಾಜ್ಯ ಸೃಷ್ಟಿಯಾಗಿದೆ, ಆಡಳಿತ ಪಕ್ಷದ ಕುಮ್ಮಕ್ಕಿನಿಂದ ಸಮಾಜಘಾತುಕ ಶಕ್ತಿಗಳು ಮತ್ತು ಗೂಂಡಾಗಳು ರಾಜಾರೋಷವಾಗಿ ಮೆರೆಯುತ್ತಿದ್ದಾರೆ, ವಿರೋಧ ಪಕ್ಷದ ನಾಯಕರು, ನಮ್ಮ ಪಕ್ಷದ ಕಾರ್ಯಕರ್ತರು ಹಾಗೂ ಸರ್ಕಾರದ ಜನವಿರೋಧಿ ನೀತಿಗಳನ್ನು ಪ್ರಶ್ನಿಸುವ ಸಾರ್ವಜನಿಕರ ಮೇಲೆ ನಿರಂತರ ದೌರ್ಜನ್ಯ, ಬೆದರಿಕೆ ಹಾಗೂ ಹಲ್ಲೆಗಳು ನಡೆಯುತ್ತಿವೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಸಾಬು ಮಾಶ್ಯಾಳ, ಮಳುಗೌಡ ಪಾಟೀಲ, ಈರಣ್ಣ ರಾವೂರ, ಕಾಸುಗೌಡ ಬಿರಾದಾರ, ಸಂಜೀವ ಐಹೊಳೆ, ಉಮೇಶ ಕಾರಜೋಳ, ಸುರೇಶ ಬಿರಾದಾರ, ಗೋಪಾಲ ಘಟಕಾಂಬಳೆ, ವಿವೇಕಾನಂದ ಡಬ್ಬಿ, ಮಹೇಂದ್ರಕುಮಾರ ನಾಯಕ, ಭೀಮಾಶಂಕರ ಹದನೂರ, ಉಮೇಶ ಕೋಳಕೂರ, ಕೃಷ್ಣಾ ಗುನ್ನಾಳಕರ, ಚಿದಾನಂದ ಚಲವಾದಿ, ಮಲ್ಲಿಕಾರ್ಜುನ ಜೋಗೂರ, ಸ್ವಪ್ನಾ ಕಣಮುಚನಾಳ, ರಾಹುಲ ಜಾಧವ, ಮಹೇಶ ಒಡೆಯರ ಸೇರಿದಂತೆ ಅನೇಕ ಕಾರ್ಯಕರ್ತರು ಪಾಲ್ಗೊಂಡಿದ್ದರು.

# ಒಂದೇ ದಿನ, ಒಂದೇ ಸ್ಥಳದಲ್ಲಿ ಕರ್ನಾಟಕದ ಹೊಸ ಇತಿಹಾಸ

• ಮಲ್ಲಮ್ಮ ನುಡಿ ವಾರ್ತೆ ಚಿಕ್ಕಬಳ್ಳಾಪುರ

ರಕ್ತಕ್ಕೆ ಪರ್ಯಾಯವೇ ಇಲ್ಲ. ಅಪಘಾತ, ಹೆರಿಗೆ, ಶಸ್ತ್ರಚಿಕಿತ್ಸೆ, ತುರ್ತು ಚಿಕಿತ್ಸೆಯ ಕ್ಷಣಗಳಲ್ಲಿ ಜೀವ ಉಳಿಸುವ ಏಕೈಕ ಆಶಾಕಿರಣ ಸ್ವಯಂಪ್ರೇರಿತ ರಕ್ತದಾನ. ಅಂತಹ ಮಾನವೀಯ ಸೇವೆಗೆ ಚಿಕ್ಕಬಳ್ಳಾಪುರ ಗುರುವಾರ ಸಾಕ್ಷಿಯಾಯಿತು. ಕೆ.ವಿ ಮತ್ತು ಪಂಚಗಿರಿ ಶಿಕ್ಷಣ ದತ್ತಿಗಳ 30ನೇ ದತ್ತಿ ದಿನಾಚರಣೆ ಅಂಗವಾಗಿ ನಡೆದ ಸ್ವಯಂಪ್ರೇರಿತ ರಕ್ತದಾನ ಶಿಬಿರದಲ್ಲಿ 4237 ಯೂನಿಟ್ ರಕ್ತ ಸಂಗ್ರಹವಾಗುವ ಮೂಲಕ ಕರ್ನಾಟಕದಲ್ಲೇ ಹೊಸ ಇತಿಹಾಸ ನಿರ್ಮಾಣವಾಯಿತು.

ನಗರದ ಸಿವಿವಿ ಕ್ಯಾಂಪಸ್‌ನ ಒಳಾಂಗಣ ಕ್ರೀಡಾಂಗಣದಲ್ಲಿ ಬೆಳಿಗ್ಗೆ 7.30ರಿಂದ ರಾತ್ರಿ 9 ಗಂಟೆಯವರೆಗೆ ನಿರಂತರವಾಗಿ ನಡೆದ ಶಿಬಿರದಲ್ಲಿ ಸಾವಿರಾರು ಯುವಕರು, ಮಹಿಳೆಯರು ಹಾಗೂ ವಿವಿಧ ಸಂಘ-ಸಂಸ್ಥೆಗಳ ಸದಸ್ಯರು ಸಾಲುಗಟ್ಟಿ ರಕ್ತದಾನ ಮಾಡಿದರು. ಒಬ್ಬೊಬ್ಬ ರಕ್ತದಾನಿಯ ಕೈಯಿಂದ ಹರಿದ ರಕ್ತದ ಹನಿ, ನಾಳೆ ಯಾರದೋ ಜೀವ ಉಳಿಸುವ ಆಶಾಕಿರಣವಾಗಿ ಪರಿಣಮಿಸಲಿದೆ ಎಂಬ ಮಾನವೀಯ ಸಂದೇಶ ಶಿಬಿರದ ಕೇಂದ್ರಬಿಂದುವಾಗಿತ್ತು.

ಜಿಲ್ಲಾಪ್ರಧಾನ ಮತ್ತು ಸತ್ರನ್ಯಾಯಾಧೀಶ ರಾಮಲಿಂಗೇಗೌಡ



ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿ, "ರಕ್ತದಾನ ಪ್ರಕೃತಿಯೇ ಮಾನವನಿಗೆ ನೀಡಿರುವ ಅಪರೂಪದ ವರ. ಎಷ್ಟೇ ವಿಜ್ಞಾನ, ವೈದ್ಯಕೀಯ ಕ್ಷೇತ್ರ ಅಭಿವೃದ್ಧಿ ಹೊಂದಿದರೂ ರಕ್ತವನ್ನು ಕೃತಕವಾಗಿ ಸೃಷ್ಟಿಸಲು ಸಾಧ್ಯವಿಲ್ಲ. ಆದ್ದರಿಂದ ರಕ್ತದಾನವೇ ಜೀವದಾನ. ಕಳೆದ 30 ವರ್ಷಗಳಿಂದ ನಿರಂತರವಾಗಿ ಇಂತಹ ಜನೋಪಯೋಗಿ ಕಾರ್ಯ ನಡೆಸುತ್ತಿರುವ ಕೆ.ವಿ. ನವೀನ್ ಕಿರಣ್ ಹಾಗೂ ಅವರ ಕುಟುಂಬದ ಸೇವೆ ಸಮಾಜಕ್ಕೆ ಮಾದರಿಯಾಗಿದೆ. ಇಂತಹ ಪುಣ್ಯದ ಕಾರ್ಯಕ್ರಮವನ್ನು ಉದ್ಘಾಟಿಸುವ ಅವಕಾಶ ದೊರೆತಿರುವುದು ನನ್ನ ಪೂರ್ವಜನ್ಮದ ಪುಣ್ಯ" ಎಂದು ಹೇಳಿದರು.

**4237 ಯೂನಿಟ್-ದಾಖಲೆಯಷ್ಟೇ ಅಲ್ಲ, ಸಾವಿರಾರು ಜೀವಗಳ ಆಶಾಕಿರಣ:** ಈ ಶಿಬಿರದಲ್ಲಿ 4237 ಯೂನಿಟ್ ರಕ್ತ ಸಂಗ್ರಹವಾಗಿದ್ದು, ಎರಡು ವರ್ಷಗಳ ಹಿಂದೆ ಚಿಂತಾಮಣಿಯಲ್ಲಿ ನಡೆದ 3246 ಯೂನಿಟ್ ಸಂಗ್ರಹದ ದಾಖಲೆಯನ್ನು ಹಿಂದಿಕ್ಕಿದೆ. ಈ ಸಾಧನೆಯೊಂದಿಗೆ ಕರ್ನಾಟಕ ಬುಕ್ ಆಫ್ ರೆಕಾರ್ಡ್ಸ್ ಹಾಗೂ ಇಂಡಿಯಾ ಬುಕ್ ಆಫ್ ರೆಕಾರ್ಡ್ಸ್‌ಲ್ಲಿ ಹೊಸ ದಾಖಲೆ ನಿರ್ಮಾಣವಾಗಿದೆ.

**4237 ಯೂನಿಟ್‌ಗಳ ಜೀವಧಾರೆ**

ದತ್ತಿ ಅಧ್ಯಕ್ಷ ಕೆ.ವಿ.ನವೀನ್ ಕಿರಣ್ ಮಾತನಾಡಿ, "ದಾಖಲೆ ಮಾಡುವುದು ಸುಲಭವಾಗಿರಬಹುದು; ಆದರೆ ನಮ್ಮ ಸಂಸ್ಥೆ ನಿರ್ಮಿಸಿದ ದಾಖಲೆಯನ್ನು ನಾವೇ ಮುರಿಯುವುದು ಅತ್ಯಂತ ಕಷ್ಟ. ಈ ಸಾಧನೆ ನನ್ನದು ಅಲ್ಲ, ಸಾವಿರಾರು ಸ್ವಯಂಪ್ರೇರಿತ ರಕ್ತದಾನಿಗಳದ್ದು. ದತ್ತಿ ದಿನಾಚರಣೆ ಎಂದರೆ ರಕ್ತದಾನ ಎಂಬ ಸಂಸ್ಕೃತಿ ರೂಪುಗೊಂಡಿರುವುದು ನಮ್ಮ ದೊಡ್ಡ ಹೆಮ್ಮೆ. ಈ ಮಾನವೀಯ ಪರಂಪರೆಯನ್ನು ಮುಂದಿನ ಪೀಳಿಗೆಗೂ ಕೊಂಡೊಯ್ಯುತ್ತೇವೆ" ಎಂದು ಹೇಳಿದರು.

ಭಾರತೀಯ ರೆಡ್ ಕ್ರಾಸ್ ಸಂಸ್ಥೆ (ಚಿಕ್ಕಬಳ್ಳಾಪುರ, ಬೆಂಗಳೂರು), ರೋಟರಿ ರಕ್ತನಿಧಿ ನಾಗವಾರ, ಸುರಕ್ಷಾ ರಕ್ತನಿಧಿ, ಸತ್ಯಸಾಯಿ ಆಸ್ಪತ್ರೆ ಮುದ್ದೇನಹಳ್ಳಿ, ಲಯನ್ಸ್ ರಕ್ತನಿಧಿ ಯಲಹಂಕ, ರಾಷ್ಟ್ರೋತ್ಥಾನ ರಕ್ತನಿಧಿ, ಎಸ್.ಎನ್.ಆರ್. ರಕ್ತನಿಧಿ ಕೋಲಾರ ಹಾಗೂ ಯೂನಿವರ್ಸಲ್ ರಕ್ತನಿಧಿ ಸೇರಿದಂತೆ ಹಲವು ರಕ್ತನಿಧಿ ಸಂಸ್ಥೆಗಳ ಸಹಯೋಗದಲ್ಲಿ ಶಿಬಿರ ಯಶಸ್ವಿಯಾಯಿತು. ಪಕ್ಷಾತೀತವಾಗಿ ವಿವಿಧ ರಾಜಕೀಯ, ಸಾಮಾಜಿಕ, ಸಾಹಿತ್ಯ ಹಾಗೂ ಉದ್ಯಮ ವಲಯದ ಗಣ್ಯರು ಭಾಗವಹಿಸಿ ರಕ್ತದಾನಿಗಳಿಗೆ ಶುಭ ಹಾರೈಸಿದರು. ರಕ್ತದಾನ ಮಾಡಿದ 5 ಸಾವಿರಕ್ಕೂ ಹೆಚ್ಚು ನಾಗರಿಕರಿಗೆ ಅಚ್ಚುಕಟ್ಟಾಗಿ ಉಪಾಹಾರ, ಊಟ, ನೀರು ಹಾಗೂ ಪಾನೀಯಗಳ ವ್ಯವಸ್ಥೆ ಮಾಡಲಾಗಿತ್ತು. ನೂರಾರು ಸ್ವಯಂಸೇವಕರು ಸೇವೆಯಲ್ಲಿ ತೊಡಗಿಸಿಕೊಂಡು ಇಡೀ ಕಾರ್ಯಕ್ರಮವನ್ನು ಮಾನವೀಯತೆಯ ಹಬ್ಬವನ್ನಾಗಿ ರೂಪಿಸಿದರು.

**ಮಾನವೀಯ ಸಂದೇಶ:** 4237 ಯೂನಿಟ್ ಎಂಬುದು ಕೇವಲ ಒಂದು ದಾಖಲೆ ಅಲ್ಲ; ಅದು 4237 ಜೀವಗಳಿಗೆ ಆಶಾಕಿರಣ. ಸಮಾಜದಲ್ಲಿ ಇಂತಹ ಸ್ವಯಂಪ್ರೇರಿತ ರಕ್ತದಾನ ಶಿಬಿರಗಳು ಹೆಚ್ಚಾದಷ್ಟು ಆಸ್ಪತ್ರೆಗಳಲ್ಲಿ ರಕ್ತದ ಕೊರತೆಯಿಂದ ಜೀವ ಕಳೆದುಕೊಳ್ಳುವವರ ಸಂಖ್ಯೆ ಕಡಿಮೆಯಾಗಲಿದೆ. ಚಿಕ್ಕಬಳ್ಳಾಪುರ ಈ ಸಾಧನೆಯ ಮೂಲಕ "ರಕ್ತದಾನವೇ ಮಹಾದಾನ" ಎಂಬ ಸಂದೇಶವನ್ನು ಇಡೀ ರಾಜ್ಯಕ್ಕೆ ಮತ್ತೊಮ್ಮೆ ಸಾರಿದೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000, Telephone Number:08483200222

PRGI NO. (RNINO:KARKAN/2011/48371)